ಸಂಪುಟ: 21, ಸಂಚಿಕೆ: 301, ಪುಟಗಳು: 8, ಗುರುವಾರ, 8 ಆಗಸ್ಟ್ 2024 RNI NO. KARKAN/2002/08054
epaper: www.sanjemugilu.com

ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ

ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ ₹3



ವೇಣು ಸಾರಥ್ಯದಲ್ಲಿ...

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of Newspapers | Tabloids | Magazines

### ಸುಭಾಷಿತ

ಸದ್ವರ್ತನೆ ಮತ್ತು ವಿನಯದ ಮಾತುಗಳು ಎಂಥದೇ ಕಠಿಣ ಪರಿಸ್ಥಿತಿಯಲ್ಲೂ ನಮ್ಮನ್ನು ಪಾರು ಮಾಡಬಲ್ಲವು.

। ಸರ್ ಜಾನ್ ವಾಂಬರ್ಗ್

### ಪಂಚಾಂಗ

(ಗುರುವಾರ 8, ಆಗಸ್ಟ್-2024)

- ಶ್ರೀ ಕ್ರೋಧಿನಾಮ ಸಂವತ್ಸರ,
- ದಕ್ಷಿಣಾಯಣ, ವರ್ಷ ಋತು,
- ಶ್ರಾವಣ ಮಾಸ, ಶುಕ್ಲ ಪಕ್ಷ,
- ಚತುರ್ಥಿ, ಗುರುವಾರ,
- ಉತ್ತರಪಾಲ್ಗುಣಿ ನಕ್ಷತ್ರ
- ರಾಹುಕಾಲ : 02:03 ರಿಂದ 03:37
- ಗುಳಿಕಕಾಲ : 09:20 ರಿಂದ 10:54
- ಯಮಗಂಡಕಾಲ : 06:11 ರಿಂದ 07:46

## ಸಂಕ್ಷಿಪ್ತ ಸುದ್ದಿ

### ಇಬ್ಬರು ಇನ್‌ಸ್ಪೆಕ್ಟರ್‌ಗಳ ಬಳಿಕ ಹೆಡ್‌ಮಾಸ್ಟರ್ ಶಾಲೆಯಲ್ಲೇ ಆತ್ಮಹತ್ಯೆ

**ವಿಜಯಪುರ:** ಸರಕಾರಿ ಅಧಿಕಾರಿಗಳ ಸಾಲು ಸಾಲು ಆತ್ಮಹತ್ಯೆಗಳು ರಾಜ್ಯದಲ್ಲಿ ಕಳವಳ ಮೂಡಿಸುತ್ತಿವೆ. ಇದೀಗ ವಿಜಯಪುರದಲ್ಲಿ ಮುಖ್ಯೋಪಾಧ್ಯಾಯರೊಬ್ಬರು ಶಾಲೆಯ ಸ್ಟಾಫ್ ರೂಂನಲ್ಲೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರ ಕಿರುಕುಳದ ಬಗ್ಗೆ ದೂರಲಾಗಿದೆ.



ವಿಜಯಪುರ ಜಿಲ್ಲೆ ಬಸವನಬಾಗೇವಾಡಿ ತಾಲೂಕಿನ ನಾಗೂರು ಗ್ರಾಮದ ಕನ್ನಡ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಘಟನೆ ನಡೆದಿದೆ. ಶಾಲೆಯ ಸ್ಟಾಫ್ ರೂಮಿನಲ್ಲಿ ನೇಣು ಬಿಗಿದ ಸ್ಥಿತಿಯಲ್ಲಿ ಮುಖ್ಯೋಪಾಧ್ಯಾಯ ಸಿ.ಎಸ್ ಹಡಪದ ಅವರ ಶವ ಪತ್ತೆಯಾಗಿದೆ. ಇವರು ಕಳೆದ ಎರಡು ವರ್ಷದಿಂದ ನಾಗೂರು ಶಾಲೆಯಲ್ಲಿ ಸೇವೆ ಸಲ್ಲಿಸುತ್ತಿದ್ದರು. ಪುಟ 2

### ಬೆಳಗ್ಗೆ ಮದುವೆ, ಮಧ್ಯಾಹ್ನ ಮಚ್ಚಿನಿಂದ ಮಾರಾಮಾರಿ.. ವಧು ಸಾವು, ವರ ಗಂಭೀರ!



**ಕೋಲಾರ:** ಪರಸ್ಪರ ಪ್ರೀತಿಸಿ ಒಪ್ಪಿ ಬೆಳಗ್ಗೆ ಮದುವೆಯಾದ ನವಜೋಡಿ, ಅದೇ ದಿನ ಮಧ್ಯಾಹ್ನ ಮಾರಕಾಸ್ತ್ರಗಳಿಂದ ಹೊಡೆದಾಡಿಕೊಂಡ ಪರಿಣಾಮ ನವವಧು ಸಾವನ್ನಪ್ಪಿದ್ದಾಳೆ. ಮದುಮಗನ ಸ್ಥಿತಿ ಚಿಂತಾಜನಕವಾಗಿದೆ.

ಕೋಲಾರ ಜಿಲ್ಲೆಯ ಕೆಜಿಎಫ್ ತಾಲ್ಲೂಕಿನ ಚಂಬರಸನಹಳ್ಳಿಯಲ್ಲಿ ಘಟನೆ ನಡೆದಿದೆ. ಆಂಧ್ರದ ಬೈನಪಲ್ಲಿ ಗ್ರಾಮದ ಲಿಖಿತಾ ಶ್ರೀಮೃತಪಟ್ಟಿದ್ದಾಳೆ. ಚಂಬರಸನಹಳ್ಳಿಯ ನವೀನ್ ಸ್ಥಿತಿ ಗಂಭೀರವಾಗಿದೆ. ಪುಟ 2

## ಬಾಂಗ್ಲಾದೇಶ ಅನಿಶ್ಚಿತತೆಯಿಂದ ಕರ್ನಾಟಕದ ಗಾರ್ಮೆಂಟ್ಸ್ ಕ್ಷೇತ್ರಕ್ಕೆ ಪ್ರಯೋಜನ!

**ಬೆಂಗಳೂರು:** ಬಾಂಗ್ಲಾದೇಶದ ರಾಜಕೀಯ ಅನಿಶ್ಚಿತತೆ, ಅಶಾಂತಿಯು ಭಾರತದ ಗಾರ್ಮೆಂಟ್ಸ್ ಕ್ಷೇತ್ರಕ್ಕೆ, ಅದರಲ್ಲೂ ಕರ್ನಾಟಕಕ್ಕೆ ಪ್ರಯೋಜನವನ್ನು ಉಂಟುಮಾಡಲಿದೆ. ಈ ಪರಿಸ್ಥಿತಿಯ ಪ್ರಯೋಜನ ಪಡೆಯಲು ಸರ್ಕಾರ ಕ್ರಮಗಳನ್ನು ತೆಗೆದುಕೊಳ್ಳುತ್ತದೆ ಎಂದು ಕರ್ನಾಟಕ ಜವಳಿ ಸಚಿವ ಶಿವಾನಂದ್ ಪಾಟೀಲ್ ಬುಧವಾರ ಹೇಳಿದ್ದಾರೆ. ರಾಷ್ಟ್ರೀಯ ಕೈಮಗ್ಗ ದಿನದ ಅಂಗವಾಗಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಬಾಂಗ್ಲಾದೇಶದ ಬೆಳವಣಿಗೆಗಳು ಅಲ್ಲಿನ ಗಾರ್ಮೆಂಟ್ಸ್ ಉದ್ಯಮಕ್ಕೆ ಅಡ್ಡಿಯಾಗುವುದು ಖಚಿತ. ಇದು ನಮಗೆ ಉತ್ತಮ ಅವಕಾಶವಾಗಿದ್ದು, ರಾಜ್ಯವು ಈ ಅವಕಾಶವನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದು ಹೇಳಿದ್ದಾರೆ. ಪುಟ 2



## ಸಹಾಯಕ ಲೋಕೋ ಪೈಲಟ್ ಮುಂಬಡ್ತಿ ಪರೀಕ್ಷೆ ಕನ್ನಡದಲ್ಲೂ ಬರೆಯಬಹುದು

**ಬೆಂಗಳೂರು:** ಸಹಾಯಕ ಲೋಕೋ ಪೈಲಟ್ ಮುಂಬಡ್ತಿ ಪರೀಕ್ಷೆಯನ್ನು ಕನ್ನಡದಲ್ಲೂ ಬರೆಯಲು ನೈಋತ್ಯ ರೈಲ್ವೆ ಆದೇಶ ಪ್ರಕಟಿಸಿದೆ.

ರೈಲ್ವೇ ನೇಮಕಾತಿಗೆ ಸಂಬಂಧಿಸಿದ ಪರೀಕ್ಷೆಗಳನ್ನು ಹಿಂದಿ ಹಾಗೂ ಇಂಗ್ಲಿಷ್ ಭಾಷೆಗಳಲ್ಲಿ ಮಾತ್ರ ಬರೆಯಬೇಕಿತ್ತು. ಇದಕ್ಕೆ ವ್ಯಾಪಕ ಖಂಡನೆ ವ್ಯಕ್ತವಾದ ಬಳಿಕ ಕೇಂದ್ರ ರೈಲ್ವೇ ಸಚಿವ ಸೋಮಣ್ಣ ಕನ್ನಡದಲ್ಲಿ ಪರೀಕ್ಷೆ ಬರೆಯುವುದಕ್ಕೆ ಅವಕಾಶ ಮಾಡಿಕೊಡುವುದಾಗಿ ಕಳೆದ ಬಾರಿ ಸುದ್ದಿಗೋಷ್ಠಿಯಲ್ಲಿ ತಿಳಿಸಿದ್ದರು. ವಿ. ಸೋಮಣ್ಣ ಅವರ ಸೂಚನೆ ಮೇರೆಗೆ ಕನ್ನಡದಲ್ಲಿ ಪರೀಕ್ಷೆ ಬರೆಯಲು ಅವಕಾಶ ಮಾಡಿಕೊಡಲಾಗಿದೆ.

ಸಾಮಾನ್ಯ ವಿಭಾಗೀಯ ಸ್ಪರ್ಧಾತ್ಮಕ ಸಹಾಯಕ ಲೋಕೋಪೈಲಟ್ ಪರೀಕ್ಷೆಯನ್ನು ಕನ್ನಡದಲ್ಲಿ ನಡೆಸುವ ಕುರಿತು ನೈಋತ್ಯ ರೈಲ್ವೆ ವಲಯ ಅಧಿಕೃತ ಆದೇಶ ಹೊರಡಿಸಿದೆ.



ಈ ಹಿಂದೆ ಹಿಂದಿ ಮತ್ತು ಇಂಗ್ಲಿಷ್ ಎರಡರಲ್ಲಿ ಮಾತ್ರ ಪರೀಕ್ಷೆ ಬರೆಯಲು ಇತ್ತು. ಹಾಲ್ ಟಿಕೆಟ್ ನಲ್ಲಿ ಎರಡು ಭಾಷೆ ಮಾತ್ರ ಆಯ್ಕೆಗಳನ್ನು ನೀಡಲಾಗಿತ್ತು. ಈಗ ಕನ್ನಡ, ಹಿಂದಿ, ಇಂಗ್ಲಿಷ್ ಮೂರು ಭಾಷೆಗಳಲ್ಲೂ ಪರೀಕ್ಷೆ ಬರೆಯಲು ಅವಕಾಶ ಇದೆ.

### ಸಿಎಂ ಸಿದ್ದರಾಮಯ್ಯ ಭೇಟಿಯಾದ ಬಿಕೆ ಹರಿಪ್ರಸಾದ್

# ಕೈ ಪಾಳಯದಲ್ಲಿ ಅಚ್ಚರಿ ಬೆಳವಣಿಗೆ

**ಬೆಂಗಳೂರು:** ಸದಾ ಸಿಎಂ ಸಿದ್ದರಾಮಯ್ಯರನ್ನು ಟೀಕಿಸುತ್ತಲೇ ಬಂದಿದ್ದ ಕಾಂಗ್ರೆಸ್ ಎಂಎಲ್ ಸಿ ಬಿಕೆ ಹರಿಪ್ರಸಾದ್ ದಿಢೀರಾಗಿ ಮುಖ್ಯಮಂತ್ರಿಗಳನ್ನು ಭೇಟಿಯಾಗಿ ಮಾತುಕತೆ ನಡೆಸಿದ್ದಾರೆ. ಒಂದು ವರ್ಷದ ನಂತರ ಉಭಯ ನಾಯಕರು ಭೇಟಿಯಾಗಿ ಸಮಾಲೋಚನೆ ನಡೆಸಿರುವುದು ಕಾಂಗ್ರೆಸ್ ಪಾಳಯದಲ್ಲಿ ಅಚ್ಚರಿಗೆ ಕಾರಣವಾಗಿದೆ. ಎಐಸಿಸಿ ನಾಯಕರು ರಾಜ್ಯಕ್ಕೆ ಭೇಟಿ ನೀಡಿ ವಾಪಸ್ ತೆರಳಿರುವ ಬೆನ್ನಲ್ಲೇ ಸಿಎಂ ಸರ್ಕಾರಿ ನಿವಾಸ ಕಾವೇರಿಗೆ ತೆರಳಿದ ಹರಿಪ್ರಸಾದ್, ಕ್ಲೋಸ್ ಡೋರ್ ಮೀಟಿಂಗ್ ನಡೆಸಿದ್ದಾರೆ.

ಸುಮಾರು ಒಂದು ಗಂಟೆ ಕಾಲ ಉಭಯ ನಾಯಕರು ಸುದೀರ್ಘ ಚರ್ಚೆ ನಡೆಸಿದ್ದಾರೆ. ವರ್ಷದ ಬಳಿಕ ಉಭಯ ನಾಯಕರು ಮುಖಾಮುಖಿಯಾಗಿ ಸುದೀರ್ಘ ಮಾತುಕತೆ ನಡೆಸಿರುವುದು ತೀವ್ರ ಕುತೂಹಲ ಮೂಡಿಸಿದೆ.

ಕಳೆದ ವಾರವಷ್ಟೇ ಹರಿಪ್ರಸಾದ್ ದೆಹಲಿಯಲ್ಲಿ ಹೈಕಮಾಂಡ್ ನಾಯಕರ ಜೊತೆಗೆ ಸುದೀರ್ಘ ಮಾತುಕತೆ ನಡೆಸಿದ್ದರು. ಪಕ್ಷ ಹಾಗೂ ಸರ್ಕಾರದ ಪ್ರಮುಖ ಬೆಳವಣಿಗೆಗೆ ಸಂಬಂಧಪಟ್ಟಂತೆ ದೆಹಲಿಯಲ್ಲಿ ಕೆಸಿ ವೇಣುಗೋಪಾಲ ಹಾಗೂ ಪ್ರಮುಖ ನಾಯಕರ ಭೇಟಿ ಮಾಡಿ ಮಾತುಕತೆ ನಡೆಸಿದ್ದರು.



ಮೈಸೂರಿನಲ್ಲಿ ಶುಕ್ರವಾರ ನಡೆಯಲಿರುವ ಜನಾಂದೋಲನ ಸಮಾವೇಶದ ವಿಚಾರವಾಗಿಯೂ ಇಬ್ಬರೂ ನಾಯಕರು ಮಾತುಕತೆ ನಡೆಸಿದ್ದಾರೆ ಎನ್ನಲಾಗುತ್ತಿದೆ.

ಅಹಿಂದ ವಿಚಾರವಾಗಿ ಹರಿಪ್ರಸಾದ್ ಅವರು ಸಿಎಂ ಸಿದ್ದರಾಮಯ್ಯ ವಿರುದ್ಧ ವಾಗ್ದಾಳಿ ನಡೆಸುತ್ತಲೇ ಬಂದಿದ್ದರು. ಲೋಕಸಭೆ ಚುನಾವಣೆ ಸಂದರ್ಭದಲ್ಲಿಯೂ ಸಿಎಂ ವಿರುದ್ಧ ಬಹಿರಂಗವಾಗಿ ವಾಗ್ದಾಳಿ ನಡೆಸಿದ್ದರು. ಸಿದ್ದರಾಮಯ್ಯ ಸಂಪುಟದಲ್ಲಿ ತಮಗೆ ಸಚಿವ ಸ್ಥಾನ ದೊರೆಯದೇ ಇರುವ ಬಗ್ಗೆಯೂ ಹರಿಪ್ರಸಾದ್ ಆಗಾಗ್ಗೆ ಅಸಮಾಧಾನ ವ್ಯಕ್ತಪಡಿಸುತ್ತಲೇ ಬಂದಿದ್ದರು.

## ಸರ್ವಾಧಿಕಾರ ಹೆಚ್ಚು ಕಾಲ ಉಳಿಯುವುದಿಲ್ಲ ಎಂಬುದಕ್ಕೆ ಬಾಂಗ್ಲಾದೇಶವೇ ಸಾಕ್ಷಿ: ಮುಫ್ತಿ

**ನವದೆಹಲಿ:** ಬಾಂಗ್ಲಾದೇಶದ ಪರಿಸ್ಥಿತಿಯಿಂದ ನಮ್ಮ ದೇಶವೂ ಪಾಠ ಕಲಿಯಬೇಕು, ಸರ್ವಾಧಿಕಾರ ಹೆಚ್ಚು ಕಾಲ ಉಳಿಯುವುದಿಲ್ಲ ಎಂಬುದಕ್ಕೆ ಬಾಂಗ್ಲಾದೇಶವೇ ಸಾಕ್ಷಿ ಎಂದು ಪಿಡಿಪಿ ಮುಖ್ಯಸ್ಥೆ ಮೆಹಬೂಬಾ ಮುಫ್ತಿ ಹೇಳಿದ್ದಾರೆ. ಬಾಂಗ್ಲಾದೇಶದ ಪರಿಸ್ಥಿತಿ ಭಾರತಕ್ಕೆ ಪಾಠವಾಗಿದೆ. ಯುವಕರನ್ನು ಗೋಡೆಗೆ ತಳ್ಳಬಾರದು ಎಂಬುದನ್ನು ಭಾರತ ಇದರಿಂದ ಕಲಿಯಬೇಕು ಎಂದು ಮೆಹಬೂಬಾ ಹೇಳಿದ್ದಾರೆ.

ಬಾಂಗ್ಲಾದೇಶದಲ್ಲಿ ಉದ್ಯೋಗ ಕೋಟಾ



ಕುರಿತು ವಾರಗಳ ಹಿಂಸಾತ್ಮಕ ಪ್ರತಿಭಟನೆಗಳ ನಂತರ ಬಾಂಗ್ಲಾದೇಶವು ಅನಿಶ್ಚಿತತೆಗೆ ಧುಮುಕಿದೆ. ಇದರಿಂದಾಗಿ ಶೇಖ್ ಹಸೀನಾ ಅವರು ಪ್ರಧಾನಿ ಹುದ್ದೆಗೆ ರಾಜೀನಾಮೆ ನೀಡಬೇಕಾಯಿತು ಮತ್ತು ದೇಶವನ್ನು ತೊರೆಯಬೇಕಾಯಿತು. ಢಾಕಾದಲ್ಲಿರುವ ಹಸೀನಾ ಅವರ ಅಧಿಕೃತ ನಿವಾಸಕ್ಕೆ ಸಾವಿರಾರು ಪ್ರತಿಭಟನಾಕಾರರು ನುಗ್ಗಿ ಅದನ್ನು ಲೂಟಿ ಮಾಡಿ ಧ್ವಂಸಗೊಳಿಸಿದರು. ಅಷ್ಟೇ ಅಲ್ಲ, ಹಸೀನಾ ಅವರ ನಿರ್ಗಮನದ ಸಂಭ್ರಮದಲ್ಲಿ ಅವರ ಪಕ್ಷದ ಕಚೇರಿಗಳಿಗೆ ಬೆಂಕಿ ಹಚ್ಚಲಾಗಿದೆ. ಶಿಕ್ಷಣ ಪಡೆದರೂ ಅವರನ್ನು ನಿಭಾಯಿಸುವಲ್ಲಿ ವಿಫಲರಾದರೆ ಬಾಂಗ್ಲಾದೇಶದಂತಹ ಪರಿಸ್ಥಿತಿ ಬರಬಹುದು. ಪುಟ 2

### ಬಾಂಗ್ಲಾದ ಮಧ್ಯಂತರ ಸರ್ಕಾರದ ಮುಖ್ಯಸ್ಥರಾಗಿ

## ಯೂನಸ್ ಇಂದು ಪ್ರಮಾಣ ವಚನ

**ಢಾಕಾ:** ಬಾಂಗ್ಲಾದೇಶದಲ್ಲಿನ ರಾಜಕೀಯ ಪ್ರಕ್ಷುಬ್ಧತೆಯ ಮಧ್ಯೆ ನೊಬೆಲ್ ಪ್ರಶಸ್ತಿ ಪುರಸ್ಕೃತ ಪ್ರೊಫೆಸರ್ ಮುಹಮ್ಮದ್ ಯೂನಸ್ ನೇತೃತ್ವದ ಮಧ್ಯಂತರ ಸರ್ಕಾರವು ಇಂದಿನಿಂದ ಜಾರಿಗೆ ಬರಲಿದೆ.

ಮುಹಮ್ಮದ್ ಯೂನಸ್ ಅವರು ಇಂದು ರಾತ್ರಿ 8:00 ಗಂಟೆಗೆ ಪ್ರಮಾಣ ವಚನ ಸ್ವೀಕರಿಸಲಿದ್ದಾರೆ ಎಂದು ಸೇನಾ ಮುಖ್ಯಸ್ಥ ಜನರಲ್ ವಾಕರ್ -ಉಜ್-ಝಮಾನ್ ಹೇಳಿದ್ದಾರೆ. ಮಧ್ಯಂತರ ಸರ್ಕಾರದ ಸಲಹಾ ಮಂಡಳಿಯು 15 ಸದಸ್ಯರನ್ನು ಒಳಗೊಂಡಿರಬಹುದು ಎಂದು ಸೇನಾ ಮುಖ್ಯಸ್ಥರು ಬಹಿರಂಗಪಡಿಸಿದ್ದಾರೆ.

ದೇಶಾದ್ಯಂತ ಪರಿಸ್ಥಿತಿ ಗಮನಾರ್ಹವಾಗಿ ಸುಧಾರಿಸುತ್ತಿದೆ. ಇದು ರಾಷ್ಟ್ರದ ಸ್ಥಿರತೆಗೆ ಧನಾತ್ಮಕ ಸಂಕೇತವಾಗಿದೆ ಇದೇ ಸಮಯದಲ್ಲಿ ತಿಳಿಸಿದ್ದಾರೆ. ಬಾಂಗ್ಲಾದೇಶದ ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್



ಅವರು ಮಂಗಳವಾರ ಸಂಸತ್ತನ್ನು ವಿಸರ್ಜಿಸಿದ್ದರು. ನೊಬೆಲ್ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನಸ್ ಅವರನ್ನು ಮಧ್ಯಂತರ ಸರ್ಕಾರದ ಮುಖ್ಯಸ್ಥರನ್ನಾಗಿ ನೇಮಿಸಿದ್ದರು.

ಅರ್ಥಶಾಸ್ತ್ರಜ್ಞ ಯೂನಸ್ ಅವರಿಗೆ 2006 ರಲ್ಲಿ ನೊಬೆಲ್ ಶಾಂತಿ ಪ್ರಶಸ್ತಿಯನ್ನು ಪಡೆದಿದ್ದಾರೆ. ಬಡವರಿಗೆ, ವಿಶೇಷವಾಗಿ ಮಹಿಳೆಯರಿಗೆ ಸಹಾಯ ಮಾಡಿದ ಹಿನ್ನೆಲೆಯಲ್ಲಿ ನೊಬೆಲ್ ಶಾಂತಿ ಪ್ರಶಸ್ತಿ ಸಿಕ್ಕಿದೆ. ಇವರು ಸ್ಥಾಪಿಸಿದ ಗ್ರಾಮೀಣ ಬ್ಯಾಂಕ್ ಸಹ ಇದೇ ಸಂದರ್ಭದಲ್ಲಿ ಬಹುಮಾನವನ್ನು ಪಡೆದುಕೊಂಡಿತು. ಯೂನಸ್ ವಿರುದ್ಧ ಭ್ರಷ್ಟಾಚಾರ ಸೇರಿ 150 ಕ್ಕೂ ಹೆಚ್ಚು ಪ್ರಕರಣಗಳಿದೆ. ಆರೋಪ ಸಾಬೀತಾದರೆ ಅವರನ್ನು ವರ್ಷಗಳವರೆಗೆ ಜೈಲಿನಲ್ಲಿಡಬಹುದು. ಆದರೆ ಯೂನಸ್ ಅವರು ಎಲ್ಲಾ ಆರೋಪಗಳನ್ನು ನಿರಾಕರಿಸುತ್ತಾ ಬಂದಿದ್ದಾರೆ.

### ಮುಂದೊಂದು ದಿನ ಮೋದಿ ನಿವಾಸಕ್ಕೆ ಜನ ನುಗ್ಗುತ್ತಾರೆ

## ನಾಲಗೆ ಹರಿಬಿಟ್ಟ ಕೈ ನಾಯಕ

**ಭೋಪಾಲ್:** ಬಾಂಗ್ಲಾದೇಶದಲ್ಲಿ ನಡೆದಂತೆ ಭಾರತದಲ್ಲೂ ಮುಂದೊಂದು ದಿನ ಪ್ರಧಾನಿ ನರೇಂದ್ರ ಮೋದಿ ನಿವಾಸಕ್ಕೆ ಜನರು ನುಗ್ಗುತ್ತಾರೆ ಎಂದು ಮಧ್ಯಪ್ರದೇಶ ಕಾಂಗ್ರೆಸ್‌ನ ಹಿರಿಯ ನಾಯಕ ಸಜ್ಜನ್ ಸಿಂಗ್ ವರ್ಮಾ ನಾಲಿಗೆ ಹರಿಬಿಟ್ಟಿದ್ದಾರೆ.

ಇಂದೋರ್ ಮುನ್ಸಿಪಲ್ ಕಾರ್ಪೊರೇಷನ್ ಆರೋಪದ ಹಗರಣಗಳ ವಿರುದ್ಧ ಪ್ರತಿಭಟನೆಯ ಸಂದರ್ಭದಲ್ಲಿ ಕಾಂಗ್ರೆಸ್ ಕಾರ್ಯಕರ್ತರನ್ನು ಉದ್ದೇಶಿಸಿ ಅವರು ಮಾತನಾಡಿದರು.

ನರೇಂದ್ರ ಮೋದಿಯವರನ್ನು ನೆನಪಿಸಿಕೊಳ್ಳಿ, ನಿಮ್ಮ ತಪ್ಪು ನೀತಿಗಳಿಂದ ಮುಂದೊಂದು ದಿನ ಜನರು ನಿಮ್ಮ



ನಿವಾಸವನ್ನು ಪ್ರವೇಶಿಸುತ್ತಾರೆ ಮತ್ತು ಅದನ್ನು ಆಕ್ರಮಿಸಿಕೊಳ್ಳುತ್ತಾರೆ. ಮೊದಲು ಶ್ರೀಲಂಕಾದಲ್ಲಿ ನಡೆಯಿತು. ನಂತರ ಬಾಂಗ್ಲಾದೇಶದಲ್ಲಿ ನಡೆದಿದೆ. ಈಗ ಭಾರತದ ಸರದಿ ಎಂದು ಭವಿಷ್ಯ ನುಡಿದಿದ್ದಾರೆ.

ಸಜ್ಜನ್ ಸಿಂಗ್ ವರ್ಮಾ ವಿವಾದಾತ್ಮಕ ಹೇಳಿಕೆಗೆ ಬಿಜೆಪಿ ಯುವ ಮೋರ್ಚಾ ಆಕ್ಷೇಪ ವ್ಯಕ್ತಪಡಿಸಿದ್ದು ಪೊಲೀಸ್ ಠಾಣೆಯಲ್ಲಿ ದೂರು ನೀಡಿದೆ. 140 ಕೋಟಿ ಭಾರತೀಯರ ಭಾವನೆಗೆ ದಕ್ಕೆ ಮಾಡಿದ್ದಾರೆ ಎಂದು ಆರೋಪಿಸಿ ಬಿಜೆವೈಎಂ ಇಂದೋರ್ ನಗರ ಅಧ್ಯಕ್ಷ ಸೌಗತ್ ಮಿಶ್ರಾ ದೂರು ನೀಡಿದ್ದಾರೆ.

ಕಾಂಗ್ರೆಸ್ ನಾಯಕ ಸಲ್ಮಾನ್ ಖುರ್ಷಿದ್ ಹೇಳಿಕೆಯ ನಂತರ ಈ ಹೇಳಿಕೆ ಬಂದಿದೆ. ಪುಟ 2

### ಶೀಘ್ರದಲ್ಲೇ ವೈದ್ಯಕೀಯ ಕಾಲೇಜುಗಳಿಗೆ 650 ಸಹಾಯಕ ಪ್ರಾಧ್ಯಾಪಕರು

## 1,200 ದಾದಿಯರ ನೇಮಕ

**ಬೆಂಗಳೂರು:** ವೈದ್ಯಕೀಯ ಶಿಕ್ಷಣ ಇಲಾಖೆಯಡಿ ಬರುವ ಗ್ರೂಪ್-ಎ ನ 650 ಸಹಾಯಕ ಪ್ರಾಧ್ಯಾಪಕರು ಮತ್ತು 1,200 ನರ್ಸ್‌ಗಳನ್ನು (ದಾದಿಯರು) ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ನೇಮಕ ಮಾಡಿಕೊಳ್ಳುವಂತೆ ವೈದ್ಯಕೀಯ ಶಿಕ್ಷಣ ಸಚಿವ ಡಾ.ಶರಣಪ್ರಕಾಶ್ ಪಾಟೀಲ್ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಈ ಸಂಬಂಧ ವೈದ್ಯಕೀಯ ಶಿಕ್ಷಣ ಇಲಾಖೆಯ ಅಧಿಕಾರಿಗಳ ಜೊತೆ ವಿಕಾಸಸೌಧದಲ್ಲಿ ಬುಧವಾರ ಮಹತ್ವದ ಸಭೆಯ ಅಧ್ಯಕ್ಷತೆ ವಹಿಸಿದ ಅವರು, ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆ ಕಾಪಾಡಿಕೊಳ್ಳುವ ಉದ್ದೇಶದಿಂದ ಸ್ಪರ್ಧಾತಕ ಪರೀಕ್ಷೆಯನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಭರ್ತಿ ಮಾಡಿಕೊಳ್ಳಬೇಕೆಂದು ವೈದ್ಯಕೀಯ ಶಿಕ್ಷಣ ಇಲಾಖೆಗೆ ಸ್ಪಷ್ಟ ನಿರ್ದೇಶನ ನೀಡಿದ್ದಾರೆ.

ಸಹಾಯಕ ಪ್ರಾಧ್ಯಾಪಕರು ಹಾಗೂ ನರ್ಸ್‌ಗಳ ನೇಮಕಾತಿ ಸಂದರ್ಭದಲ್ಲಿ ಭ್ರಷ್ಟಾಚಾರ ಮತ್ತು ಸ್ವಜನಪಕ್ಷಪಾತದ



ಆರೋಪದ ನಡುವೆ ವೈದ್ಯಕೀಯ ಕಾಲೇಜು ಸಂಸ್ಥೆಗಳ ಮುಖ್ಯಸ್ಥರು ನೇಮಕಾತಿ ನಡೆಸುತ್ತಿದ್ದ ಪ್ರಸ್ತುತ ನೇಮಕಾತಿ ಪ್ರಕ್ರಿಯೆಯಿಂದ ತೃಪ್ತರಾಗದ ಸಚಿವರು, ಮುಂಬರುವ ಗ್ರೂಪ್-ಎ ಮತ್ತು ದಾದಿಯರ ನೇಮಕಾತಿಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕವೇ ಭರ್ತಿ ಮಾಡಿಕೊಳ್ಳಬೇಕೆಂದು ಪಾಟೀಲ್ ನಿರ್ದೇಶನ ನೀಡಿದರು.

ರಾಜ್ಯಾದ್ಯಂತ 22 ವೈದ್ಯಕೀಯ ಕಾಲೇಜುಗಳು ಮತ್ತು 11 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳು ಸೇರಿದಂತೆ ವೈದ್ಯಕೀಯ ಶಿಕ್ಷಣ ಇಲಾಖೆ ಅಡಿಯಲ್ಲಿ ಬರುತ್ತಿವೆ. ಈ ಹುದ್ದೆಗಳನ್ನು ನಿಯಮದಂತೆ ಯಾವುದೇ ಮುಲಾಜಿಗೊಳಗಾಗದೇ ಭರ್ತಿ ಮಾಡಬೇಕೆಂದು ಸಚಿವರು ತಾಕೀತು ಮಾಡಿದರು.

ನೇಮಕಾತಿ ಪ್ರಕ್ರಿಯೆಯಲ್ಲಿ ಪಾರದರ್ಶಕತೆಯನ್ನು ಕಟ್ಟುನಿಟ್ಟಾಗಿ ಪಾಲನೆ ಮಾಡಬೇಕು. ಖಾಲಿ ಇರುವ ಹುದ್ದೆಗಳಿಗೆ ಪರೀಕ್ಷೆಗಳನ್ನು ನಡೆಸಲು ಪುಟ 2

### ಸುಟ್ಟು ಕರಕಲಾದ ಮೃತದೇಹವನ್ನು ಕೈಚೀಲದಲ್ಲಿ ಕೊಟ್ಟರು

## ಬೆಳಗಾವಿ ಜಿಲ್ಲಾಡಳಿತದ ವಿರುದ್ಧ ಭಾರೀ ಆಕ್ರೋಶ



**ಬೆಳಗಾವಿ:** ಬೆಳಗಾವಿಯ ಸ್ನೇಹಂ ಟೇಪ್ ಮ್ಯಾನಿಫ್ಯಾಕ್ಚರಿಂಗ್ ಕಾರ್ಖಾನೆಗೆ ಬೆಂಕಿ ಬಿದ್ದು ದೊಡ್ಡ ಅನಾಹುತ ಸಂಭವಿಸಿದೆ.



ಘಟನೆಯಲ್ಲಿ ಓರ್ವ ಸಜೀವ ದಹನವಾಗಿದ್ದು 16 ಗಂಟೆಗಳ ಕಾರ್ಯಾಚರಣೆ ಬಳಿಕ ಮೃತನ ಮೂಳೆಗಳು ಸಿಕ್ಕಿವೆ. ಆದರೆ ಮೃತಪಟ್ಟ ಕಾರ್ಮಿಕ ಯಲ್ಲಪ್ಪ ಸಣ್ಣಗೌಡ ಗುಂಡ್ಯಾಗೋಳ (19) ಅವರ ಮೃತದೇಹದ ಅವಶೇಷಗಳನ್ನು ಅಧಿಕಾರಿಗಳು ಕೈಚೀಲದಲ್ಲಿ ಹಾಕಿ ತಂದೆ ಸಣ್ಣಗೌಡ ಅವರ ಕೈಗೆ ಕೊಟ್ಟಿರೋದು ಸಾಮಾಜಿಕ ಜಾಲತಾಣದಲ್ಲಿ ಆಕ್ರೋಶಕ್ಕೆ ಕಾರಣವಾಗಿದೆ. ಪುಟ 2

### ಶೇ. 6.5ರ ಬಡ್ಡಿದರ ಮುಂದುವರಿಸಲು

## ಆರ್‌ಬಿಐ ನಿರ್ಧಾರ

**ನವದೆಹಲಿ:** ಭಾರತೀಯ ರಿಸರ್ವ್ ಬ್ಯಾಂಕ್ ನಿರೀಕ್ಷೆಯಂತೆ ರಿಪೋ ದರ ಅಥವಾ ಬಡ್ಡಿದರವನ್ನು ಶೇ. 6.5ರಲ್ಲಿ ಮುಂದುವರಿಸಲು ನಿರ್ಧರಿಸಿದೆ. ಹಣದುಬ್ಬರ ಇನ್ನೂ ಅಧಿಕ ಮಟ್ಟದಲ್ಲಿ ಇರುವುದರಿಂದ ಬಡ್ಡಿ ಇಳಿಕೆ ಸದ್ಯಕ್ಕೆ ಬೇಡ ಎಂಬುದು ಮಾನಿಟರಿ ಪಾಲಿಸಿ ಕಮಿಟಿಯ ಹೆಚ್ಚಿನ ಸದಸ್ಯರ ಅಭಿಮತ. ಮೊನ್ನೆಯಿಂದ ನಡೆದ ಎಂಪಿಸಿ ಸಭೆಯಲ್ಲಿ ವಿವಿಧ ಸಂಗತಿಗಳ ಚರ್ಚೆ ನಡೆದಿದೆ. ಇಂದು ಪತ್ರಿಕಾಗೋಷ್ಠಿಯಲ್ಲಿ ಆರ್‌ಬಿಐ ಗವರ್ನರ್ ಶಕ್ತಿಕಾಂತ ದಾಸ್ ಅವರು ಮಾತನಾಡುತ್ತಾ, ಬಡ್ಡಿ ದರ ಯಥಾಸ್ಥಿತಿಯಲ್ಲಿ ಮುಂದುವರಿಸಲಾಗುತ್ತಿರುವುದನ್ನು ತಿಳಿಸಿದರು. ಎಂಪಿಸಿ ಸಭೆಯಲ್ಲಿ ಆರು ಸದಸ್ಯರಲ್ಲಿ ನಾಲ್ವರು ಬಡ್ಡಿದರ ಯಥಾಸ್ಥಿತಿ ಮುಂದುವರಿಸಲು ನಿರ್ಧರಿಸಿದರು ಎಂದು ಹೇಳಿದರು.



ಜಿಡಿಪಿ ಉತ್ತಮವಾಗಿ ಬೆಳವಣಿಗೆ ಹೊಂದುತ್ತಿರುವುದರಿಂದ ಈಗ ಹಣದುಬ್ಬರವನ್ನು ಶೇ. 4ಕ್ಕೆ ತರುವ ನಿಟ್ಟಿನಲ್ಲಿ ಗಮನ ಹರಿಸುವುದು ಮುಖ್ಯ. ಹೀಗಾಗಿ, ಬಡ್ಡಿದರವನ್ನು ಶೇ. 6.5ರಲ್ಲಿ ಮುಂದುವರಿಸಲು ನಿರ್ಧರಿಸಿದ್ದಾಗಿ ಶಕ್ತಿಕಾಂತ್ ದಾಸ್ ತಿಳಿಸಿದರು. ರಿವರ್ಸ್ ರಿಪೋ ದರವನ್ನೂ ಶೇ. 3.35ರಲ್ಲಿ ಮುಂದುವರಿಸಲಾಗಿದೆ. ಇಲ್ಲಿ ರಿಪೋ ದರ ಎಂದರೆ ಬ್ಯಾಂಕುಗಳು ಆರ್‌ಬಿಐನಿಂದ ಪಡೆಯುವ ಫಂಡ್‌ಗೆ ನೀಡಬೇಕಾದ ಬಡ್ಡಿದರವಾಗಿದೆ. ರಿವರ್ಸ್ ರಿಪೋ ಎಂಬುದು ಬ್ಯಾಂಕುಗಳು ಆರ್‌ಬಿಐನಲ್ಲಿ ಇಡುವ ಠೇವಣಿಗೆ ಸಿಗುವ ಬಡ್ಡಿದರವಾಗಿದೆ.

ಆರ್‌ಬಿಐ ಗವರ್ನರ್ ನೇತೃತ್ವದಲ್ಲಿ ಹಣಕಾಸು ನೀತಿ ಸಮಿತಿಯಲ್ಲಿ ಆರ್ವರು ಸದಸ್ಯರಿರುತ್ತಾರೆ. ಇದರಲ್ಲಿ ಮೂವರು ಆರ್‌ಬಿಐನ ಅಧಿಕಾರ ಬಳಗದವರಾಗಿರುತ್ತಾರೆ. ಪುಟ 2

## ಕಣ್ಣೆದುರೇ ಗರ್ಭಿಣಿ ಪತ್ನಿ ಸಾವು: ರಸ್ತೆಯಲ್ಲೇ ಕಣ್ಣೀರಿಟ್ಟ ಪತಿ

**ನೆಲಮಂಗಲ:** ಪತಿ ಎದುರಲ್ಲೇ 7 ತಿಂಗಳ ಗರ್ಭಿಣಿ ಸಾವನ್ನಪ್ಪಿರುವ ದಾರುಣ ಘಟನೆ ಬೆಂಗಳೂರು ಹೊರವಲಯ ನೆಲಮಂಗಲ ತಾಲೂಕಿನ ಎಡೆಹಳ್ಳಿ ಗ್ರಾಮದ ಬಳಿ ನಡೆದಿದೆ. ಸಿಂಚನ ಮಗುವಿನೊಂದಿಗೆ ರಸ್ತೆ ಅಪಘಾತದಲ್ಲಿ ಸಾವನ್ನಪ್ಪಿದ್ದಾರೆ. ನೆಲಮಂಗಲ ತಾಲೂಕಿನ ತೋಟನಹಳ್ಳಿ ಗ್ರಾಮದ ಮಂಜುನಾಥ್, ಸಿಂಚನ ದಂಪತಿ ಇಂದು ದೇವಸ್ಥಾನದಲ್ಲಿ ಪೂಜೆ ಮುಗಿಸಿಕೊಂಡು ಮನೆಗೆ ಸ್ಕೂಟರ್‌ನಲ್ಲಿ ವಾಪಸ್ ತೆರಳುವಾಗ ಹಿಂಬದಿಯಿಂದ ಲಾರಿ ಗುದ್ದಿದೆ. ತುಮಕೂರು-ಬೆಂಗಳೂರು ರಸ್ತೆಯಲ್ಲಿ ಮನೆ ಕಡೆ ತೆರಳುವಾಗ ಹಿಂದುಗಡೆಯಿಂದ ಬಂದ ಜಲ್ಲಿ ತುಂಬಿದ ಲಾರಿ ಗುದ್ದಿದ ರಭಸಕ್ಕೆ ಸಿಂಚನ ಸ್ಕೂಟಿಯಿಂದ ಕೆಳಗಡೆ ಬಿದ್ದಿದ್ದಾರೆ. ಸಿಂಚನ ರಸ್ತೆಗೆ ಬಿದ್ದಿದ್ದು ಅವರ ಕಾರಿನ ಮೇಲೆ ಲಾರಿ ಚಕ್ರ ಹರಿದಿದೆ. ಪರಿಣಾಮ ಸಿಂಚನ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಕಣ್ಣೆದುರೇ ಪತ್ನಿಯ ಸಾವು ಕಂಡು ಪತಿ ಮಂಜುನಾಥ್ ರಸ್ತೆಯಲ್ಲೇ ಕಣ್ಣೀರಿಟ್ಟಿದ್ದಾರೆ. ಲಾರಿ ಚಾಲಕ ಅತಿ ವೇಗ ನಿರ್ಲಕ್ಷ್ಯದಿಂದ ಈ ಘಟನೆ ಸಂಭವಿಸಿದೆ ಎಂದು ಸ್ಥಳೀಯರು ಹೇಳಿದ್ದಾರೆ.



## ಪ್ರೀತಿಸಿದ ಯುವತಿಗೆ ಬೇರೊಬ್ಬರ ಜೊತೆ ನಿಶ್ಚಿತಾರ್ಥ; ಮನನೊಂದ ಪ್ರಿಯಕರ ಆತ್ಮಹತ್ಯೆ

**ರಾಯಚೂರು:** ಪ್ರೇಯಸಿ ಕೈಕೊಟ್ಟ ಹಿನ್ನೆಲೆ ಯುವಕನೊಬ್ಬ ನೇಣುಬಿಗಿದುಕೊಂಡು ಆತ್ಮಹತ್ಯೆಗೆ ಶರಣಾದ ಘಟನೆ ರಾಯಚೂರು ಜಿಲ್ಲೆಯ ಮಾನ್ವಿ ಪಟ್ಟಣ ಜನತಾ ಹೌಸ್ ಕಾಲೋನಿಯಲ್ಲಿ ನಡೆದಿದೆ. ಮಾನ್ವಿ ನಿವಾಸಿ ವರುಣ್ (26) ಆತ್ಮಹತ್ಯೆಗೆ ಶರಣಾದ ಯುವಕ. ಇನ್‌ಸ್ಟಾಗ್ರಾಂ ಮೂಲಕ ಪರಿಚಯವಾಗಿದ್ದ ಯುವತಿ ಜೊತೆ ಮೃತ ವರುಣ್ ಪ್ರೀತಿ ಮಾಡಿದ್ದ. ಬಳಿಕ ಆ ಯುವತಿ ಬೇರೊಬ್ಬರ ಜೊತೆ ನಿಶ್ಚಿತಾರ್ಥ ಮಾಡಿಕೊಂಡ ಹಿನ್ನೆಲೆ ಮನನೊಂದು ವರುಣ್ ಮನೆಯಲ್ಲಿ ಫ್ಯಾನ್‌ಗೆ ನೇಣುಬಿಗಿದುಕೊಂಡು ಕೊನೆಯುಸಿರೆಳೆದಿದ್ದಾನೆ. ಈ ಕುರಿತು ಮಾನ್ವಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ದಾಖಲಿಸಲಾಗಿದೆ. ಕೊಪ್ಪಳ ಜಿಲ್ಲೆಯ ಗಂಗಾವತಿ ಮೂಲದ ಯುವತಿ ಇನ್‌ಸ್ಟಾಗ್ರಾಂನಲ್ಲಿ ಪರಿಚಯವಾಗಿ ನಂತರ ಮುಖಾಮುಖಿ ಭೇಟಿಯಾಗಿದ್ದರು. ಬಳಿಕ ರಾಯಚೂರಿನಲ್ಲಿ ನರ್ಸಿಂಗ್ ಮಾಡುತ್ತಿದ್ದ ಯುವತಿ ಜೊತೆ ಪ್ರೇಮಾಂಕುರವಾಗಿದೆ. ಅದರಂತೆ ಕಳೆದ 5 ವರ್ಷದಿಂದ ವರುಣ್, ಯುವತಿ ಪರಸ್ಪರ ಪ್ರೀತಿಸುತ್ತಿದ್ದರು. ಇದೀಗ ದಿಢೀರ್ ಪ್ರೇಯಸಿಗೆ ಬೇರೊಬ್ಬನ ಜೊತೆ ನಿಶ್ಚಿತಾರ್ಥವಾಗಿದಕ್ಕೆ ವರುಣ್ ತೀವ್ರ ಬೇಸರಗೊಂಡಿದ್ದ. ಈ ಹಿನ್ನಲೆ ಇಂದು ಪ್ರೇಯಸಿಗೆ ವಿಡಿಯೋ ಕಾಲ್ ಮಾಡಿ ನಂತರ ವರುಣ್ ನೇಣಿಗೆ ಶರಣಾಗಿದ್ದಾನೆ.



## ಆರೋಪ ನಿರಾಧಾರ, ನೋಟಿಸ್ ನೀಡಿರುವುದು ಕ್ರಮಬದ್ಧವಲ್ಲ: ರಾಜ್ಯಪಾಲರಿಗೆ ಸಿಎಂ ಉತ್ತರ

**ಬೆಂಗಳೂರು:** ನನ್ನ ಮೇಲೆ ಮಾಡಿರುವ ಆರೋಪಗಳೆಲ್ಲವೂ ನಿರಾಧಾರಾವಾಗಿದ್ದು ನನಗೆ ನೀವು ನೋಟಿಸ್ ಕೊಟ್ಟಿರುವುದು ಕ್ರಮಬದ್ದವಲ್ಲ ಎಂದು ಸಿಎಂ ಸಿದ್ದರಾಮಯ್ಯ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್‌ಗೆ ಪತ್ರದ ಮೂಲಕ ಉತ್ತರ ನೀಡಿದ್ದಾರೆ.



ಮುಡಾ ಸೈಟ್ ಹಂಚಿಕೆ ವಿವಾದಕ್ಕೆ ಸಂಬಂಧಿಸಿದಂತೆ ಕಳೆದ ಭಾನುವಾರವೇ ಸಿಎಂ 60 ಪುಟಗಳ ಸುದೀರ್ಘ ಪತ್ರ ಬರೆದು ಕೊಟ್ಟಿದ್ದಾರೆ.

ಮುಡಾ ನಿವೇಶನದ ಸಂಪೂರ್ಣ ದಾಖಲಾತಿಗಳು, ಸುಪ್ರೀಂಕೋರ್ಟ್, ಹೈಕೋರ್ಟ್‌ನ ಹಲವು ತೀರ್ಪುಗಳ ಉಲ್ಲೇಖ ಇರುವ ದಾಖಲಾತಿಗಳು ರವಾನಿಸಿ ಅಧಿಕಾರ ದುರ್ಬಳಕೆ ಮಾಡಿಲ್ಲ ಎಂದು ತಿಳಿಸಿದ್ದಾರೆ.

**ಸಿಎಂ ನೀಡಿದ ಉತ್ತರದಲ್ಲಿ ಏನಿದೆ?:** ನನ್ನ ಮೇಲೆ ಮಾಡಿರುವ ಆರೋಪಗಳೆಲ್ಲವೂ ನಿರಾಧಾರವಾಗಿದ್ದು ನನಗೆ ನೀವು ನೋಟಿಸ್ ಕೊಟ್ಟಿರುವುದು ಕ್ರಮಬದ್ದವಲ್ಲ. ನಾನು ಅಧಿಕಾರದಲ್ಲಿದ್ದಾಗ ಸ್ವಜನ ಪಕ್ಷಪಾತ ಮಾಡಿಲ್ಲ ಮತ್ತು ಕಾನೂನು ಬಾಹಿರವಾಗಿ ಯಾವುದೇ ನಿರ್ಧಾರಗಳನ್ನ ಕೈಗೊಂಡಿಲ್ಲ. ದೂರುದಾರರು ಮಾಡಿರುವ ಎಲ್ಲಾ ಆರೋಪಗಳು ನಿರಾಧಾರವಾಗಿದೆ.

ಮುಡಾ ನಿವೇಶನ ಪಡೆದಿರುವ ಸಂಬಂಧ ಅಧಿಕಾರ ದುರ್ಬಳಕೆ ಮಾಡಿಲ್ಲ. ನ್ಯಾಯ ಸಮ್ಮತವಾಗಿ ನನ್ನ ಕುಟುಂಬ ನಿವೇಶನ ಪಡೆದಿದ್ದು ಯಾವುದೇ ರೀತಿಯಲ್ಲಿ ಕಾನೂನುಬಾಹಿರವಾಗಿ ನಿವೇಶನ ಪಡೆದಿಲ್ಲ. ಮುಖ್ಯ ಕಾರ್ಯದರ್ಶಿ ನೀಡಿರುವ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಬಹುದು. ಮುಡಾ ನಿವೇಶನ ಹಂಚಿಕೆ ವಿಷಯದಲ್ಲಿ ನಾನು ಲೋಪವೆಸಗಿಲ್ಲ. ಆಧಾರ ರಹಿತ ಮಾಹಿತಿ ಆಧರಿಸಿ ನೋಟಿಸ್ ನೀಡಿರುವುದು ಸಮಂಜಸವಲ್ಲ. ದೂರುದಾರರ ಪೂರ್ವಾಪರಗಳ ಬಗ್ಗೆಯೂ ರಾಜ್ಯಕ್ಕೆ ಗೊತ್ತಿದೆ. ಪೂರ್ವಾಪರತೆಗಳನ್ನು ಅರೆಯದೇ ನೋಟಿಸ್ ನೀಡಿರುವುದು ಸರಿಯಲ್ಲ. ಹೀಗಾಗಿ ಪ್ರಾಸಿಕ್ಯೂಷನ್ ಅನುಮತಿಗೆ ಸಲ್ಲಿಸಿರುವ ಅರ್ಜಿಯನ್ನು ತಿರಸ್ಕರಿಸಬೇಕು.

## ತರಕಾರಿ ಮಾರಾಟಗಾರರಿಗೂ ಲೈಸೆನ್ಸ್ ಕಡ್ಡಾಯ



**ಬೆಂಗಳೂರು:** ರಾಜಧಾನಿಯ ಹೋಟೆಲ್ ಹಾಗೂ ಮಾಲ್‌ಗಳಲ್ಲಿ ನೀಡಲಾಗುವ ಆಹಾರದಲ್ಲಿ ಕೃತಕ ಕಲರ್ ಹಾಗೂ ಕೆಮಿಕಲ್ ಬಳಕೆ ಮಾಡದಂತೆ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಹಾಗೂ ಆರೋಗ್ಯ ಸಚಿವರು ಎಚ್ಚರಿಕೆ ನೀಡಿದ್ದಾರೆ. ಮಾಲ್‌ಗಳು ಹಾಗೂ ಹೋಟೆಲ್ ಮಾಲೀಕರ ಜೊತೆಗೆ ಸಭೆ ನಡೆಸಿ ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಈ ಕುರಿತು ಸೂಚನೆ ನೀಡಿದ್ದಾರೆ. ಇತ್ತೀಚಿನ ದಿನಗಳಲ್ಲಿ ಪ್ರತಿ ಆಹಾರದಲ್ಲೂ ಕಲರ್ ಬಳಕೆ, ರಾಸಾಯನಿಕ ಬಳಕೆ ಮಾಡಲಾಗುತ್ತಿದೆ. ಆಹಾರ ಸುರಕ್ಷತೆ ಮತ್ತು ಗುಣಮಟ್ಟ ತನಿಖೆ ಮಾಡಿದಾಗ ಮಾಲ್‌ಗಳಲ್ಲಿನ ಫುಡ್ ಕಳಪೆ ಎಂದು ಪತ್ತೆಯಾಗಿದೆ. ಇದು ಆರೋಗ್ಯ ಸಮಸ್ಯೆಗಳಿಗೆ ಕಾರಣವಾಗುತ್ತಿದೆ. ಹೀಗಾಗಿ ಎಲ್ಲರೂ ಆಹಾರದಲ್ಲಿ ಶುಚಿತ್ವ ಕಾಪಾಡುವಂತೆ ಹಾಗೂ ಕಲರ್ ಮುಕ್ತ ಆಹಾರ ನೀಡುವಂತೆ ಸಚಿವರು ನಿರ್ದೇಶನ ನೀಡಿದ್ದಾರೆ. ಇದರ ಜೊತೆಗೆ ತರಕಾರಿ ಮಾರಾಟಗಾರರಿಗೂ ಲೈಸನ್ಸ್ ಪಡೆಯುವುದು ಕಡ್ಡಾಯವಾಗಲಿದೆ.

ಎಲ್ಲಾ ತರಕಾರಿ ವ್ಯಾಪಾರಿಗಳು ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆಯಿಂದ ಲೈಸೆನ್ಸ್ ಪಡೆಯಬೇಕು. ತರಕಾರಿಗಳ ಸ್ಯಾಂಪಲ್‌ಗಳನ್ನು ಅಗತ್ಯ ಬಿದ್ದರೆ ಪರೀಕ್ಷೆ ನಡೆಸಬೇಕು. ತರಕಾರಿ-ಹಣ್ಣು ಮಾರುವಲ್ಲಿ ಶುಚಿತ್ವ ಕಾಪಾಡಿಕೊಳ್ಳಬೇಕು. ಕೆಲವು ಕಡೆಗಳಲ್ಲಿ ಸಾವಯವ ತರಕಾರಿ ಮಾರುತ್ತೇವೆ ಎಂದು ಹೆಚ್ಚಿನ ದರದಲ್ಲಿ ಕಳಪೆ ತರಕಾರಿ ಹಣ್ಣುಗಳನ್ನು ಮಾರುತ್ತಿರುವುದು ಕಂಡುಬರುತ್ತಿದೆ. ಇದರ ವಿರುದ್ಧವೂ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಹೇಳಿದ್ದಾರೆ.

## ಯಾದಗಿರಿ ಪಿಎಸ್‌ಐ ಪರಶುರಾಮ ಕುಟುಂಬಕ್ಕೆ 50 ಲಕ್ಷ ರೂಪಾಯಿ

**ಕೊಪ್ಪಳ:** ಯಾದಗಿರಿ ಪಿಎಸ್‌ಐ ಪರಶುರಾಮ ಅನುಮಾನಾಸ್ಪದ ಸಾವನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ. ಪರಶುರಾಮ ಪತ್ನಿಗೆ ಇಲಾಖೆಯಲ್ಲಿ ಸೂಕ್ತವಾದ ಕೆಲಸ ಕೊಡುತ್ತೇವೆ. ರಾಯಚೂರು ಕೃಷಿ ವಿವಿ ಅಥವಾ ಜೆಸ್ಕಾಂನಲ್ಲಿ ಕೆಲಸ ಕೊಡುವಂತೆ ಕೇಳಿದ್ದಾರೆ. ಈ ಬಗ್ಗೆ ಸಿಎಂ ಸಿದ್ದರಾಮಯ್ಯ ಅವರ ಜೊತೆ ಮಾತನಾಡುತ್ತೇನೆ. ಗೃಹ ಇಲಾಖೆ ಹಾಗೂ ಸರ್ಕಾರದಿಂದ 50 ಲಕ್ಷ ಹಣ ನೀಡುತ್ತೇವೆ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ಘೋಷಿಸಿದ್ದಾರೆ.



ಗೃಹ ಸಚಿವ ಡಾ.ಜಿ.ಪರಮೇಶ್ವರ್ ಅವರು ಮೃತ ಪಿಎಸ್‌ಐ ಪರಶುರಾಮ ಅವರ ಕಾರಟಗಿ ತಾಲೂಕಿನ ಸೋಮನಾಳ ಗ್ರಾಮದಲ್ಲಿನ ನಿವಾಸಕ್ಕೆ ಭೇಟಿ ನೀಡಿ ಕುಟುಂಬಸ್ಥರಿಗೆ ಸಾಂತ್ವಾನ ಹೇಳಿದರು. ಬಳಿಕ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡಿದ ಅವರು, ಶಾಸಕ ಮತ್ತು ಅವರ ಪುತ್ರನ ಮೇಲೆ ಆರೋಪ ಮಾಡಿದ್ದಾರೆ. ತನಿಖೆಗೆ ಆದೇಶ ಮಾಡಿದ್ದೇನೆ. ಆರೋಪ ಕೇಳಿಬಂದ ದಿನವೇ ಸಿಐಡಿ ತನಿಖೆಗೆ ಪ್ರಕರಣವನ್ನು ನೀಡಿದ್ದೇವೆ. ಅದರ ಬಗ್ಗೆ ತನಿಖೆ ನಡೆಯುತ್ತಿದೆ. ಯಾರು ಕೂಡ ಹಣ ತೆಗೆದುಕೊಂಡು ವರ್ಗಾವಣೆ ಮಾಡಲ್ಲ. ವರ್ಗಾವಣೆಗೆ ಎರಡು ವರ್ಷ ನಿಗದಿ ಮಾಡಿದ್ದೇವೆ ಎಂದು ತಿಳಿಸಿದರು.

**ಸಿಬಿಐಗೆ ನೀಡುವ ಅರ್ಹತೆ ಈ ಪ್ರಕರಣದಲ್ಲಿ ಇಲ್ಲ:** ನಾನು ವಿರೋಧ ಪಕ್ಷದವರಿಂದ ಪಾಠ ಕಲಿಯುವ ಅವಶ್ಯಕತೆ ಇಲ್ಲ. ಪ್ರಕರಣದ ತನಿಖೆಯನ್ನು ಸಿಬಿಐಗೆ ನೀಡಲ್ಲ. ಸಿಬಿಐಗೆ ನೀಡುವ ಅರ್ಹತೆ ಈ ಪ್ರಕರಣದಲ್ಲಿ ಇಲ್ಲ. ಆದರೆ ಕುಟುಂಬಕ್ಕೆ ನ್ಯಾಯ ದೊರಕಿಸುವ ಕೆಲಸ ಮಾಡುತ್ತೇವೆ. ಅವರಿಗೆ ನ್ಯಾಯ ಸಿಗದೆ ಇದ್ದರೆ ಮುಂದೆ ನೋಡೋಣ.

ಪರಶುರಾಮ ಅವರು ಏಳು ತಿಂಗಳಲ್ಲೇ ಹೇಗೆ ವರ್ಗಾವಣೆಯಾದರು ಅಂತ ನನಗೆ ಗೊತ್ತಿಲ್ಲ. ಅವದಿಗೂ ಮೊದಲೇ ವರ್ಗಾವಣೆ ಬಗ್ಗೆ ಕೂಡ ಸಿಐಡಿ ತನಿಖೆಯಲ್ಲಿ ಹೊರಗೆ ಬರುತ್ತದೆ ಎಂದು ಹೇಳಿದರು.

ಎಫ್‌ಐಆರ್ ದಾಖಲಾಗಲು ವಿಳಂಬವಾಗಿಲ್ಲ. ಹಿರಿಯ ಅಧಿಕಾರಿಗಳ ಜೊತೆ ಚರ್ಚೆ ಮಾಡಿ ನಂತರ ಎಫ್‌ಐಆರ್ ದಾಖಲಿಸಿದ್ದಾರೆ. ಪ್ರಾಥಮಿಕ ತನಿಖೆಯಾದ ನಂತರ ದೂರು ದಾಖಲಾಗುತ್ತದೆ. ನಂತರ ಆರೋಪಿಗಳನ್ನು ಬಂಧಿಸಲಾಗುತ್ತದೆ. ಆರ್ ಅಶೋಕ್ ಅವರು ಗೃಹ ಸಚಿವರಾಗಿದ್ದರು. ಅವರು ಇದ್ದಾಗ ಸಿಐಡಿ ಚೆನ್ನಾಗಿತ್ತಾ? ಎಂದು ತಿರುಗೇಟು ನೀಡಿದರು.

ವರ್ಗಾವಣೆಗೆ ಹಣ ಪಡೆಯಾಲಾಗಿದೆ ಎಂದು ಕುಟುಂಬ ಆರೋಪ ಮಾಡಿದೆ. ಆದರೆ ಈ ಬಗ್ಗೆ ಪರಿಶೀಲನೆ ನಡೆಸಲಾಗುತ್ತದೆ. ಭ್ರಷ್ಟಾಚಾರ ನಿಲ್ಲಿಸಲು ಎಲ್ಲ ರೀತಿಯ ಕ್ರಮ ಕೈಗೊಳ್ಳುತ್ತೇವೆ. ಇದಕ್ಕಾಗಿ ಸಮಯಬೇಕು ಎಂದು ಹೇಳಿದರು.

ರಾಜ್ಯದಲ್ಲಿ ವರ್ಗಾವಣೆ ದಂಧೆ ಇದೆ ಎಂಬ ಸಿಎಂ ಆರ್ಥಿಕ ಸಲಹೆಗಾರ ರಾಯರೆಡ್ಡಿ ಹೇಳಿಕೆ ವಿಚಾರವಾಗಿ ಮಾತನಾಡಿದ ಅವರು, ಅದು ಅವರ ವ್ಯಯಕ್ತಿಕ ವಿಚಾರ. ನಾನು ಗಾಳಿಯಲ್ಲಿ ಗುಂಡು ಹೊಡೆಯಲ್ಲ. ವರ್ಗಾವಣೆಗೆ ಯಾರು ಹಣ ಪಡೆಯುತ್ತಾರೆ ಅಂತ ಅವರು ಹೆಸರು ಹೇಳಿದರೆ ಅದರ ಬಗ್ಗೆ ತನಿಖೆ ಮಾಡೋಣ ಎಂದರು.

ರಾಜಪಾಲರು ಸಿಎಂಗೆ ಶೋಕಾಸ್ ನೋಟಿಸ್ ನೀಡಿದ್ದಾರೆ. ಶೋಕಾಸ್ ನೀಡಿದ್ದೆ ತಪ್ಪು, ಅದನ್ನು ಹಿಂಪಡೆಯಿರಿ ಅಂತ ಸಂಪುಟದಲ್ಲಿ ಚರ್ಚಿಸಿ ಸಲಹೆ ನೀಡಿದ್ದೇವೆ. ಅವರು ಅದನ್ನು ಪಡೆಯಬಹುದು, ಇಲ್ಲವೇ ಬಿಡಬಹುದು. ನಾವು ನೀಡಿರುವ ಸಲಹೆಯನ್ನು ಅವರು ಹಾಗೆ ಇಟ್ಟುಕೊಂಡಿದ್ದಾರೆ. ರಾಜೀನಾಮೆ ನೀಡಲು ಮುಖ್ಯಮಂತ್ರಿಗಳು ಯಾವುದೇ ತಪ್ಪು ಮಾಡಿಲ್ಲ. ಪ್ರಾಸಿಕ್ಯೂಷನ್‌ಗೆ ಕೊಟ್ಟರೆ ಕಾನೂನು ಹೋರಾಟ ಮಾಡುತ್ತೇವೆ ಎಂದು ತಿಳಿಸಿದರು.

## ಎಸ್‌ಐಟಿ ಚಾರ್ಜ್‌ಶೀಟ್‌ನಲ್ಲಿ ಕಾಣೆಯಾದ ಮಾಜಿ ಸಚಿವ ನಾಗೇಂದ್ರಗೆ ಸಿಬಿಐ ಉರುಳು

**ಬೆಂಗಳೂರು:** ರಾಜ್ಯ ರಾಜಕೀಯದಲ್ಲಿ ಸಂಚಲನ ಸೃಷ್ಟಿಸಿರುವ ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ತನಿಖೆ ವಿಚಾರವಾಗಿ ಯೂನಿಯನ್ ಬ್ಯಾಂಕ್ ಕರ್ನಾಟಕ ಹೈಕೋರ್ಟ್ ಮೆಟ್ಟಿಲೇರಿದೆ. ಹಗರಣದ ತನಿಖೆಯನ್ನು ಸಿಬಿಐಗೆ ವರ್ಗಾಯಿಸಬೇಕು ಎಂದು ಬ್ಯಾಂಕ್ ರಿಟ್ ಅರ್ಜಿ ಸಲ್ಲಿಸಿದೆ.



ಯೂನಿಯನ್ ಬ್ಯಾಂಕ್ ಪರ ಅಟಾರ್ನಿ ಜನರಲ್ ವೆಂಕಟರಮಣಿ ವಾದ ಮಂಡಿಸಿದ್ದು, ಪ್ರಕರಣದ ತನಿಖೆಯನ್ನು ಸಿಬಿಐಗೆ ವರ್ಗಾಯಿಸುವಂತೆ ನಿರ್ದೇಶನ ನೀಡಬೇಕು ಎಂದು ಕೋರಿದರು.

**ಯೂನಿಯನ್ ಬ್ಯಾಂಕ್ ವಾದವೇನು?:** 50 ಕೋಟಿ ರೂಪಾಯಿಗಿಂತ ಹೆಚ್ಚಿನ ಮೊತ್ತದ ಹಗರಣವಿದ್ದರೆ ಸಿಬಿಐ ತನಿಖೆ ನಡೆಸಬೇಕು. ಸಿಬಿಐಗೆ ಮಾತ್ರ ಬ್ಯಾಂಕ್ ಕೇಸ್‌ಗಳ ತನಿಖೆ ಅಧಿಕಾರವಿದೆ. ಬ್ಯಾಂಕ್ ಅಧಿಕಾರಿಗಳಲ್ಲದೆ ಇತರರನ್ನೂ ಸಿಬಿಐ ತನಿಖೆಗೆ ಒಳಪಡಿಸಬಹುದು. ಆದರೆ, ಸಿಬಿಐ ಅಧಿಕಾರವ್ಯಾಪ್ತಿಯಲ್ಲಿ ಎಸ್‌ಐಟಿ ತನಿಖೆ ನಡೆಸುವಂತಿಲ್ಲ ಎಂದು ಯೂನಿಯನ್ ಬ್ಯಾಂಕ್ ಆಫ್ ಇಂಡಿಯಾದ ಪರ ಅಟಾರ್ನಿ ಜನರಲ್ ವಾದ ಮಂಡಿಸಿದರು.

**ಸರ್ಕಾರದ ವಾದವೇನು?:** ಪೊಲೀಸ್ ತನಿಖೆ ನಡೆಸುವುದು ರಾಜ್ಯಗಳ ಅಧಿಕಾರ ವ್ಯಾಪ್ತಿಯಲ್ಲಿದೆ. ಬ್ಯಾಂಕ್ ಅರ್ಜಿಗೆ ಒಂದು ವಾರದಲ್ಲಿ ಆಕ್ಷೇಪಣೆ ಸಲ್ಲಿಸುತ್ತೇವೆ. ಎಸ್‌ಐಟಿಯ ಆರೋಪಪಟ್ಟಿಯಲ್ಲಿ ಬ್ಯಾಂಕ್ ಅಧಿಕಾರಿಗಳನ್ನು ಸೇರಿಸಿಲ್ಲ. ಪ್ರಕರಣ ರದ್ದು ಕೋರಿದ ಬ್ಯಾಂಕ್ ಅಧಿಕಾರಿಗಳ ಅರ್ಜಿ ಮುಕ್ತಾಯಗೊಳಿಸಬೇಕು ಎಂದು ಸರ್ಕಾರದ ಪರ ವಕೀಲರು ಹೈಕೋರ್ಟ್‌ಗೆ ಮನವಿ ಮಾಡಿದರು. ಸದ್ಯ ಅರ್ಜಿಯನ್ನು ಮುಕ್ತಾಯಗೊಳಿಸಿರುವ ಹೈಕೋರ್ಟ್ ನ್ಯಾಯಪೀಠ ಮುಂದಿನ ವಿಚಾರಣೆಯನ್ನು ಸೆಪ್ಟೆಂಬರ್ 4ಕ್ಕೆ ಮುಂದೂಡಿದೆ. ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣಕ್ಕೆ ಸಂಬಂಧಿಸಿದಂತೆ ವಿಶೇಷ ತನಿಖಾ ತಂಡ ಎರಡು ದಿನ ಹಿಂದಷ್ಟೇ ಚಾರ್ಜ್‌ಶೀಟ್ ಸಲ್ಲಿಕೆ ಮಾಡಿದೆ. ಒಟ್ಟು 12 ಆರೋಪಿಗಳ ವಿರುದ್ಧ ಸುಮಾರು 3 ಸಾವಿರ ಪುಟಗಳ ಚಾರ್ಜ್ ಶೀಟ್ ಅನ್ನು ಬೆಂಗಳೂರಿನ 1ನೇ ಎಸಿಎಂಎಂ ನ್ಯಾಯಾಲಯಕ್ಕೆ ಸಲ್ಲಿಸಿದೆ. ಆದರೆ, ಇದರಲ್ಲಿ ಈಗಾಗಲೇ ಪ್ರಕರಣಕ್ಕೆ ಸಂಬಂಧಪಟ್ಟ ಹಾಗೆ ಜಾರಿ ನಿರ್ದೇಶನಾಲಯದಿಂದ ಬಂಧನಕ್ಕೊಳಗಾಗಿರುವ ಕಾಂಗ್ರೆಸ್ ಶಾಸಕ ನಾಗೇಂದ್ರ ಹೆಸರಿಲ್ಲ, ಮತ್ತೋರ್ವ ಶಾಸಕ ಬಸನಗೌಡ ದದ್ದಲ್ ಅವರ ಹೆಸರು ಸಹ ಉಲ್ಲೇಖವಾಗಿಲ್ಲ. ಇದರ ಬೆನ್ನಲ್ಲೇ ಯೂನಿಯನ್ ಬ್ಯಾಂಕ್ ಹೈಕೋರ್ಟ್ ಮೆಟ್ಟಿಲೇರಿದೆ.

### ಗಾರ್ಮೆಂಟ್ ಕ್ಷೇತ್ರಕ್ಕೆ ಪ್ರಯೋಜನ!

ರಾಜ್ಯದಲ್ಲಿ ನೇಕಾರರು ಎದುರಿಸುತ್ತಿರುವ ಸಮಸ್ಯೆಗಳ ಬಗ್ಗೆ ಮಾತನಾಡಿದ ಅವರು, ಕೈಮಗ್ಗ ಕ್ಷೇತ್ರದಲ್ಲಿ ಆದಾಯದ ಮಟ್ಟ ಕುಸಿಯುತ್ತಿರುವುದರಿಂದ ಅನೇಕ ನೇಕಾರರು ತಮ್ಮ ವೃತ್ತಿಯನ್ನು ತ್ಯಜಿಸುತ್ತಿದ್ದಾರೆ ಎಂದಿದ್ದಾರೆ.

ರಾಜ್ಯ ಮತ್ತು ಕೇಂದ್ರ ಸರ್ಕಾರಗಳು ಕಲ್ಯಾಣ ಯೋಜನೆಗಳನ್ನು ಹೊರತರುತ್ತಿದ್ದರೂ ಸಮುದಾಯವು ವೃತ್ತಿಯನ್ನು ಸಂಪೂರ್ಣವಾಗಿ ದೂರವಿಡುತ್ತಿದೆ. ಕೈಮಗ್ಗಕ್ಕೆ ಬದಲಾಗಿ ತಮ್ಮದೇ ಆದ ಸಣ್ಣ ಜವಳಿ ಘಟಕಗಳನ್ನು ಸ್ಥಾಪಿಸಲು ಸರ್ಕಾರಗಳು ನೇಕಾರರಿಗೆ ಸಹಾಯ ಮಾಡುತ್ತಿವೆ. ಜೊತೆಗೆ ವಿದ್ಯುತ್‌ಗೆ ಹೆಚ್ಚಿನ ಸಹಾಯಧನ, ಕಡಿಮೆ ಬಡ್ಡಿದರದಲ್ಲಿ ಸಾಲ ಮತ್ತು ಅವರ ಮಕ್ಕಳ ಶಿಕ್ಷಣಕ್ಕಾಗಿ ವಿದ್ಯಾರ್ಥಿವೇತನವನ್ನು ನೀಡುತ್ತಿವೆ ಎಂದು ಅವರು ಹೇಳಿದ್ದಾರೆ.

ರಾಜ್ಯ ಕೈಮಗ್ಗ ನಿಗಮವು ಬಿಡುಗಡೆ ಮಾಡಿರುವ ಅಂಕಿಅಂಶಗಳ ಪ್ರಕಾರ, 2017 ಮತ್ತು 2020 ರ ನಡುವೆ ಸಾವನ್ನಪ್ಪಿದ 123 ನೇಕಾರರ 114 ನಾಮನಿರ್ದೇಶಿತರಿಗೆ ವಿಮಾ ಮೊತ್ತವನ್ನು ಎಲ್‌ಐಸಿ ಇನ್ನೂ ಬಿಡುಗಡೆ ಮಾಡಿಲ್ಲ.

ಎಲ್ಲಾ 123 ನೇಕಾರರು ಪ್ರಧಾನ ಮಂತ್ರಿ ಜೀವನ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ ಮತ್ತು ಆಮ್ ಆದ್ಮಿ ಬಿಮಾ ಯೋಜನೆ ಗ್ರೂಪ್ ಇನ್ಶ್ಯೂರೆನ್ಸ್ ಯೋಜನೆಗಳಲ್ಲಿ ಹೆಸರು ನೋಂದಾಯಿಸಿಕೊಂಡಿದ್ದರು.

ಕಳೆದ ನಾಲ್ಕು ವರ್ಷಗಳಲ್ಲಿ (2020-24) ರಾಜ್ಯದಲ್ಲಿ 42 ನೇಕಾರರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ ಎಂದು ಸರ್ಕಾರ ಬಿಡುಗಡೆ ಮಾಡಿದ ಅಂಕಿಅಂಶಗಳು ಉಲ್ಲೇಖಿಸಿವೆ. ಮುಖ್ಯಮಂತ್ರಿಗಳ ಪರಿಹಾರ ನಿಧಿಯಡಿ (ಕೋವಿಡ್) ಮೃತ 25 ನೇಕಾರರ ಕುಟುಂಬಗಳಿಗೆ ತಲಾ 5 ಲಕ್ಷ ರೂ.ಗಳ ಪರಿಹಾರವನ್ನು ನೀಡಲಾಗಿದೆ. ಮೃತರಲ್ಲಿ ಏಳು ಮಂದಿಯ ಕುಟುಂಬದಿಂದ ಪರಿಹಾರಕ್ಕಾಗಿ ಸಲ್ಲಿಕೆಯಾದ ಅರ್ಜಿಗಳನ್ನು ತಿರಸ್ಕರಿಸಲಾಗಿದೆ ಮತ್ತು 10 ನೇಕಾರರ ಕುಟುಂಬಗಳಿಗೆ ಇನ್ನೂ ಪರಿಹಾರವನ್ನು ನೀಡಲಾಗಿಲ್ಲ ಎಂಬುದು ಅಂಕಿಅಂಶಗಳಿಂದ ತಿಳಿದುಬಂದಿದೆ.

### ಬಾಂಗ್ಲಾದೇಶವೇ ಸಾಕ್ಷಿ: ಮುಫ್ತಿ

ಸರ್ವಾಧಿಕಾರ ಹೆಚ್ಚು ಕಾಲ ಉಳಿಯುವುದಿಲ್ಲ ಎಂಬ ಪಾಠವನ್ನು ನಾವು ಕಲಿಯಬೇಕು ಎಂದು ಪುನರುಚ್ಚರಿಸಿದರು.

ಸರ್ಕಾರದ ನೀತಿಗಳು ಅಥವಾ ಕಾನೂನುಗಳಿಂದ ಸಾರ್ವಜನಿಕರು ಬೇಸತ್ತಾಗ ಅವರ ವಿರುದ್ಧ ತಿರುಗಿ ಬೀಳುತ್ತಾರೆ ಮತ್ತು ನಂತರ ಶೇಖ್ ಹಸೀನಾಳಂತೆ ಓಡಿಹೋಗಬೇಕಾಗುತ್ತದೆ ಎಂದು ಅವರು ಹೇಳಿದರು. ಬಾಂಗ್ಲಾದೇಶದ ಪರಿಸ್ಥಿತಿಯು ಜಮ್ಮು ಮತ್ತು ಕಾಶ್ಮೀರದಂತಿದೆ. ಇಲ್ಲಿನ ಯುವಕರು ಹಲವು ಸಮಸ್ಯೆಗಳನ್ನು ಎದುರಿಸಬೇಕಾಗಿದೆ. ಬಾಂಗ್ಲಾದೇಶದಂತೆ ಇಂದು ಯುವಕರು ಅಸಹಾಯಕರಾಗಿದ್ದಾರೆ ಎಂದು ಮುಫ್ತಿ ಹೇಳಿದರು.

ನಾವು ಬಾಂಗ್ಲಾದೇಶ ಬಿಕ್ಕಟ್ಟಿನಿಂದ ಪಾಠಗಳನ್ನು ಕಲಿಯಬೇಕು ಮತ್ತು ಯುವಕರ ಸಮಸ್ಯೆಗಳನ್ನು ಪರಿಹರಿಸಬೇಕು. ಇಲ್ಲಿ ಅಂತಹ ಪರಿಸ್ಥಿತಿ ಬರದಂತೆ ದೇವರು ಕಾಪಾಡಲಿ ಎಂದರು. ಬಾಂಗ್ಲಾದೇಶದ ಬಿಕ್ಕಟ್ಟು ಒಂದು ಪಾಠವಾಗಿದೆ, ದುರ್ಬಲ ಜನರು ಸಹ ಅಸಹಾಯಕರಾಗಿದ್ದರೂ ಸಹ ತಮ್ಮ ಹಕ್ಕುಗಳಿಗಾಗಿ ಹೋರಾಡಬಹುದು ಎಂದು ಪಿಡಿಪಿ ಅಧ್ಯಕ್ಷರು ಹೇಳಿದರು.

### ಕೈ ನಾಯಕ

ದೆಹಲಿಯಲ್ಲಿ ಪುಸ್ತಕ ಬಿಡುಗಡೆ ಕಾರ್ಯಕ್ರಮವೊಂದರಲ್ಲಿ ಮಾತಾಡಿದ ಅವರು, ಮೇಲ್ನೋಟಕ್ಕೆ ಕಾಶ್ಮೀರದಲ್ಲಿ ಎಲ್ಲವೂ

**ಮೊದಲನೇ ಪುಟದಿಂದ...**

ಸಹಜವಾಗಿದೆ ಎಂದು ಕಾಣಿಸಬಹುದು. ಇಲ್ಲಿ ಎಲ್ಲವೂ ಸರಿಯಿದೆ ಎಂದು ಎಲ್ಲರೂ ಭಾವಿಸಬಹುದು. ಆದರೆ ವಾಸ್ತವ ಬೇರೆಯದ್ದೇ ಇದೆ.. ಬಾಂಗ್ಲಾದೇಶದಲ್ಲಿ ಸಂಭವಿಸಿದ್ದು, ನಮ್ಮ ದೇಶದಲ್ಲಿಯೂ ನಡೆಯಬಹುದು ಎಂದಿದ್ದಾರೆ.

### ಆರ್‌ಬಿಐ ನಿರ್ಧಾರ

ಇನ್ನುಳಿದ ಮೂವರು ಸದಸ್ಯರು ಹೊರಗಿನವರಾಗಿರುತ್ತಾರೆ. ಪ್ರತೀ ನಾಲ್ಕು ವರ್ಷಗಳಿಗೊಮ್ಮೆ ಮೂವರು ಬಾಹ್ಯ ಸದಸ್ಯರನ್ನು ಸರ್ಕಾರ ಎಂಪಿಸಿಗೆ ನೇಮಕ ಮಾಡುತ್ತದೆ. ಆರ್‌ಬಿಐನ ನೀತಿಗಳಲ್ಲಿ ಸಮತೋಲನ ತರಲು ಈ ವಿಧಾನ ಅನುಸರಿಸಲಾಗುತ್ತದೆ.

### ಭಾರೀ ಆಕ್ರೋಶ

ಮನೆಯ ನಿರ್ವಹಣೆ ಜವಾಬ್ದಾರಿ ಹೊತ್ತು ಕಾರ್ಖಾನೆಗೆ ಕೆಲಸ ಸೇರಿದ್ದ ಮಗ ಕಾರ್ಖಾನೆಗೆ ಬಿದ್ದ ಅಗ್ನಿ ದುರಂತದಲ್ಲಿ ಮೃತಪಟ್ಟಿದ್ದಾನೆ. ಮನೆ ಮಗ ಸುಟ್ಟು ಕರಕಲಾಗಿ ಮೂಳೆಗಳು ಮಾತ್ರ ಸಿಕ್ಕಿದ್ದು ಮೂಳೆಗಳನ್ನು ಕೈ ಚೀಲದಲ್ಲಿ ಹಾಕಿ ತಂದೆಯ ಕೈಗೆ ಕೊಡಲಾಗಿದೆ. ಮಗನ ಸಾವಿನ ನೋವಿನಲ್ಲಿರುವ ತಂದೆ ಮೂಳೆಗಳನ್ನು ಕೈಯಲ್ಲಿ ಹಿಡಿದು ಮತ್ತಷ್ಟು ರೋಧಿಸಿದ್ದಾರೆ. ಸದ್ಯ ಕೈ ಚೀಲದಲ್ಲಿ ಮೃತನ ಮೂಳೆಗಳನ್ನು ನೀಡಿರುವ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ಹರಿದಾಡುತ್ತಿದ್ದು ನೆಟ್ಟಿಗರು ಛೀಮಾರಿ ಹಾಕಿದ್ದಾರೆ.

ಈ ರೀತಿ ಕೈ ಚೀಲದಲ್ಲಿ ಮೂಳೆಗಳನ್ನು ಹಾಕಿ ಕೊಡುವುದು ಎಷ್ಟು ಸರಿ ಎಂದು ಆಕ್ರೋಶ ಹೊರ ಹಾಕಿದ್ದಾರೆ. ಮೃತ ಯುವಕನಿಗೆ ಕನಿಷ್ಠ ಮಟ್ಟದ ಗೌರವ ನೀಡದೆ ಮೃತದೇಹ ಸಾಗಾಣೆಗೆ ವಾಹನ ವ್ಯವಸ್ಥೆ ಮಾಡದೆ, ಈ ರೀತಿ ತರಕಾರಿ ತರುವ ಚೀಲದಲ್ಲಿ ನೀಡುವುದು ಎಷ್ಟು ಸರಿ ಎಂದು ಸಾರ್ವಜನಿಕರು ಕೆಂಡಕಾರಿದ್ದಾರೆ.

ಬೆಳಗಾವಿ ಜಿಲ್ಲೆಯ ನಾವಗೆ ಗ್ರಾಮದ ಹೊರ ವಲಯದಲ್ಲಿ ಇರೋ ಸ್ನೇಹಂ ಹೊತ್ತಿ ಉರಿದು ಹೋಗಿದ್ದು, ಕೋಟ್ಯಾಂತರು ನಷ್ಟ ಸಂಭವಿಸಿದೆ. ಅಷ್ಟೇ ಅಲ್ಲದೇ ಮಾರ್ಕಂಡಯ ನಗರ ನಿವಾಸಿಯಾಗಿದ್ದ ಯಲ್ಲಪ್ಪ ಗುಂಡ್ಯಾಗೋಳ(19) ಬೆಂಕಿಯಲ್ಲಿ ಬೆಂದು ಜೀವ ಕಳೆದುಕೊಂಡಿದ್ದಾರೆ. ಚಿಕ್ಕ ವಯಸ್ಸಿನಲ್ಲಿಯೇ ಮನೆ ನಿರ್ವಹಣೆಗಾಗಿ ಯಲ್ಲಪ್ಪ ಕೆಲಸಕ್ಕೆ ಸೇರಿದ್ದ. ಸಂಜೆ 7 ಗಂಟೆಯ ಸಮಯದಲ್ಲಿ ಶಾರ್ಟ್ ಸರ್ಕ್ಯೂಟ್ ನಿಂದ ಕಾರ್ಖಾನೆಗೆ ಬೆಂಕಿ ಹೊತ್ತಿತ್ತು. ಬೆಂಕಿ ಕೆನ್ನಾಲಿಗೆ ತೀವ್ರಗೊಂಡು ಇಡೀ ಕಾರ್ಖಾನೆಯನ್ನು ವ್ಯಾಪಿಸಿತ್ತು. ಇಡೀ ಜಿಲ್ಲಾಡಳಿತವೇ ಬೆಂಕಿ ಕೆನ್ನಾಲಿಗೆ ನಂದಿಸಲು ಶ್ರಮ ವಹಸಿತ್ತು. ಇಡೀ ರಾತ್ರಿ 8 ಅಗ್ನಿ ಶಾಮಕ ವಾಹನಗಳು, ಖಾಸಗಿ ನೀರಿನ ಟ್ಯಾಂಕರ್ ಗಳು ಶ್ರಮಿಸಿದ್ದವು.

ಬೆಳಗಾವಿ ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ನಗರ ಪೊಲೀಸ್ ಆಯುಕ್ತ ಯಡಾ ಮಾರ್ಟಿನ್ ಸಹ ಸ್ಥಳದಲ್ಲಿಯೇ ಮೊಕ್ಕಾಂ ಹೂಡಿದ್ದರು. ಸತತ 16 ಗಂಟೆಯ ಕಾರ್ಯಾಚರಣೆಯ ಬಳಿಕ ಯಲ್ಲಪ್ಪ ಗುಂಡ್ಯಾಗೋಳ ಇರೋ ಸ್ಥಳವನ್ನು ಅಧಿಕಾರಿಗಳು ತಲುಪಿದ್ದರು. ಜೆಸಿಬಿ ಮೂಲಕ ಗೋಡೆ ಹೊಡೆದು ಸುಟ್ಟು ಕರಕಲಾಗಿದ್ದ ಯಲಪ್ಪನ ದೇಹದ ಮೂಳೆಗಳನ್ನು ಹೊರ ತೆಗೆದರು. ಬಳಿಕ ಕುಟುಂಬಸ್ಥರು, ತಹಶಿಲ್ದಾರ, ಡಿಎಚ್‌ಓ ಸ್ಥಳ ಪಂಚನಾಮೆ ಮಾಡಿ ಮೂಳೆಯೊಂದನ್ನ ಡಿಎನ್‌ಎ ಟೆಸ್ಟ್ ಗೆ ಎಫ್ ಎಸ್ ಎಲ್ ತಂಡ ರವಾನೆ ಮಾಡಿತು. ಅಳಿದೂಳಿದ ಮೂಳೆಗಳನ್ನ ಕುಟುಂಬಸ್ಥರಿಗೆ ಚೀಲದಲ್ಲಿ ನೀಡ್ತಿದ್ದಂತೆ ಆಕ್ರಂದನ ಮುಗಿಲು ಮುಟ್ಟಿತು.

### 1,200 ದಾದಿಯರ ನೇಮಕ

ಕೆಇಎಗೆ ಅಗತ್ಯವಾದ ಸಹಕಾರ ನೀಡಬೇಕು ಜೊತೆಗೆ ಇಲಾಖೆಯ ನೇಮಕಾತಿ ಬೈಲಾಗಳನ್ನು ತಿದ್ದುಪಡಿ ಮಾಡಲಾಗುವುದು ಎಂದು ಪಾಟೀಲ್ ಹೇಳಿದರು.

ಕೆಇಎ ಮೂಲಕ ಶುಶ್ರೂಷಕರನ್ನು ನೇಮಕ ಮಾಡಿಕೊಳ್ಳುವ ಪ್ರಸ್ತಾವನೆಯನ್ನು ಸರ್ಕಾರ ಕಳೆದೆರಡು ವರ್ಷಗಳ ಹಿಂದೆಯೇ ಕಳುಹಿಸಿತ್ತು. ಆದಾಗ್ಯೂ, ಸರಿಯಾದ ಸಿ ಅಂಡ್ ಆರ್ ನಿಯಮಗಳು, ರೋಸ್ಟರ್ ಸಿಸ್ಟಮ್ ಇಲ್ಲದಿದ್ದಲ್ಲಿ ಪರೀಕ್ಷೆಯನ್ನು ನಡೆಸುವುದು ಕಷ್ಟ ಎಂದು ಕೆಇಎ ಉತ್ತರಿಸಿದೆ ಎಂಬ ಮಾಹಿತಿಯನ್ನು ಸಭೆಯಲ್ಲಿ ಅಧಿಕಾರಿಗಳು ಸಚಿವರ ಗಮನಕ್ಕೆ ತಂದರು. ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯಡಿ ದಾದಿಯರ ನೇಮಕಾತಿಗೆ ಅನ್ವಯವಾಗುವ ಸಿ ಮತ್ತು ಆರ್ ನಿಯಮಗಳನ್ನು ಅನುಸರಿಸುವಂತೆ ಸಚಿವರು ವೈದ್ಯಕೀಯ ಶಿಕ್ಷಣ ಇಲಾಖೆಯ ನಿರ್ದೇಶಕರು ಮತ್ತು ಜಂಟಿ ಕಾರ್ಯದರ್ಶಿಗೆ ಸೂಚಿಸಿದರು.

ನೇಮಕಾತಿ ನಿಲುವಳಿಯನ್ನು ಕೆಇಎಗೆ ಹಸ್ತಾಂತರಿಸುವ ಸುಗಮ ಪ್ರಕ್ರಿಯೆಗಾಗಿ, ಪರೀಕ್ಷೆಗಳನ್ನು ನಡೆಸಲು ಕೆಇಎಗೆ ಪಠ್ಯಕ್ರಮಕ್ಕಾಗಿ ತಜ್ಞರ ಸಮಿತಿಯನ್ನು ರಚಿಸುವಂತೆ ಸಚಿವರು ವೈದ್ಯಕೀಯ ಶಿಕ್ಷಣ ನಿರ್ದೇಶಕಿ ಡಾ.ಸುಜಾತಾ ರಾಥೋಡ್ ಅವರಿಗೆ ಸೂಚಿಸಿದರು.

### ಆತ್ಮಹತ್ಯೆ

ಶಾಲಾ ಅವಧಿ ಮುಗಿದ ಬಳಿಕ ಪ್ರಕರಣ ಬೆಳಕಿಗೆ ಬಂದಿದೆ. ಸಾವಿನ ಕುರಿತು ಕುಟುಂಬಸ್ಥರು ಹಾಗೂ ಶಿಕ್ಷಕರು ಸಂಶಯ ವ್ಯಕ್ತಪಡಿಸುತ್ತಿದ್ದಾರೆ. ಸರ್ಕಾರಿ ನೌಕರರ ಸಂಘದಿಂದಲೂ ಸಾವಿನ ಕುರಿತು ಸಂಶಯ ವ್ಯಕ್ತವಾಗಿದೆ. ಶಾಲೆಯ ಎಸ್‌ಡಿಎಂಸಿ ಅಧ್ಯಕ್ಷರು ತೀವ್ರ ಕಿರುಕುಳ ನೀಡುತ್ತಿದ್ದು, ಕಿರುಕುಳ ಸಹಿಸಲಾಗದೆ ನೇಣಿಗೆ ಶರಣಾಗಿದ್ದಾರೆ ಎಂದು ಆರೋಪಿಸಿರುವ ಕುಟುಂಬಸ್ಥರು, ಸೂಕ್ತ ತನಿಖೆಗೆ ಒತ್ತಾಯಿಸಿದ್ದಾರೆ. ಸ್ಥಳಕ್ಕೆ ಬಸವನಬಾಗೇವಾಡಿ ಪೊಲೀಸರು ಭೇಟಿ ನೀಡಿ ಪರಿಶೀಲಿಸಿದ್ದಾರೆ. ಪೊಲೀಸರ ತನಿಖೆ ಬಳಿಕ ಸತ್ಯಾಂಶ ತಿಳಿದು ಬರಲಿದೆ. ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲುಮುಟ್ಟಿದೆ.

ಸರಕಾರಿ ಅಧಿಕಾರಿಗಳು ಅನುಮಾನಾಸ್ಪದ ಆತ್ಮಹತ್ಯೆಗಳ ಸರಣಿಗೆ ಇದು ಸೇರ್ಪಡೆಯಾಗಿದೆ. ಎರಡು ತಿಂಗಳ ಹಿಂದೆ ವಾಲ್ಮೀಕಿ ನಿಗಮದ ಅಧೀಕ್ಷಕ ಚಂದ್ರಶೇಖರ್ ಎಂಬವರ ಆತ್ಮಹತ್ಯೆ ರಾಜ್ಯ ರಾಜಕೀಯದಲ್ಲಿ ಕೋಲಾಹಲವನ್ನೇ ಎಬ್ಬಿಸಿದೆ. ವಾರದ ಹಿಂದೆ ಯಾದಗಿರಿ ಪಿಎಸ್‌ಐ ಪರಶುರಾಮ್ ಆತ್ಮಹತ್ಯೆ ಮಾಡಿಕೊಂಡಿದ್ದರು. ಇದರ ಹಿನ್ನೆಲೆಯಲ್ಲಿ ಸ್ಥಳೀಯ ಶಾಸಕರ ಭ್ರಷ್ಟಾಚಾರ, ಲಂಚದ ಒತ್ತಡದ ಆರೋಪವಿದೆ. ನಂತರ ಬಿಡದಿಯಲ್ಲಿ ಸಿಸಿಬಿ ಇನ್‌ಸ್ಪೆಕ್ಟರ್ ತಿಮ್ಮೇಗೌಡ ಅನುಮಾನಾಸ್ಪದವಾಗಿ ಸಾವಿಗೀಡಾಗಿದ್ದರು.

### ಗಂಭೀರ!

**ನಡೆದಿದ್ದೇನು?:** ನವೀನ್ ಮತ್ತು ಲಿಖಿತಾಶ್ರೀ ಜೋಡಿ ಪರಸ್ಪರ ಒಪ್ಪಿಕೊಂಡು ಮದುವೆಯಾಗಿದ್ದರು. ನಿನ್ನೆ ಮುಂಜಾನೆ ಹಿರಿಯರ ಸಮ್ಮುಖದಲ್ಲಿ ಚಂಬರಸನಹಳ್ಳಿಯಲ್ಲಿ ಮದುವೆಯಾದರು. ಮದುವೆ ಕೆಲಗಂಟೆಗಳ ನಂತರ ನವಜೋಡಿ ರೂಂಗೆ ಹೋಗಿದ್ದಾರೆ. ಬಳಿಕ ಮಚ್ಚಿನಿಂದ ಪರಸ್ಪರರ ಮೇಲೆ ಹಲ್ಲೆ ನಡೆಸಿಕೊಂಡಿದ್ದಾರೆ.

ಮಾರಾಮಾರಿಯಿಂದ ಗಂಭೀರವಾಗಿ ಗಾಯಗೊಂಡಿದ್ದ ಇಬ್ಬರನ್ನೂ ಕೆಜಿಎಫ್ ಆಸ್ಪತ್ರೆಗೆ ದಾಖಲಿಸಲಾಯಿತು. ಆದರೆ ಚಿಕಿತ್ಸೆ ಫಲಿಸದೇ ಲಿಖಿತಾಶ್ರೀ ಸಾವನ್ನಪ್ಪಿದ್ದಾಳೆ. ನವೀನ್ ಸ್ಥಿತಿ ಚಿಂತಾಜನಕವಾಗಿದೆ. ಸ್ಥಳಕ್ಕೆ ಅಂಡರ್‌ಸನ್ ಪೇಟೆ ಪೊಲೀಸರು ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಇಬ್ಬರೂ ಪ್ರೀತಿಸಿ ಎರಡೂ ಕುಟುಂಬದವರನ್ನು ಒಪ್ಪಿಸಿ ಮದುವೆಯಾಗಿದ್ದರು. ಇಂದು ಬೆಳಗಿನ ಜಾವ ಇಬ್ಬರಿಗೂ ಮದುವೆಯಾಗಿತ್ತು. ಮದುವೆ ನಂತರ ಇಬ್ಬರೂ ಮನೆಯ ಕೊಠಡಿಗೆ ಹೋಗಿದ್ದರು. ಕೆಲ ಹೊತ್ತಿನಲ್ಲೇ ಕೊಠಡಿಯಲ್ಲಿದ್ದ ನವಜೋಡಿ ಮಚ್ಚಿನಿಂದ ಹೊಡೆದಾಡಿಕೊಂಡಿದ್ದಾರೆ. ಇಬ್ಬರ ಗಲಾಟೆಗೆ ಕಾರಣ ತಿಳಿದು ಬಂದಿಲ್ಲ.

## ದರ್ಶನ್ ಬಟ್ಟೆ ಮೇಲೆ ರೇಣುಕಾ ಸ್ವಾಮಿ ರಕ್ತದ ಕಲೆ; ಪೊಲೀಸರಿಗೆ ಸಿಕ್ಕು ದೊಡ್ಡ ಸಾಕ್ಷಿ

**ಬೆಂಗಳೂರು:** ಭಾರಿ ಸಂಚಲನ ಸೃಷ್ಟಿ ಮಾಡಿದ ರೇಣುಕಾ ಸ್ವಾಮಿ ಕೊಲೆ ಕೇಸ್‌ನಲ್ಲಿ ದರ್ಶನ್ ವಿರುದ್ಧ ಅನೇಕ ಸಾಕ್ಷಿಗಳು ಸಿಕ್ಕಿವೆ. ಪೊಲೀಸರು ತನಿಖೆ ತೀವ್ರಗೊಳಿಸಿದಂತೆಲ್ಲ ಬಲವಾದ ಸಾಕ್ಷಿಗಳು ಸಿಗುತ್ತಿವೆ. ಈಗ ದರ್ಶನ್ ವಿರುದ್ಧ ಇನ್ನೊಂದು ಮಹತ್ವದ ಸಾಕ್ಷಿಯನ್ನು ಪೊಲೀಸರು ಸಂಗ್ರಹಿಸಿದ್ದಾರೆ. ವಿಧಿ ವಿಜ್ಞಾನ ಪ್ರಯೋಗಾಲಯ (ಎಫ್ ಎಸ್ಎಲ್) ವರದಿಯಲ್ಲಿ ಒಂದು ಭಯಾನಕ ಸತ್ಯ ಬಹಿರಂಗ ಆಗಿದೆ. ಪ್ರಕರಣ ನಡೆದ ದಿನ ದರ್ಶನ್ ಧರಿಸಿದ್ದ ಬಟ್ಟೆಗಳ ಮೇಲೆ ರೇಣುಕಾ ಸ್ವಾಮಿ ದೇಹದ ರಕ್ತದ ಕಲೆಗಳು ಇರುವುದು ಧೃಡಪಟ್ಟಿದೆ. ಇದರಿಂದ ದರ್ಶನ್‌ಗೆ ಕಾನೂನಿನ ಸಂಕಷ್ಟ ಹೆಚ್ಚಾಗಿದೆ.



ರೇಣುಕಾ ಸ್ವಾಮಿ ಮೃತದೇಹ ಪತ್ತೆ ಆದ ಬಂತರ ಬೆಂಗಳೂರು ಪೊಲೀಸರು ಬಹಳ ಚುರುಕಾಗಿ ತನಿಖೆ ಆರಂಭಿಸಿದ್ದರು. ಆರೋಪಿಗಳ ಮನೆಯಿಂದ ಹಲವು ವಸ್ತುಗಳನ್ನು ವಶಕ್ಕೆ ಪಡೆಯಲಾಗಿತ್ತು. ಎ2 ಆಗಿರುವ ದರ್ಶನ್ ಮನೆಯಲ್ಲಿ ವಶಪಡಿಸಿಕೊಂಡ ನೀಲಿ ಬಣ್ಣದ ಜೀನ್ಸ್ ಪ್ಯಾಂಟ್ ಮತ್ತು ಕಪ್ಪು ಬಣ್ಣದ ರೌಂಡ್ ನೆಕ್ ಶರ್ಟ್ ಅನ್ನು ವಿಧಿ ವಿಜ್ಞಾನ ಪ್ರಯೋಗಾಲಯಕ್ಕೆ ಕಳಿಸಲಾಗಿತ್ತು.

ಎಫ್‌ಎಸ್‌ಎಲ್ ಪರಿಶೀಲನೆ ವೇಳೆ ದರ್ಶನ್ ಅವರ ಬಟ್ಟೆಯ ಮೇಲೆ ರಕ್ತದ ಕಲೆಗಳು ಪತ್ತೆಯಾಗಿದ್ದವು. ಇವುಗಳು ರೇಣುಕಾ ಸ್ವಾಮಿಯ ದೇಹದ ರಕ್ತ ಎಂಬುದು ವರದಿಯಲ್ಲಿ ಖಚಿತವಾಗಿದೆ. ರೇಣುಕಾಸ್ವಾಮಿ ಕೊಲೆಯಲ್ಲಿ ದರ್ಶನ್ ಭಾಗಿಯಾಗಿದ್ದರು ಎನ್ನುವುದಕ್ಕೆ ಇದು ಅತ್ಯಂತ ಮಹತ್ವಪೂರ್ಣ ಸಾಕ್ಷ್ಯ ಆಗುತ್ತಿದೆ. ಎಫ್‌ಎಸ್‌ಎಲ್ ತಂಡದವರು ಜಪ್ತಿ ಮಾಡಿದ್ದ ಇನ್ನೂ ಹಲವು ವಸ್ತುಗಳ ವರದಿ ಬರುವುದು ಬಾಕಿ ಇದೆ.

ದರ್ಶನ್ ಸ್ನೇಹಿತೆಯಾದ ಪವಿತ್ರಾ ಗೌಡಗೆ ರೇಣುಕಾ ಸ್ವಾಮಿ ಅಶ್ಲೀಲ ಸಂದೇಶಗಳನ್ನು ಕಳಿಸಿದ್ದ ಎಂಬ ಆರೋಪ ಇದೆ. ಆ ಕಾರಣದಿಂದಲೇ ಡಿ ಗ್ಯಾಂಗ್ ನವರು ಆತನನ್ನು ಬೆಂಗಳೂರಿನಲ್ಲಿ ಥಳಿಸಿ, ಹತ್ಯೆ ಮಾಡಿದರು ಎಂಬ ಆರೋಪವಿದ್ದು, ತನಿಖೆಯಲ್ಲಿ ಅನೇಕ ವಿಚಾರಗಳು ಬಯಲಾಗುತ್ತಿವೆ. ದರ್ಶನ್ ಈ ಕೃತ್ಯ ಮಾಡಿರಲು ಸಾಧ್ಯವಿಲ್ಲ ಎಂಬುದು ಕೆಲವರ ಅಭಿಪ್ರಾಯ. ಆದರೆ ತನಿಖೆಯ ಪ್ರತಿ ಹಂತದಲ್ಲೂ ದರ್ಶನ್ ವಿರುದ್ಧ ಸಾಕ್ಷಿಗಳು ಸಿಗುತ್ತಿವೆ. ಇದರಿಂದ ನಟನಿಗೆ ಶಿಕ್ಷೆ ಆಗುವ ಸಾಧ್ಯತೆ ದಟ್ಟವಾಗಿದೆ. ದರ್ಶನ್ ಮಾತ್ರವಲ್ಲದೇ ಪವಿತ್ರಾ ಗೌಡ ಸೇರಿ ಒಟ್ಟು 17 ಮಂದಿ ಈಗ ನ್ಯಾಯಾಂಗ ಬಂಧನದಲ್ಲಿದ್ದಾರೆ.

## ಇಂದಿನಿಂದ ಲಾಲ್‌ಬಾಗ್‌ನಲ್ಲಿ ಫಲಪುಷ್ಪ ಪ್ರದರ್ಶನ

**ಬೆಂಗಳೂರು:** ಆಗಸ್ಟ್ 15 ರಂದು ಸ್ವಾತಂತ್ರ್ಯ ದಿನಾಚರಣೆ ಹಿನ್ನೆಲೆ ಬೆಂಗಳೂರಿನ ತೋಟಗಾರಿಕಾ ಇಲಾಖೆಯು ಲಾಲ್‌ಬಾಗ್‌ನಲ್ಲಿ 216ನೇ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮವನ್ನು ಆಯೋಜನೆ ಮಾಡಿದೆ. ಈ ಬಾರಿ ಸಂವಿಧಾನ ಶಿಲ್ಪಿ ಡಾ. ಬಿ.ಆರ್ ಅಂಬೇಡ್ಕರ್ ಅವರ ಜೀವನ ಗಾಥೆಯನ್ನ ಹೂಗಳಲ್ಲಿ ಅನಾವರಣಗೊಳಿಸಲಾಗಿದೆ.



ಆಗಸ್ಟ್ 08 ರಿಂದ 19ರವರೆಗೆ ಈ ಫಲಪುಷ್ಪ ಪ್ರದರ್ಶನ ಕಾರ್ಯಕ್ರಮ ನಡೆಯಲಿದೆ. ಆಗಸ್ಟ್ 8ರ ಗುರುವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿಕೆ ಶಿವಕುಮಾರ್ ಅವರು ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಈ ಬಾರಿ ಫಲಪುಷ್ಪ ಪ್ರದರ್ಶನದಲ್ಲಿ 200 ಪ್ರಬೇಧದ ಸುಮಾರು 32 ಲಕ್ಷ ಹೂಗಳನ್ನ ಪ್ರದರ್ಶನಕ್ಕಿಡಲಾಗಿದೆ. ಹೊರ ರಾಜ್ಯದಿಂದ ಆಮದು ಮಾಡಿಕೊಳ್ಳಲಾದ ಗಿಡಗಳನ್ನು ಸಾರ್ವಜನಿಕರ ಪ್ರದರ್ಶನಕ್ಕಿಡಲಾಗಿದೆ. ಪ್ರದರ್ಶನ ವೀಕ್ಷಣೆಗೆ ಬರುವವರಿಗೆ ಟಿಕೆಟ್ ವ್ಯವಸ್ಥೆ ಕೂಡ ಮಾಡಲಾಗಿದೆ. ವಯಸ್ಕರಿಗೆ 100 ರೂ. ಮಕ್ಕಳಿಗೆ 30 ರೂ. ನಿಗದಿಪಡಿಸಲಾಗಿದ್ದು, ಶಾಲಾ ಮಕ್ಕಳಿಗೆ ಉಚಿತ ಪ್ರವೇಶ ಕಲ್ಪಿಸಲಾಗಿದೆ. ಜೊತೆಗೆ ಪ್ಲಾಸ್ಟಿಕ್ ಬಳಕೆಯನ್ನು ನಿಷೇಧಿಸಲಾಗಿದೆ ಎಂದು ತೋಟಗಾರಿಕಾ ಇಲಾಖೆ ಅಧಿಕಾರಿಗಳು ತಿಳಿಸಿದ್ದಾರೆ. ಗಾಜಿನ ಮನೆಯ ಕೇಂದ್ರ ಭಾಗದ ಹಿಂಭಾಗದಲ್ಲಿ ಅಂಬೇಡ್ಕರ್ ಅವರ ವ್ಯಕ್ತಿತ್ವ ಮತ್ತು ಸಾಧನೆ ಬಿಂಬಿಸುವ ಮಹಾಡ್ ಸತ್ಯಾಗ್ರಹ, ಕಲಾರಾಮ್ ದೇವಸ್ಥಾನದ ಪ್ರವೇಶ, ಕೊರೆಂಗಾವ್ ವಿಜಯೋತ್ಸವದ ಕಲಾಕೃತಿಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ. ಭಾರತದ ಭೂಪಟ ಮತ್ತು ಸಂವಿಧಾನ ಪೀಠಿಕೆ ಸೇರಿದಂತೆ ಇನ್ನೂ ಅನೇಕ ಕಲಾಕೃತಿಗಳು, ಸ್ತಬ್ಧ ಚಿತ್ರಗಳು ಪ್ರೇಕ್ಷಕರ ಗಮನ ಸೆಳೆಯಲಿವೆ.

## ಆಸಕ್ತ ಮಾಲೀಕರಿಂದ ಕಟ್ಟಡ ಬಾಡಿಗೆ

**ಮಂಡ್ಯ:** ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು ಆದೇಶದನ್ವಯ ಮಂಡ್ಯ ಟೌನ್‌ಗೆ ಹೊಸದಾಗಿ ಮಂಜೂರಾಗಿರುವ ಪರಿಶಿಷ್ಟ ವರ್ಗದ ಮೆಟ್ರಿಕ್ ನಂತರದ ಬಾಲಕರ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯವನ್ನು ಪ್ರಾರಂಭಿಸಲು 100 ವಿದ್ಯಾರ್ಥಿಗಳ ಸಂಖ್ಯಾಬಲಕ್ಕೆ ಅತ್ಯವಶ್ಯಕವಾದ ಎಲ್ಲಾ ಮೂಲಭೂತ ಸೌಲಭ್ಯಗಳನ್ನು ಒಳಗೊಂಡ ಕಟ್ಟಡ ಇದ್ದರೆ ಆಸಕ್ತ ಕಟ್ಟಡ ಮಾಲೀಕರು ಆಗಸ್ಟ್ 20ರೊಳಗಾಗಿ ಬಾಡಿಗೆಗೆ ನೀಡುವಂತೆ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರ ಕಛೇರಿ ದೂ.ಸಂ:08232-223471 ಅನ್ನು ಸಂಪರ್ಕಿಸಬಹುದಾಗಿದೆ.

## ಬಹಿರಂಗ ಹರಾಜು

**ಮಂಡ್ಯ:** ಮದ್ದೂರು ತಾಲ್ಲೂಕು ಶಿವಾರಗುಡ್ಡ ವಿದ್ಯಾಪೀಠದಲ್ಲಿರುವ 20 ಹುಣಸೇ ಮರಗಳ ಫಸಲನ್ನು ಪಡೆಯಲು 3 ವರ್ಷಗಳ ಅವಧಿಗೆ ಹರಾಜು ಮಾಡಲು ಆಗಸ್ಟ್ 19 ರಂದು ಬಹಿರಂಗ ಹರಾಜು ಏರ್ಪಡಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಶಿವಾರಗುಡ್ಡ ವಿದ್ಯಾಪೀಠ ಅಥವಾ ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿಗಳ ಕಛೇರಿ, ಕೌಶಲ್ಯ ಭವನ, 4ನೇ ಮುಖ್ಯರಸ್ತೆ, 1ನೇ ಕ್ರಾಸ್, ಬಂದೀಗೌಡ ಬಡಾವಣೆ, ಮಂಡ್ಯ ಇವರಿಂದ ಪಡೆಯಬಹುದಾಗಿದೆ ಎಂದು ಜಿಲ್ಲಾ ಕೌಶಲ್ಯಾಭಿವೃದ್ಧಿ ಅಧಿಕಾರಿ ತಿಳಿಸಿದ್ದಾರೆ.

## ಬಾಲ್ಯ ವಿವಾಹ ಸಮಾಜಕ್ಕೆ ಮಾರಕ

ಸಂತೇಮರಹಳ್ಳಿ : ಬಾಲ್ಯ ವಿವಾಹ ಸಮಾಜಕ್ಕೆ ಪಿಡುಗಾಗಿದ್ದು, ಇದರ ನಿರ್ಮೂಲನೆಗೆ ಪ್ರತಿಯೊಬ್ಬರೂ ಕೈ ಜೋಡಿಸಬೇಕೆಂದು ಯಳಂದೂರು ವಕೀಲರ ಸಂಘದ ಅಧ್ಯಕ್ಷ ರಾಜಣ್ಣ ಹೇಳಿದರು.

ಇರಸವಾಡಿ ಗ್ರಾಮದ ಉಪ್ಪಾರ ಸಮುದಾಯ ಭವನದಲ್ಲಿ ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ಶಿಶು ಅಭಿವೃದ್ಧಿ ಯೋಜನಾ ಇಲಾಖೆ ಸಂತೇಮರಹಳ್ಳಿ ಇವರ ಸಹಯೋಗದಲ್ಲಿ ಬಾಲ್ಯ ವಿವಾಹ ಹಾಗೂ ಪೋಕ್ಸೋ ಕಾಯ್ದೆ ಕುರಿತು ಕಾನೂನು ಅರಿವು ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು. ಬಾಲ್ಯ ವಿವಾಹ ಅನಿಷ್ಟ ಪಿಡಗು, ಯಾವುದೇ ಕಾರಣಕ್ಕೂ 18 ವರ್ಷದೊಳಗೆ ಮದುವೆ ಮಾಡಬಾರದು.

ಬಾಲ್ಯ ವಿವಾಹದಿಂದ ನಾನ ರೀತಿಯ ತೊಂದರೆಗಳಿಗೆ ಕಾರಣವಾಗಬಹುದು. ಇದರಿಂದ ಮಕ್ಕಳ ದೈಹಿಕ ಬೆಳವಣಿಗೆ ಕುಂಠಿತವಾಗಬಹುದು ಇದರಿಂದ ಗರ್ಭಪಾತ ಹೆಚ್ಚಾಗಬಹುದು, ಬಾಲ್ಯ ವಿವಾಹಕ್ಕೆ ಒಳಗಾದ ಮಕ್ಕಳು ಮಾನಸಿಕ ದೌರ್ಬಲ್ಯತೆಗೆ ಒಳಗಾಗುತ್ತಾರೆ, ಬಾಲ್ಯ ವಿವಾಹಕ್ಕೆ ಬಡತನ, ಶಿಕ್ಷಣದಿಂದ ವಂಚಿತರವುದೇ ಇದಕ್ಕೆ ಪ್ರಮುಖ ಕಾರಣ ತಿಳಿಸಿದರು. ನಂತರ ಶಿಶು ಅಭಿವೃದ್ಧಿ ಯೋಜನಾಧಿಕಾರಿ ಜಯಶೀಲ ಮಾತನಾಡಿ, ಇರಸವಾಡಿ ಗ್ರಾಪಂ ಒಳಪಡುವ ಗ್ರಾಮಗಳಲ್ಲಿ ಇತ್ತೀಚಿನ ದಿನಗಳಲ್ಲಿ ಬಾಲ್ಯ ವಿವಾಹ ಪ್ರಕರಣಗಳು ಪದೇ ಪದೇ ಕಂಡುಬರುವುದರಿಂದ ಈ ಪಂಚಾಯ್ತಿಗೆ ಒಳಪಡುವ ಗ್ರಾಮಗಳ ಸಾರ್ವಜನಿಕರಲ್ಲಿ ಕಾನೂನು ಅರಿವು ಮೂಡಿಸುವ ಕಾರ್ಯಕ್ರಮವಾಗಿದೆ. ಅಪ್ರಾಪ್ತ ವಯಸ್ಸಿನಲ್ಲಿ ಮದುವೆ ಮುಂದಾದರೆ ಅನೇಕ ರೀತಿಯ ಕಾಯಿಲೆಗಳಿಗೆ ತುತ್ತಾಗುವ ಸಂಭವ ಹೆಚ್ಚಾಗುತ್ತದೆ ಹಾಗೂ ಮಾನಸಿಕ ಸ್ಥೈರ್ಯ ಕಳೆದುಕೊಳ್ಳುವ ಸಂಭವ ಜಾಸ್ತಿಯಾಗುತ್ತದೆ ಇದರಿಂದ ಅಕಾಲಿಕ ಮರಣಕ್ಕೆ ತುತ್ತುಗುವ ಸಾಧ್ಯತೆ ಇರುತ್ತದೆ, ಅವಮಾನ ಎದುರಿಸಲಾಗದೆ ಅಜ್ಞಾನದಿಂದ ಆತ್ಮಹತ್ಯೆ ಮಾಡಿಕೊಳ್ಳುವ ಹಂತಕ್ಕೆ ಹೋಗಬಹುದು, ಬಾಲ್ಯದ ಸಂತಸದಿಂದ ವಂಚಿತರಾಗುತ್ತಾರೆ ಇದರಿಂದ ದೇಶದ ಅಭಿವೃದ್ಧಿ ಕುಂಠಿತವಾಗುತ್ತದೆ ಎಂದು ತಿಳಿಸಿದರು. ಗ್ರಾಪಂ ಅಧ್ಯಕ್ಷೆ ಚಿನ್ನಮ್ಮ, ಸದಸ್ಯರಾದ ರಂಗಸ್ವಾಮಿ, ಸುರೇಶ್, ಪಿ ಡಿ ಓ ನಾಗರಾಜು, ಮಕ್ಕಳ ಸಹಾಯವಾಣಿ ಇಲಾಖೆ ಅಧಿಕಾರಿ ಮಹೇಶ್, ಸಿದ್ದರಾಜು, ಸಿದ್ದಶೆಟ್ಟಿ, ಮಹೇಶ್, ಶಿಕ್ಷಕರಾದ ರಾಚಪ್ಪಾಜಿ, ಎಎಸ್ಐ ಮಹದೇವಪ್ಪ, ಸಿಬ್ಬಂದಿಗಳಾದ ಕಲಾವತಿ, ರಾಜಶೇಖರ್ ಹಾಗೂ ಅಂಗನವಾಡಿ ಕಾರ್ಯಕರ್ತೆಯರು, ಆಶಾ ಕಾರ್ಯಕರ್ತೆಯರು, ಆಸ್ಪತ್ರೆ ಸಿಬ್ಬಂದಿ ವರ್ಗ ಉಪಸ್ಥಿತರಿದ್ದರು.



## ಬಾಲ ಗೌರವ ಪ್ರಶಸ್ತಿಗೆ ಅರ್ಜಿ ಆಹ್ವಾನ

**ರಾಮನಗರ:** 2023-24ನೇ ಸಾಲಿನಲ್ಲಿ ರಾಜ್ಯ, ರಾಷ್ಟ್ರ ಮತ್ತು ಅಂತರಾಷ್ಟ್ರ ಮಟ್ಟದಲ್ಲಿ ವಿಶೇಷ ಸಾಧನೆ ಮಾಡಿದ 18 ವರ್ಷದೊಳಗಿನ ಮಕ್ಕಳಿಗೆ ಬಾಲಗೌರವ ಪ್ರಶಸ್ತಿ ನೀಡಲು ಕರ್ನಾಟಕ ಬಾಲವಿಕಾಸ ಅಕಾಡೆಯಿಂದ ಅರ್ಜಿ ಆಹ್ವಾನಿಸಲಾಗಿದೆ. ಕ್ರೀಡೆ, ಸಂಗೀತ, ನೃತ್ಯ, ಬಹುಮುಖ ಪ್ರತಿಭೆ, ನಟನೆ, ಚಿತ್ರಕಲೆ, ಹಾಗೂ ವಿಜ್ಞಾನ ಮತ್ತು ಸಂಶೋಧನೆಯಲ್ಲಿ ಹೀಗೆ 07 ಕ್ಷೇತ್ರಗಳಲ್ಲಿ ಅಸಾಧಾರಣ ಸಾಧನೆ ಮಾಡಿ ಪ್ರಶಸ್ತಿ ಪಡೆದಿರಬೇಕು, ಇಂತಹ ಮಕ್ಕಳು ಅಕಾಡೆಮಿ ಬಾಲಗೌರವ ಪ್ರಶಸ್ತಿಗಾಗಿ ತಮ್ಮ ಸ್ವಯಂ ದೃಢೀಕೃತ ನಕಲು ದಾಖಲೆಗಳೊಂದಿಗೆ ಹಾಗೂ ಸ್ವವಿವರಗಳನ್ನೊಳಗೊಂಡ ಅರ್ಜಿಯನ್ನು ಆ. 26ರ ರೊಳಗೆ ಅಕಾಡೆಮಿಯ ಕೇಂದ್ರ ಕಚೇರಿಯ ಯೋಜನಾಧಿಕಾರಿಗಳು, ಚಂದ್ರಿಕಾ ಲೇಔಟ್ ಹಿಂಭಾಗ, ಕೆಎಚ್‌ಬಿ ಕಾಲೋನಿ, ಲಕಮನ ಹಳ್ಳಿ, ಧಾರವಾಡ-580004 ಈ ವಿಳಾಸಕ್ಕೆ ಅಂಚೆ ಮೂಲಕ ತಲುಪಿಸಬೇಕು. ದೂರವಾಣಿ:0836-2465490. ಹಾಗೆಯೇ ಈಗಾಗಲೇ ಬಾಲಗೌರವ ಪ್ರಶಸ್ತಿ ಪಡೆದವರ ಅರ್ಜಿ ಪ್ರಶಸ್ತಿಗೆ ಪರಿಗಣಿಸಲಾಗುವುದಿಲ್ಲ, ಈ ಪ್ರಶಸ್ತಿಯ ಅರ್ಜಿ ನಮೂನೆ/ಮಾನದಂಡಗಳನ್ನು ಕಚೇರಿಯ ವೆಬ್‌ಸೈಟ್ ಲಿಂಕ್ https://balavikasacademy.karnataka.gov.in ನಲ್ಲಿ ವೀಕ್ಷಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಆನೆ ದಿನಾಚರಣೆ ಪ್ರಯುಕ್ತ ಎಲಿಫೆಂಟ್ ಟಾಸ್ಕ್ ಫೋರ್ಸ್ ಉದ್ಘಾಟನೆ | ಗಣೇಶ್ ಪ್ರಸಾದ್ ಸಲಹೆ

# ಕಾಡಿನ ಸಂರಕ್ಷಣೆ ಪ್ರತಿಯೊಬ್ಬರ ಕರ್ತವ್ಯವಾಗಬೇಕು

**ಗುಂಡ್ಲುಪೇಟೆ:** ಕಾಡು ಇದ್ದರೆ ಮಾತ್ರ ನಾಡು ಉಳಿಯಲು ಸಾಧ್ಯ. ಕಾಡು ನಾಡಿನ ನಡುವೇ ಅವಿನಾಭಾವ ಸಂಬಂಧವಿದ್ದು ಪ್ರತಿಯೊಬ್ಬ ನಾಗರೀಕರು ಕಾಡಿನ ಸಂರಕ್ಷಣೆಗೆ ಮುಂದಾಗಬೇಕು ಎಂದು ಶಾಸಕ ಗಣೇಶ್ ಪ್ರಸಾದ್ ಹೇಳಿದರು.

ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಮೇಲುಕಾಮನಹಳ್ಳಿ ಸಫಾರಿ ಕೇಂದ್ರದಲ್ಲಿ ಶಾಸಕ ಗಣೇಶ್ ಪ್ರಸಾದ್ ನೇತೃತ್ವದಲ್ಲಿ ವಿಶ್ವ ನಡೆದ ಹುಲಿ ಹಾಗೂ ವಿಶ್ವ ಆನೆ ದಿನಾಚರಣೆ ಕಾರ್ಯಕ್ರಮದಲ್ಲಿ ಮಾತನಾಡಿದರು.

ಸುದೀರ್ಘ ಕಾಲದಿಂದ ಬಂಡೀಪುರ ಅರಣ್ಯವನ್ನು ಕಾಪಾಡುತ್ತಾ ಬಂದಿದ್ದಾರೆ, ನಾಗರಿಕ ಜೀವನ ಬೆಳೆಯುತ್ತ ಕಾಡಿನ ಸಂರಕ್ಷಣೆ ಮಾಡುವಲ್ಲಿ ಹೆಚ್ಚು ಕಾಳಜಿ ವಹಿಸಬೇಕು ಎಂದು ಹೇಳಿ ಪೂರ್ಣಚಂದ್ರ ತೇಜಸ್ವಿ ಅವರ ಕರ್ವಾಲೊ ಪುಸ್ತಕದ ಬಗ್ಗೆ ತಿಳಿಸಿ ಕಾಡಿಗೂ ನಾಡಿಗೂ ಇರುವ ಸಂಬಂಧದ ಬಗ್ಗೆ ತಿಳಿಸಿದರು.

ಅರಣ್ಯ ಸಂರಕ್ಷಣೆಗಾಗಿ ಅರಣ್ಯ ಸಚಿವ ಈಶ್ವರ್ ಖಂಡ್ರೆ, ಒಂದು ಯೋಜನೆ ರೂಪಿಸಿದ್ದು 5 ಲಕ್ಷ ಗಿಡ ನೆಡುವ ಕಾರ್ಯ ಹಮ್ಮಿಕೊಳ್ಳಲಾಗಿದೆ. ಇದನ್ನು ಯಶಸ್ವಿಗೊಳಿಸಬೇಕು ಎಂದರು ಅಲ್ಲದೇ ನಮ್ಮ ಸರ್ಕಾರವು ಹಲವು ಯೋಜನೆಗಳನ್ನು ಜಾರಿ ಮಾಡಿದ್ದು ನನ್ನನು ಕೂಡ ವೈಲ್ಡ್ ಲೈಫ್ ಬೋರ್ಡ್ ಸದಸ್ಯನಾಗಿ ಮಾಡಿದೆ, ಆದ್ದರಿಂದ ಮನುಷ್ಯ ಪ್ರಾಣಿ ಸಂಘರ್ಷ ತಡೆಗೆ ಆನೆ ತಡೆ ಶಿಬಿರ ಉದ್ಘಾಟನೆ ಮಾಡಿರುವುದಾಗಿ ತಿಳಿಸಿದರು. ಕಾಡನ್ನು ಬೆಳೆಸುವ ಮೂಲಕ ಪ್ರಾಣಿಗಳ ಸಂರಕ್ಷಣೆ



ಸಾಧ್ಯ ಎಂಬುದನ್ನು ತಿಳಿಸಿದರು. ಸಫಾರಿ ವಾಹನ ತಗ್ಗಿಸಲು ಮನವಿ ಮಾಡುವ ಜೊತೆಗೆ ಅನಧಿಕೃತ ರೆಸಾರ್ಟ್ ತೆರವು ಹಾಗೂ ಅಧಿಕೃತ ಕಟ್ಟಡಗಳ ಆಶ್ರಯಕ್ಕೆ ಇಂತಿಷ್ಟೇ ಜನರಿಗೆ ಅವಕಾಶ ನೀಡಲು ಸರ್ಕಾರಕ್ಕೆ ಮನವಿ ಸಲ್ಲಿಸುವೆ ಇದರಿಂದ ಪ್ರಕೃತಿಗೆ ನಾವು ಕೂಡ ಸ್ವಲ್ಪ ಸೇವೆ ಸಲ್ಲಿಸಿದಂತಾಗುವುದು ಎಂದರು.

ಅರಣ್ಯ ಸಂರಕ್ಷಣಾಧಿಕಾರಿ ಪ್ರಭಾಕರನ್ ಮಾತನಾಡಿ, ಹುಲಿ ಸಂರಕ್ಷಿತ ಅರಣ್ಯ ಪ್ರದೇಶದ 13 ದೇಶಗಳ ಪೈಕಿ ಭಾರತ ಒಂದೇ ಸೂಕ್ಷ್ಮ ಪ್ರದೇಶವಾಗಿ ದೇಶದಲ್ಲಿ ಬಂಡೀಪುರ 2 ನೇ ಸ್ಥಾನದಲ್ಲಿದೆ. ಹುಲಿಗಳಲ್ಲಿ ಕರ್ನಾಟಕ ಮೊದಲ ಸ್ಥಾನ, ಭಾರತದಲ್ಲಿ ಆನೆಗಳು 6600 ಇದ್ದು ಅದರಲ್ಲೂ ಬಂಡೀಪುರ ಮೊದಲು ಎಂದರು.

ಮಾನವ ಪ್ರಾಣಿ ಸಂಘರ್ಷ ನಡೆಯುತ್ತಲೇ ಇದೆ. ಜನಸಂಖ್ಯೆ ಜಾಸ್ತಿ ಆಗಿ ಪ್ರಾಣಿಗಳು ಜನವಸತಿ ಪ್ರದೇಶಕ್ಕೆ ಬರುತ್ತವೆ. ಇದೇ ಉದ್ದೇಶದಿಂದ ನಾವು ಟ್ರೆಂಚ್, ರೈಲ್ವೇ ಬ್ಯಾರಿಕೇಡ್, ಸೋಲಾರ್ ಫೆನ್ಸಿಂಗ್ ಮಾಡಿ ತಡೆಯುತ್ತಲೇ ಇದ್ದೇವೆ ಅದಕ್ಕಾಗಿಯೇ ಶಾಸಕ ಗಣೇಶ್ ಪ್ರಸಾದ್ ಎಲಿಫೆಂಟ್ ಟಾಸ್ಕ್ ಫೋರ್ಸ್ ಉದ್ಘಾಟಿಸಿದ್ದು, ಇದು 24★7 ಕಾರ್ಯ ನಿರ್ವಹಣೆ ಮಾಡಲಿದ್ದು ಬಂಡೀಪುರ ಅರಣ್ಯ ಇಲಾಖೆಯಿಂದ ಕಾಡಂಚಿನ ಗ್ರಾಮಗಳ ಮಕ್ಕಳಿಗೆ ಗ್ರೀನ್ ಸ್ಕಾಲರ್, ನಿರುದ್ಯೋಗಿಗಳಿಗೆ ಉದ್ಯೋಗದ ಬಗ್ಗೆ ತರಬೇತಿ, ಸೋಲಾರ್ 50/50, ಟೆಂಟಕಲ್ ಫೆನ್ಸಿಂಗ್ ಇನ್ನಿತರ ಮೂಲ ಸೌಕರ್ಯ ಒದಗಿಸುತ್ತೇವೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಹಂಗಳ ಗ್ರಾಮ ಪಂಚಾಯಿತಿ ಅಧ್ಯಕ್ಷರಾದ ರಾಜಮ್ಮ, ಉಪಾಧ್ಯಕ್ಷರಾದ ನಾಗರಾಜು, ಮಾಜಿ ಕಾಡ ಅಧ್ಯಕ್ಷರಾದ ನಂಜಪ್ಪ, ಅರಣ್ಯ ಸಿಬ್ಬಂದಿ ವರ್ಗದವರು, ಬಂಡೀಪುರ ಅರಣ್ಯ ವ್ಯಾಪ್ತಿಯ ಗ್ರಾಮಸ್ಥರು ಉಪಸ್ಥಿತರಿದ್ದರು.

### ಶಾಸಕ ಎ.ಆರ್. ಕೃಷ್ಣಮೂರ್ತಿ ಹೇಳಿಕೆ

# ಸಿಎಂ ವಿರುದ್ಧದ ಷಡ್ಯಂತ್ರ ಸೋಲಲಿದೆ

**ಯಳಂದೂರು:** ಶುದ್ಧ ಹಸ್ತ ರಾಜಕಾರಣಿಗಳಲ್ಲಿ ಸಿದ್ಧರಾಮಯ್ಯ ಒಬ್ಬರಾಗಿದ್ದು ಇವರ ವಿರುದ್ಧ ಬಿಜೆಪಿ ಹಾಗೂ ಜೆಡಿಎಸ್ ಇಲ್ಲಸಲ್ಲದ ಆರೋಪ ಮಾಡಿ ರೂಪಿಸುತ್ತಿರುವ ಷಡ್ಯಂತ್ರವನ್ನು ಸೋಲಿಸಲು ಎಲ್ಲರೂ ಒಂದಾಗುವ ಕಾಲ ಬಂದಿದ್ದು ಆ. 9 ರಂದು ಮೈಸೂರಿನಲ್ಲಿ ನಡೆಯಲಿರುವ ಜನಾಂದೋಲನ ಸಮಾವೇಶಕ್ಕೆ ಲಕ್ಷಲಕ್ಷ ಸಂಖ್ಯೆಯಲ್ಲಿ ಬಂದು ಈ ಕಾರ್ಯಕ್ರಮ ಯಶಸ್ವಿಗೊಳಿಸುವಂತೆ ಶಾಸಕ ಎ.ಆರ್. ಕೃಷ್ಣಮೂರ್ತಿ ಕರೆ ನೀಡಿದರು.

ಮಂಗಳವಾರ ಪಟ್ಟಣದ ಡಾ.ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಕಾಂಗ್ರೆಸ್ ಪಕ್ಷದ ವತಿಯಿಂದ ಹಮ್ಮಿಕೊಂಡಿದ್ದ ಮೈಸೂರಿನ ಜನಾಂದೋಲನ, ಬಿ.ರಾಚಯ್ಯ ಸ್ಮಾರಕದ ಉದ್ಘಾಟನೆಯ ಪೂರ್ವಭಾವಿ ಸಭೆಯಲ್ಲಿ ಭಾಗವಹಿಸಿ ಮಾತನಾಡಿದರು.

ಆಲೂರಿನಲ್ಲಿ, 10 ರಂದು ನಡೆಯಲಿರುವ ದಿ. ಬಿ.ರಾಚಯ್ಯ ಸ್ಮಾರಕ ಭವನದ ಉದ್ಘಾಟನೆಗೂ ಅಧಿಕ ಸಂಖ್ಯೆಯಲ್ಲಿ ಜನರು ಭಾಗವಹಿಸಬೇಕು ಎಂದ ಅವರು ದೇಶದಲ್ಲಿ ಬಿಜೆಪಿ ಇಲ್ಲದ ರಾಜ್ಯಗಳಲ್ಲಿ ಸರ್ಕಾರವನ್ನು ಅಸ್ಥಿರಗೊಳಿಸುವ ಕೆಲಸವನ್ನು ಬಿಜೆಪಿ ಮಾಡುತ್ತಿದೆ. ದೆಹಲಿ, ಪಶ್ಚಿಮ ಬಂಗಾಳದಲ್ಲಿ ಈ ಪ್ರಯೋಗ ಮಾಡಿದೆ, ಕೇಜ್ರೀವಾಲ್‌ರನ್ನು ಜೈಲಿಗೆ ಕಳುಹಿಸಿರುವ ಬಿಜೆಪಿ ಪಂಜಾಬ್‌ನಲ್ಲಿ ಆಮ್ ಆದ್ಮಿ ಪಕ್ಷ ಅಧಿಕಾರಕ್ಕೆ ಬರಲು ಕಾರಣವಾಗಿ ರೈತರ ಮೇಲೆ ಪ್ರಹಾರ ನಡೆಸಿದ್ದರ ಪ್ರಭಾವವಾಗಿದೆ. ನೆರೆಯ ಕೇರಳ ಹಾಗೂ ತಮಿಳುನಾಡಿನಲ್ಲೂ ಸರ್ಕಾರಗಳನ್ನು ಅಸ್ಥಿರಗೊಳಿಸಲು ಯತ್ನ ನಡೆಸಿ, ಈಗ ಯಾವುದೇ ಕಳಂಕವಿಲ್ಲದ ನಮ್ಮ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯರನ್ನು ಮುಡಾ ಹಗರಣ ಎಂಬ ನೆಪವೊಡ್ಡಿ ರಾಜ್ಯಪಾಲರ ಅಧಿಕಾರವನ್ನು ದುರುಪಯೋಗ ಮಾಡಿಕೊಂಡು ಪಾದಯಾತ್ರೆಯನ್ನು ಮಾಡುತ್ತಿರುವುದು ಯಾವ ಪುರುಷಾರ್ಥಕ್ಕಾಗಿ ಎಂಬುದು ಅರಿವಾಗುತ್ತಿಲ್ಲ. ಮುಡಾದಲ್ಲಿ ಯಾವುದೇ ಹಗರಣವಾಗಿಲ್ಲ.



ಇದಕ್ಕೆ ಕಾನೂನಿದೆ ಇದನ್ನು ಬಳಸಿಕೊಳ್ಳದೆ, ವಾಮಮಾರ್ಗದಲ್ಲಿ ಮುಖ್ಯಮಂತ್ರಿಗಳ ಮೇಲೆ ಇಲ್ಲಸಲ್ಲದ ಆರೋಪ ಮಾಡುತ್ತಿದೆ. ಪ್ರಧಾನಿ ಮೋದಿ, ಗೃಹ ಸಚಿವ ಅಮಿತ್ ಷಾ ವಿರುದ್ಧ ಮಾತನಾಡುವ ಕೆಲವೇ ಕೆಲವು ರಾಜಕಾರಣಿಗಳಲ್ಲಿ ಸಿದ್ದರಾಮಯ್ಯ ಒಬ್ಬರಾಗಿದ್ದು ಇವರನ್ನು ಕಂಡರೆ ಬಿಜೆಪಿಯವರಿಗೆ ಭಯವಾಗಿರುವುದು ಇದರಿಂದ ಸ್ಪಷ್ಟವಾಗುತ್ತದೆ. ಬಿಜೆಪಿ ಅಧಿಕಾರದಲ್ಲಿದ್ದಾಗ ಅನೇಕ ಹಗರಣಗಳು ನಡೆದಿವೆ. ಈ ಬಗ್ಗೆ 21 ಹಗರಣಗಳ ಬಗ್ಗೆ ದಾಖಲೆಗಳನ್ನು ಸದನದಲ್ಲಿ ಬಿಡುಗಡೆ ಮಾಡಲಾಗಿದೆ. ಇಂತಹ ಪಿತೂರಿ ನಡೆಸುತ್ತಿರುವ ಬಿಜೆಪಿಗರ ವಿರುದ್ಧ ಮೈಸೂರಿನ ಮಹಾರಾಜ ಕಾಲೇಜು ಮೈದಾನದಲ್ಲಿ ಆ. 09 ರಂದು ಬೃಹತ್ ಸಮಾವೇಶವನ್ನು ಆಯೋಜನೆ ಮಾಡಲಾಗುತ್ತಿದ್ದು ನಮ್ಮ ಭಾಗದಿಂದ ಹೆಚ್ಚಿನ ಸಂಖ್ಯೆಯಲ್ಲಿ ಜನರು ಆಗಮಿಸಬೇಕು. ದಲಿತರ, ಹಿಂದುಳಿದವರು, ಅಲ್ಪಸಂಖ್ಯಾತರು ಹಾಗೂ ದಮನಿತ ವರ್ಗಗಳ ಧ್ವನಿಯಾಗಿರುವ ಸಿದ್ಧರಾಮಯ್ಯರ ಬೆಂಬಲಕ್ಕೆ ನಾವು ನಿಲ್ಲಬೇಕಿದೆ.

ಅಲ್ಲದೆ ಆ. 10 ರಂದು ಆಲೂರು ಗ್ರಾಮದಲ್ಲಿ ನಮ್ಮ ತಂದೆ ದಿ. ಬಿ.ರಾಚಯ್ಯ ರವರ ಸ್ಮಾರಕ ಲೋಕಾರ್ಪಣೆಗೊಳ್ಳಲಿದೆ. ಸಿದ್ದರಾಮಯ್ಯರವರ ರಾಜಕೀಯ ಗುರುಗಳಾಗಿದ್ದ ಬಿ.ರಾಚಯ್ಯರವರ ಸ್ಮಾರಕಕ್ಕೆ ಪ್ರಥಮ ಬಾರಿಗೆ ಮುಖ್ಯಮಂತ್ರಿಯಾಗಿದ್ದಾಗ 1 ಕೋಟಿ ರೂ. ಹಣ ಹಾಕಿದ್ದು ಇದಕ್ಕೆ ಚಾಲನೆಯನ್ನು ಇವರೇ ನೀಡಿದ್ದರು. ಈಗ ಮತ್ತೆ ಅವರೇ ಮುಖ್ಯಮಂತ್ರಿಯಾಗಿದ್ದು ಇದನ್ನು ಲೋಕಾರ್ಪಣೆಗೊಳಿಸಲು ಬರಲಿದ್ದಾರೆ. ಹಾಗಾಗಿ ಇವೆರಡೂ ಕಾರ್ಯಕ್ರಮಗಳಿಗೂ ಈ ಭಾಗದ ಜನರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ರಾಜ್ಯ ಉಗ್ರಾಣ ನಿಗಮದ ಅಧ್ಯಕ್ಷ ಎಸ್. ಜಯಣ್ಣ ಕಾಡಾ ಅಧ್ಯಕ್ಷ ಮರಿಸ್ವಾಮಿ, ಗ್ಯಾರಂಟಿ ಯೋಜನೆಯ ಅನುಷ್ಠಾನದ ಜಿಲ್ಲಾಧ್ಯಕ್ಷ ಎಚ್.ವಿ. ಚಂದ್ರು, ಜಿಪಂ ಮಾಜಿ ಸದಸ್ಯರಾದ ವಡಗೆರೆದಾಸ್, ಕೇತಮ್ಮ, ಮಂಗಲ ಶಿವಕುಮಾರ್ ಮಾತನಾಡಿದರು. ಕಪ್ಪಾಳಿ ಮಹದೇವನಾಯಕ, ಕಿನಕಹಳ್ಳಿ ರಾಚಯ್ಯ, ಬಾಗಳಿ ರೇವಣ್ಣ ಪಪಂ ಸದಸ್ಯ ಮಹೇಶ್, ಚಾಮುಲ್ ನಿರ್ದೇಶಕರಾದ ರೇವಣ್ಣ ಸೇರಿದಂತೆ ಅನೇಕರು ಇದ್ದರು.

### ಕಾಂಗ್ರೆಸ್ ಜನಾಂದೋಲನದಲ್ಲಿ

# ತಕ್ಕ ಉತ್ತರ ನೀಡಿ

**ಹನೂರು:** ಕೇಂದ್ರ ಸರ್ಕಾರ, ರಾಜ್ಯ ವಿರೋಧ ಪಕ್ಷದ ನಾಯಕರು ರಾಜ್ಯಪಾಲರ ಸಂವಿಧಾನಿಕ ಹುದ್ದೆಯನ್ನು ದುರುಪಯೋಗಪಡಿಸಿಕೊಂಡು ಕಾಂಗ್ರೆಸ್ ಸರ್ಕಾರಕ್ಕೆ ಅಭದ್ರತೆ ಉಂಟು ಮಾಡಲು ಹುನ್ನಾರ ನಡೆಸುತ್ತಿದ್ದಾರೆ. ಇದಕ್ಕೆ ನಮ್ಮ ಕಾರ್ಯಕರ್ತರು ದಿಟ್ಟ ಉತ್ತರ ನೀಡಬೇಕು ಎಂದು ಮಾಜಿ ಶಾಸಕ ಆರ್. ನರೇಂದ್ರ ತಿಳಿಸಿದರು.

ಆಗಸ್ಟ್ 9 ರಂದು ಮೈಸೂರಿನ ಮಹಾರಾಜ ಕಾಲೇಜಿನಲ್ಲಿ ನಡೆಯುವ ಕಾಂಗ್ರೆಸ್ ಜನಾಂದೋಲನ ಕಾರ್ಯಕ್ರಮದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದರು.

ದೇಶದಲ್ಲಿ ಕಾಂಗ್ರೆಸ್ ಸರ್ಕಾರ ಆಡಳಿತವಿರುವ ರಾಜ್ಯಗಳಲ್ಲಿ ಕೇಂದ್ರ ಸರ್ಕಾರ ಸಿಬಿಐ, ಇಡಿ ಸಂಸ್ಥೆಗಳನ್ನು ದುರುಪಯೋಗಪಡಿಸಿಕೊಂಡು ಮುಖ್ಯಮಂತ್ರಿಗಳು, ಸಚಿವರು, ಹಾಗೂ ಶಾಸಕರುಗಳಿಗೆ ಇನ್ನಿಲ್ಲದ ತೊಂದರೆ ಕೊಡುತ್ತಿದ್ದಾರೆ. ಇದುವರೆಗೂ ಬಿಜೆಪಿಯವರು ಜನರ ಆಶೀರ್ವಾದದಿಂದ ಸರ್ಕಾರ ನಡೆಸಲು ಸಾಧ್ಯವಾಗಿಲ್ಲ, ಇವರಿಗೆ ಶಾಸಕರನ್ನು ಖರೀದಿ ಮಾಡಿ ಹಿಂಬಾಗಿಲಿನಿಂದ ಅಧಿಕಾರ ಪಡೆಯುವುದೇ ಅಭ್ಯಾಸವಾಗಿದೆ. ಚುನಾವಣಾ ಪೂರ್ವದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ನೀಡಿದ್ದ ಐದು ಭರವಸೆಗಳನ್ನು ಸರ್ಕಾರ ಬಂದ ಆರು ತಿಂಗಳಲ್ಲಿ ಈಡೇರಿಸಿದ್ದಾರೆ, ಇದರಿಂದ ಹಿಂದುಳಿದ ವರ್ಗದವರು, ಬಡವರು, ಮಹಿಳೆಯರಿಗೆ ಹೆಚ್ಚಿನ ಅನುಕೂಲವಾಗಿದೆ ನಮ್ಮ ರಾಜ್ಯದ ಯೋಜನೆಗಳನ್ನು ಬೇರೆ ರಾಜ್ಯಗಳು ಚುನಾವಣೆಗಳಲ್ಲಿ ಅನುಸರಿಸುತ್ತಿದ್ದಾರೆ ಎಂದರು.

ಕೇಂದ್ರದಲ್ಲಿ ಈ ಬಾರಿ 400ಕ್ಕೂ ಹೆಚ್ಚು ಸ್ಥಾನಗಳನ್ನು ಪಡೆದು ಬಿಜೆಪಿ ಸರ್ಕಾರ ಮಾಡುತ್ತೇವೆ ಎಂದು ಹೇಳಿಕೊಳ್ಳುತ್ತಿದ್ದ ಪ್ರಧಾನಮಂತ್ರಿ ನರೇಂದ್ರ ಮೋದಿ ಅನ್ಯ ಪಕ್ಷಗಳಿಗೆ ಅವಲಂಬಿತರಾಗಿ ಸರ್ಕಾರ ರಚನೆ ಮಾಡಿದ್ದಾರೆ. ಇದು ಪ್ರಕೃತಿಯ ಸರ್ಕಾರವಲ್ಲ, ಆಕ್ಸಿಜನ್ ಸರ್ಕಾರ ಯಾವಾಗ ಸರ್ಕಾರ ಬೀಳಲಿದೆ ಎಂದು ಪ್ರತಿನಿತ್ಯ ಚಿಂತೆ ನಡೆಸುತ್ತಿದ್ದಾರೆ. ಇವರು ದೇಶದಲ್ಲಿ ಬೇರೆ ಪಕ್ಷಗಳು ಆಡಳಿತವಿರುವ ರಾಜ್ಯಗಳನ್ನೇ ಟಾರ್ಗೆಟ್ ಮಾಡಿ ಅಭದ್ರತೆ ಮಾಡುವ ಹುನ್ನಾರ ನಡೆಸುತ್ತಿದ್ದಾರೆ. ಪ್ರಜಾಪ್ರಭುತ್ವದಲ್ಲಿ ಇಂತಹ ಅಭದ್ರತೆ ಮಾಡುವ ಬಿಜೆಪಿಗೆ ಮುಂದಿನ ದಿನಗಳಲ್ಲಿ ಜನತೆ ತಕ್ಕ ಪಾಠ ಕಲಿಸಬೇಕು ಎಂದು ವಾಗ್ದಾಳಿ ನಡೆಸಿದರು.

ಹಲವರು ಹಗರಣ ಮಾಡಿ ಜೈಲಿಗೆ ಹೋಗಿ ಬಂದ ಮುಖ್ಯಮಂತ್ರಿಗಳಿಗೆ ಯಾವೊಬ್ಬ ರಾಜ್ಯಪಾಲರು ನೋಟಿಸ್ ನೀಡಿಲ್ಲ ಆದರೆ ಒಬ್ಬ ಕಾರ್ಯಕರ್ತ ದೂರು ನೀಡಿದ ತಕ್ಷಣ ರಾಜ್ಯಪಾಲರು ನೋಟಿಸ್ ನೀಡಿರುವುದು ಸರಿಯಾದ ಕ್ರಮವಲ್ಲ, ಇದುವರೆಗೂ ಕೇಂದ್ರ ಸರ್ಕಾರ ಸಿಬಿಐ,ಇಡಿ ಸಂಸ್ಥೆಯನ್ನು ದುರುಪಯೋಗಪಡಿಸಿಕೊಂಡಿದ್ದರು. ಇದೀಗ ರಾಜ್ಯಪಾಲರ ಹುದ್ದೆಯನ್ನು ದುರುಪಯೋಗಪಡಿಸಿಕೊಂಡಿದ್ದಾರೆ. ಈ ನಿಟ್ಟಿನಲ್ಲಿ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರು ರಾಜ್ಯ ಹಾಗೂ ದೇಶಕ್ಕೆ ತಿಳಿಯುವಂತೆ ಯಾವುದೇ ಹಗರಣ ಮಾಡದಿದ್ದರೂ ಸರ್ಕಾರದ ವಿರುದ್ಧ ಪಾದಯಾತ್ರೆ ಮಾಡುತ್ತಿರುವ ಬಿಜೆಪಿ ಜೆಡಿಎಸ್ ಕಾರ್ಯಕರ್ತರ ಬಂಡವಾಳ ಬಯಲು ಮಾಡಿ ನಮ್ಮ ಪಕ್ಷದ ನಾಯಕರಾದ ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಡಿ.ಕೆ. ಶಿವಕುಮಾರ್ ಅವರ ಕೈಬಲ ಪಡಿಸಲು ಜನಾಂದೋಲನ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕು ಎಂದು ಮನವಿ ಮಾಡಿದರು. ಕೆಪಿಸಿಸಿ ಉಪಾಧ್ಯಕ್ಷ ಜಿ.ಎನ್. ನಂಜುಂಡಸ್ವಾಮಿ ಮಾತನಾಡಿದರು.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷರಾದ ಈಶ್ವರ್, ಮುಕುಂದವರ್ಮ, ಮಹಿಳಾ ಘಟಕದ ಅಧ್ಯಕ್ಷ ಡಾ. ಅತೀಯಾ, ಕೆಪಿಸಿಸಿ ಸದಸ್ಯ ಬಸವರಾಜು, ಚಾಮುಲ್ ನಿರ್ದೇಶಕರಾದ ಶಾಹುಲ್ ಅಹಮದ್, ನಂಜುಂಡಸ್ವಾಮಿ, ಪಟ್ಟಣ ಪಂಚಾಯತಿ ಸದಸ್ಯ ಗಿರೀಶ್, ಹರೀಶ್, ಉಪ್ಪಾರ ನಿಗಮದ ಮಾಜಿ ಅಧ್ಯಕ್ಷ ಶಿವಕುಮಾರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಇಗ್ನೇಶಿ ಮುತ್ತು, ಸದಸ್ಯರಾದ ಸುರೇಶ್, ಸುಧಾ ಮುಖಂಡರಾದ ಪುಟ್ಟರಾಜು, ಮಹದೇವ ಪ್ರಸಾದ್, ನಾಗರಾಜು, ಪ್ರಧಾನ ಕಾರ್ಯದರ್ಶಿ ಶರತ್ ಹಾಜರಿದ್ದರು.




# ಸಕಾಲದಲ್ಲಿ ಚಿಕಿತ್ಸೆ ನೀಡಿ ಜೀವ ಉಳಿಸಿ

**ಮಡಿಕೇರಿ :** ಜಿಲ್ಲೆಯಲ್ಲಿ ಶಿಶು ಮತ್ತು ತಾಯಿ ಆರೋಗ್ಯ ಸಂಬಂಧ ಗರ್ಭಿಣಿ ಮತ್ತು ಬಾಣಂತಿಯರಿಗೆ ಸಕಾಲದಲ್ಲಿ ಚಿಕಿತ್ಸೆ ನೀಡುವ ಮೂಲಕ ಶಿಶು ಮತ್ತು ತಾಯಿ ಮರಣ ಆಗದಂತೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶನ ನೀಡಿದ್ದಾರೆ.

ನಗರದ ಜಿಲ್ಲಾಧಿಕಾರಿ ಅವರ ಕಚೇರಿ ಸಭಾಂಗಣದಲ್ಲಿ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಕಾರ್ಯಕ್ರಮಗಳ ಸಂಬಂಧ ಮಾಹಿತಿ ಪಡೆದು ಮಾತನಾಡಿದರು. ಆಸ್ಪತ್ರೆಗೆ ಬರುವ ರೋಗಿಗಳನ್ನು ತಕ್ಷಣವೇ ಆರೋಗ್ಯ ವಿಚಾರಿಸಿ ಸೂಕ್ತ ಚಿಕಿತ್ಸೆ ನೀಡುವಂತಾಗಬೇಕು. ಯಾವುದೇ ಕಾರಣಕ್ಕೂ ಸತಾಯಿಸಬಾರದು. ಹೊರರೋಗಿಗಳು ಹೆಚ್ಚಿನ ಸಂಖ್ಯೆಯಲ್ಲಿ ಇದ್ದಲ್ಲಿ, ಹೆಚ್ಚಿನ ಕೌಂಟರ್‌ಗಳನ್ನು ತೆರೆಯಬೇಕು. ಸೂಕ್ತ ಸ್ಪಂದನೆ ಅತೀ ಮುಖ್ಯ ಎಂದು ಜಿಲ್ಲಾಧಿಕಾರಿ ಸೂಚಿಸಿದರು.

ಪ್ರತಿಯೊಬ್ಬರಿಗೂ ಆರೋಗ್ಯ ಸೇವೆ ಪಡೆಯುವಂತಾಗಲು ಮಾಹಿತಿ ಶಿಕ್ಷಣದ ಮೂಲಕ ಹೆಚ್ಚಿನ ಜಾಗೃತಿ ಮೂಡಿಸಬೇಕು. ಹಾಡಿಗಳು ಸೇರಿದಂತೆ ಎಲ್ಲೆಡೆ ಆರೋಗ್ಯ ಬಗ್ಗೆ ಹೆಚ್ಚಿನ ಮಾಹಿತಿ ನೀಡುವಂತಾಗಬೇಕು ಎಂದು ಜಿಲ್ಲಾಧಿಕಾರಿ ಅವರು ಸಲಹೆ ಮಾಡಿದರು.

ಎಲ್ಲರಿಗೂ ಆರೋಗ್ಯ ಸೌಲಭ್ಯಗಳು ತಲುಪಬೇಕು. ಸರ್ಕಾರದ ನಿರ್ದೇಶನಗಳನ್ನು ಪಾಲಿಸಬೇಕು ಎಂದು ಜಿಲ್ಲಾಧಿಕಾರಿ ವೆಂಕಟ್ ರಾಜಾ ನಿರ್ದೇಶನ ನೀಡಿದರು.

ಸಾಂಕ್ರಾಮಿಕ ರೋಗಗಳ ನಿಯಂತ್ರಣಕ್ಕೆ ಹೆಚ್ಚಿನ ಗಮನಹರಿಸಬೇಕು. ಕೋಪ್ಟಾ ಕಾಯ್ದೆಯ ಬಗ್ಗೆ ಮಾಹಿತಿ ಶಿಕ್ಷಣದ ಮೂಲಕ ಹೆಚ್ಚಿನ ಅರಿವು



ಮೂಡಿಸಬೇಕು ಎಂದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ್ ಕುಮಾರ್ ಅವರು ಮಾತನಾಡಿ ಜಿಲ್ಲೆಯಲ್ಲಿ ಲಸಿಕಾ ಕಾರ್ಯಪಡೆ ಶೇಕಡಾವಾರು ಸಾಧನೆ, ಕ್ಷಯ ಮತ್ತು ಸಾಂಕ್ರಾಮಿಕ ರೋಗಗಳ ನಿಯಂತ್ರಣ, ಜಿಲ್ಲಾ ಆರೋಗ್ಯ ಅಭಿಯಾನ ಮತ್ತಿತರ ಬಗ್ಗೆ ಮಾಹಿತಿ ನೀಡಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಮಧುಸೂದನ್ ಅವರು ಜಿಲ್ಲೆಯಲ್ಲಿ ಲಸಿಕಾ ಕಾರ್ಯಕ್ರಮವನ್ನು ಶೇ.100 ರಷ್ಟು ಪ್ರಗತಿ ಸಾಧಿಸಲಾಗಿದೆ ಎಂದು ಹೇಳಿದರು.

ಜಿಲ್ಲಾ ಕ್ಷಯರೋಗ ನಿಯಂತ್ರಣಾಧಿಕಾರಿ ಡಾ.ಆನಂದ್ ಅವರು ಜಿಲ್ಲೆಯಲ್ಲಿ 214 ಕ್ಷಯರೋಗ ಕ್ರೀಯಾಶೀಲ ಪ್ರಕರಣಗಳಿದ್ದು, ಗುಣಪಡಿಸಲು ಶ್ರಮಿಸಲಾಗಿದೆ. ಸಾರ್ವಜನಿಕ ಸ್ಥಳಗಳಲ್ಲಿ ತಂಬಾಕು ನಿಯಂತ್ರಣ ಸಂಬಂಧ ಸರ್ಕಾರದ ಮಾರ್ಗಸೂಚಿಯಂತೆ ಕಾರ್ಯ ನಿರ್ವಹಿಸಲಾಗುತ್ತಿದೆ ಎಂದು ಹೇಳಿದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಶ್ರೀನಿವಾಸ್ ಅವರು ಮಾತನಾಡಿ ಜನವರಿಯಿಂದ ಇಲ್ಲಿಯವರೆಗೆ ಟೈಫಾಯಿಡ್ 364 ಪ್ರಕರಣಗಳು, ನಾಯಿ ಕಚ್ಚುವಿಕೆಯಿಂದ 2912, ಹಾವು ಕಡಿತಕ್ಕೆ 190, ಅತಿಸಾರ ಭೇದಿಗೆ 1272 ಮಂದಿ, ಡೆಂಗ್ಯೂ ಸಂಬಂಧಪಟ್ಟಂತೆ 194 ಡೆಂಗ್ಯೂ ಪ್ರಕರಣಗಳು ವರದಿಯಾಗಿದ್ದು, ಎಲ್ಲರೂ ಗುಣಮುಖರಾಗಿದ್ದಾರೆ ಎಂದು ಮಾಹಿತಿ ನೀಡಿದರು. ಹಾವು ಕಡಿತ, ನಾಯಿ ಕಡಿತಕ್ಕೆ ತುತ್ತಾದಲ್ಲಿ ತಕ್ಷಣವೇ ಹತ್ತಿರದ ಆಸ್ಪತ್ರೆಗೆ ಭೇಟಿ ನೀಡಿ ಪರೀಕ್ಷಿಸಿಕೊಳ್ಳುವಂತಾಗಬೇಕು ಎಂದು ಸಲಹೆ ಮಾಡಿದರು.

ಕೊಡಗು ವೈದ್ಯಕೀಯ ವಿಜ್ಞಾನ ಸಂಸ್ಥೆಯ ಡೀನ್ ಮತ್ತು ನಿರ್ದೇಶಕರಾದ ಡಾ.ವಿಶಾಲ್ ಕುಮಾರ್, ಜಿಲ್ಲಾ ಸರ್ಜನ್ ಡಾ.ನಂಜುಂಡಯ್ಯ, ವೈದ್ಯರಾದ ಡಾ.ಸೋಮಶೇಖರ್, ಡಾ.ಕುರ್ಶ್ವಂತ್ ಕೋಳಿಬೈಲು, ಡಾ.ಮಹೇಶ್, ಡಾ.ರಾಮಚಂದ್ರ ಕಾಮತ್ ಅವರು ಹಲವು ಮಾಹಿತಿ ನೀಡಿದರು. ತಾಲ್ಲೂಕು ವೈದ್ಯಾಧಿಕಾರಿಗಳಾದ ಡಾ.ಚೇತನ್, ಡಾ.ಯತಿರಾಜು ಇತರರು ಇದ್ದರು.

## ಇಂದು ಹಲವೆಡೆ ವಿದ್ಯುತ್ ವ್ಯತ್ಯಯ

**ಮಂಡ್ಯ:** ವಿ.ಸಿ. ಫಾರಂ ವಿದ್ಯುತ್ ವಿತರಣಾ ಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆಯನ್ನು ಆ 8 ರಂದು ಹಮ್ಮಿಕೊಳ್ಳಲಾಗಿದ್ದು, ಸದರಿ ದಿನದಂದು ಬೆಳಿಗ್ಗೆ 9 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ವಿ.ಸಿ.ಫಾರಂ, ಶಿವಳ್ಳಿ, ದುದ್ದ, ಬಿ.ಹಟ್ನ, ಬೇವಕಲ್ಲು, ಹುಲಿಕೆರೆ, ಚಂದಗಾಲು, ಹುಲ್ಲೇನಹಳ್ಳಿ, ಹೊಳಲು ಹಾಗೂ ಈ ಸುತ್ತಮುತ್ತಲಿನ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದೆ ಎಂದು ಮಂಡ್ಯ ಸೆಸ್ಕ್, ಕಾ ಮತ್ತು ಪಾ ವಿಭಾಗದ ಕಾರ್ಯ ನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ನಿರುದ್ಯೋಗ ನಿವಾರಣೆಗೆ ತಜ್ಞರೊಂದಿಗೆ ಚರ್ಚೆ



**ಪಾಂಡವಪುರ :** ಮಂಡ್ಯ ಜಿಲ್ಲೆಯಲ್ಲಿ ನಿರುದ್ಯೋಗ ಹೋಗಲಾಡಿಸುವ ದೃಷ್ಟಿಯಿಂದ ಕೃಷಿ ಸಂಬಂಧಿತ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಉದ್ದೇಶದಿಂದ ಪಾಂಡವಪುರ ತಾಲೂಕಿನ ಹರವು ಗ್ರಾಮದ ಪ್ರಾಚೀನ ಸ್ಮಾರಕ ರಾಮದೇವರ ದೇಗುಲ ಆವರಣದ ದೇವರಕಾಡು ಮಂಥನ ವೇದಿಕೆಯಲ್ಲಿ ತಜ್ಞರೊಂದಿಗೆ ಚರ್ಚೆ ನಡೆಸಲಾಯಿತು.

ಈ ಚರ್ಚೆಯಲ್ಲಿ ಮಂಡ್ಯ ಜಿಲ್ಲೆಯ ಜ್ವಲಂತ ಸಮಸ್ಯೆಗಳು, ನಿರುದ್ಯೋಗ, ಕೈಗಾರಿಕಾ ಅಭಿವೃದ್ಧಿಯ ಕುರಿತು ಆರೋಗ್ಯ ಪೂರ್ಣವಾಗಿ ಚರ್ಚಿಸಲಾಯಿತು.

ಈ ಸಂದರ್ಭದಲ್ಲಿ ಸಾಮಾಜಿಕ ಹೋರಾಟಗಾರ ಡಾ.ಹೆಚ್.ಎಲ್. ರವೀಂದ್ರ ಮಾತನಾಡಿ, ಮಂಡ್ಯ ಜಿಲ್ಲೆಯಲ್ಲಿ ಕಬ್ಬು ಮತ್ತು ತೆಂಗು ಆಧಾರಿತ ಕೈಗಾರಿಕೆಗಳನ್ನು ಸ್ಥಾಪನೆ ಮಾಡುವ ಸಂಬಂದ ತಜ್ಞರೊಂದಿಗೆ ಚರ್ಚೆ ನಡೆದಿದೆ. ಸಿಎಫ್ ಟಿ ಆರ್ ಐನ ಪರಿಣಿತರ ಕರೆಯಿಸಿ ಚರ್ಚೆ ಮಾಡಲಾಗಿದ್ದು ಜಿಲ್ಲೆಯ ಕೆ.ಆರ್.ಪೇಟೆ, ತೂಬಿನಕೆರೆ ಅಥವಾ ಸೋಮನಹಳ್ಳಿ ಸೇರಿದಂತೆ ಯಾವ ಭಾಗದಲ್ಲಿ ಕೈಗಾರಿಕೆ ಸ್ಥಾಪನೆಯಾಗಬೇಕು. ಎಂತಹ ಕೈಗಾರಿಕೆ ಅವಶ್ಯಕತೆ ಇದೆ ಎಂಬುದರ ಬಗ್ಗೆ ಸಮಗ್ರವಾಗಿ ಚರ್ಚಿಸಿದ್ದೇವೆ, ಆ.12ರ ನಂತರ ನಮ್ಮ ಚರ್ಚೆಯ ಒಟ್ಟು ಅಂಶಗಳ ಪ್ರಾಜೆಕ್ಟ್ ತಯಾರು ಮಾಡಿ ಕೇಂದ್ರ ಸಚಿವ ಹೆಚ್.ಡಿ. ಕುಮಾರಸ್ವಾಮಿ ಅವರ ಮುಂದಿಡಲಾಗುವುದು. ಕೇಂದ್ರ ಸಚಿವರು ಜಿಲ್ಲೆಯಲ್ಲಿ ಕೈಗಾರಿಕೆ ಸ್ಥಾಪನೆ ಆಸಕ್ತಿ ವಹಿಸಿದ್ದು, ಅದಕ್ಕೆ ಪೂರಕವಾಗಿ ನಾವು ಚರ್ಚೆ ನಡೆಸಿದ್ದೇವೆ ಎಂದು ವಿವರಿಸಿದರು.

ಚರ್ಚಾಗೋಷ್ಠಿಯಲ್ಲಿ ಮೈಸೂರು ಸಿ.ಎಫ್.ಟಿ.ಆರ್.ಐನ ಅನಿಲ್ ಕುಮಾರ್, ಕಾವೇರಿ ಬಯೋ ರಿಫೈನರಿಸ್ ನ ಜಿ.ಎನ್.ಕುಮಾರ್, ಬ.ನಾ.ರಘು, ಪ್ರಗತಿಪರ ಚಿಂತಕರಾದ ಹರವು ದೇವೇಗೌಡ, ಕೆ.ಎಸ್.ನಾಗೇಗೌಡ, ಎನ್.ಎಸ್.ಚಂದ್ರಣ್ಣ, ಎಂ.ಬಿ.ನಾಗಣ್ಣಗೌಡ, ಹಾರೋಹಳ್ಳಿ ಧನ್ಯಕುಮಾರ್, ಬಿ.ನರೇಂದ್ರಬಾಬು, ಹರೀಶ್, ಪ್ರಭುಶಂಕರ್, ನಟರಾಜು, ಕ್ಯಾತನಹಳ್ಳಿ ಗುರುರಾಜು, ಮಂಡ್ಯ ಸೋಮು, ಪತ್ರಕರ್ತ ಎನ್.ಕೃಷ್ಣೇಗೌಡ, ಬಿ.ಕೆ.ವಿಜಯಕುಮಾರ್ ಸೇರಿದಂತೆ ಹಲವು ಪ್ರಗತಿಪರರು ಭಾಗವಹಿಸಿದ್ದರು.

### ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನಿರ್ದೇಶನ

# ಬಾಲ ಕಾರ್ಮಿಕ ರಕ್ಷಣೆ ಬಗ್ಗೆ ಜಾಗೃತಿ

**ಮಡಿಕೇರಿ :** ಕೊಡಗು ಜಿಲ್ಲೆಯಲ್ಲಿ ಕೆಲಸದಲ್ಲಿ ತೊಡಗಿರುವ ಬಾಲ ಹಾಗೂ ಕಿಶೋರ ಕಾರ್ಮಿಕರನ್ನು ರಕ್ಷಿಸಿ, ಪುನರ್ವಸತಿಗೊಳಿಸಿ ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವ ಉದ್ದೇಶದಿಂದ ಆಗಸ್ಟ್ 31 ರವರೆಗೆ ರಕ್ಷಣಾ ಕಾರ್ಯಚರಣೆಯನ್ನು ನಡೆಸಲು ರಾಷ್ಟ್ರೀಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ನಿರ್ದೇಶನ ನೀಡಿದೆ.

ಆ ನಿಟ್ಟಿನಲ್ಲಿ ಕೊಡಗು ಜಿಲ್ಲೆಯಾದ್ಯಂತ ಮಕ್ಕಳ ರಕ್ಷಣಾ ಕಾರ್ಯಾಚರಣೆ ಕೈಗೊಳ್ಳಲಾಗುತ್ತಿದ್ದು, ಈ ಸಂದರ್ಭದಲ್ಲಿ ಕೆಲಸದಲ್ಲಿ ತೊಡಗಿರುವ ಬಾಲ ಹಾಗೂ ಕಿಶೋರ ಕಾರ್ಮಿಕರು ಕಂಡುಬಂದಲ್ಲಿ, ಅವರನ್ನು ರಕ್ಷಿಸಿ, ಪುನರ್ವಸತಿಗೊಳಿಸಿ, ಶಿಕ್ಷಣ ಮುಂದುವರಿಕೆಗೆ ಅವಕಾಶ ಮಾಡಿಕೊಡುವುದು ಹಾಗೂ ಕೆಲಸಕ್ಕೆ ನಿಯೋಜಿಸಿಕೊಂಡ ಮಾಲೀಕರ ಮೇಲೆ ಕಾನೂನು ಕ್ರಮ ಕೈಗೊಳ್ಳುವುದು ಈ ಕಾರ್ಯಾಚರಣೆಯ ಉದ್ದೇಶವಾಗಿರುತ್ತದೆ ಎಂದು ಜಿಲ್ಲಾ ಕಾರ್ಮಿಕ ಅಧಿಕಾರಿ ಕಾವೇರಿ ಮಾಹಿತಿ ನೀಡಿದ್ದಾರೆ.

ಸ್ವಾತಂತ್ರ ದಿನಾಚರಣೆ ಪ್ರಯುಕ್ತ ಆಗಸ್ಟ್ 31 ರ ವರೆಗೆ ಮಕ್ಕಳ ರಕ್ಷಣಾ ಕಾರ್ಯಾಚರಣೆಗೆ ಸಂಬಂಧಿಸಿದಂತೆ ತಪಾಸಣೆ ಮತ್ತು ಹಠಾತ್ ದಾಳಿ ನಡೆಸುವಂತೆ ಸೂಚಿಸಿದ್ದ ಹಿನ್ನೆಲೆಯಲ್ಲಿ ಮಂಗಳವಾರ ಮಡಿಕೇರಿ ನಗರದ ಹಳೇ ಖಾಸಗಿ ಬಸ್ ನಿಲ್ದಾಣ, ಕೆಎಸ್‌ಆರ್‌ಟಿಸಿ. ಬಸ್ಸು ನಿಲ್ದಾಣ, ಹೊಸ ಖಾಸಗಿ ಬಸ್ಸು ನಿಲ್ದಾಣ, ಟಾಟಾ ಮೋಟಾರ್ಸ್



ಹಾಗೂ ಇತರೆ ಸಂಸ್ಥೆಗಳಿಗೆ ಸತ್ಯ ಎಸ್‌ಜೆ, ಮಹಿಳಾ ಪೊಲೀಸ್ ಹೆಡ್ ಕಾನ್ಸ್‌ಟೇಬಲ್, ಹರ್ಷಿತ ಬಿ.ಆರ್, ಮಕ್ಕಳ ಸಹಾಯವಾಣಿ-1098 ಮೇಲ್ವಿಚಾರಕರು, ಅಬ್ದುಲ್ ನಿಸಾರ್ ಪಿ.ಆರ್, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಒ.ಆರ್.ಡಬ್ಲ್ಯು, ಮಲ್ಲಿಕಾರ್ಜುನ ಸಿ.ಆರ್, ಕೆ.ಎಸ್.ಆರ್.ಟಿ.ಸಿಯ ಟಿ.ಸಿ, ಪಿ.ಬಿ.ಸುರೇಶ, ನಗರಸಭೆಯ ಆರೋಗ್ಯ ನಿರೀಕ್ಷಕರು, ಎಂ.ಪಿ ಉತ್ತಪ್ಪ, ಎಎಸ್ಐ, ಸಿ.ವಿ.ಶ್ರೀಧರ, ಪಿಎಸ್ಐ ಮಹೇಶ ಯು.ಎ., ಎಎಸ್ ಸಿಡಬ್ಲ್ಯುಪಿಒ ಎಸ್.ಜೆ.ಪಿ.ಯು, ಕಾರ್ಮಿಕ ಅಧಿಕಾರಿ ಕಾವೇರಿ ಟಿ., ಆರ್.ಶಿರಾಜ್ ಅಹ್ಮದ್, ಯೋಜನಾ ನಿರ್ದೇಶಕರು, ಜಿ.ಬಾ.ಕಾ.ಯೋ.ಸೊ, ಜರೀನಾ, ಡಿ.ಇ.ಒ ಹಾಗೂ ಎಂ.ಎಂ.ಯತ್ನಟ್ಟಿ, ಹಿರಿಯ ಕಾರ್ಮಿಕ ನಿರೀಕ್ಷಕರು, ಮಡಿಕೇರಿ ವೃತ್ತ, ಮಡಿಕೇರಿರವರ ಜಂಟಿ ತಂಡದೊಂದಿಗೆ ಭೇಟಿ ನೀಡಿ ತಪಾಸಣೆ ನಡೆಸಲಾಯಿತು ಹಾಗೂ ಮಕ್ಕಳನ್ನು ಕೆಲಸಕ್ಕೆ ನೇಮಿಸಿಕೊಳ್ಳದಂತೆ ಜಾಗೃತಿ ಮೂಡಿಸಲಾಯಿತು.

# 14ರಂದು ಕೊಡವ ಸಾಹಿತ್ಯ ಅಕಾಡೆಮಿಯಿಂದ ಬೇಲ್ ನಮ್ಮೆ

**ಮಡಿಕೇರಿ:** ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ ಹಾಗೂ ಬೊಳ್ಳುಮಾಡು ಮಾತಂಡ ಕುಟುಂಬಸ್ಥರ ಸಹಭಾಗಿತ್ವದಲ್ಲಿ ಬೊಳ್ಳುಮಾಡು, ಕುಂಜಿಲಗೇರಿ, ಕಡಂಗಮರೂರು, ಕಾಕೋಟುಪರಂಬು ಗ್ರಾಮ ಪಂಚಾಯಿತಿಯ ಸಹಕಾರದೊಂದಿಗೆ ಆ. 14 ಬುಧವಾರ ನಡೆಯಲಿರುವ ಬೇಲ್ ನಮ್ಮೆಯ ಪೂರ್ವಭಾವಿ ಸಭೆಯನ್ನು ಕೊಡವ ಅಕಾಡೆಮಿ ಅಧ್ಯಕ್ಷ ಅಜ್ಜಿನಿಕಂಡ ಸಿ. ಮಹೇಶ್ ನಾಚಯ್ಯ ಅಧ್ಯಕ್ಷತೆಯಲ್ಲಿ ಬೊಳ್ಳುಮಾಡು ವಿ.ಎಸ್.ಎಸ್.ಎನ್ ನಲ್ಲಿ ನಡೆಸಲಾಯಿತು.

ಬೊಳ್ಳುಮಾಡು ವಿ.ಎಸ್.ಎಸ್.ಎನ್ ಅಧ್ಯಕ್ಷರಾದ ಮಾತಂಡ ಬೇಬ ಪೂವಯ್ಯ ಮುಂದಾಳತ್ವದ ಸಭೆಯಲ್ಲಿ ಬೇಲ್ ನಮ್ಮೆಯ ರೂಪು ರೇಷೆಗಳ ಬಗ್ಗೆ ಸುದೀರ್ಘ ಚರ್ಚಿಸಲಾಯಿತು. ಅಕಾಡೆಮಿ ರಿಜಿಸ್ಟ್ರಾರ್ ಅಜ್ಜಿಕುಟ್ಟಿರ ಸಿ. ಗಿರೀಶ್ ಅಕಾಡೆಮಿಯ ಕಾರ್ಯ ವ್ಯಾಪ್ತಿಯ ಬಗ್ಗೆ ವಿವರಿಸಿದರು.

ಬೇಲ್ ನಮ್ಮೆಗೆ ರಾಜ್ಯ ಕೃಷಿ ಸಚಿವರಾದ ಚೆಲುವರಾಯ ಸ್ವಾಮಿ, ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್, ಕೊಡಗು ಜಿಲ್ಲಾ ಉಸ್ತುವಾರಿ ಸಚಿವರಾದ ಬೋಸರಾಜು, ಜಿಲ್ಲೆಯ ಶಾಸಕರುಗಳಾದ ಅಜ್ಜಿಕುಟ್ಟಿರ ಎಸ್.ಪೊನ್ನಣ್ಣ, ಡಾ. ಮಂತರ್ ಗೌಡ, ವಿಧಾನ ಪರಿಷತ್ತ್ ಸದಸ್ಯರಾದ ಮಂಡೇಪಂಡ ಸುಜಾ ಕುಶಾಲಪ್ಪ, ಜಿಲ್ಲಾಡಳಿತಾಧಿಕಾರಿಗಳು, ತಹಶೀಲ್ದಾರರು, ಕೃಷಿ ಇಲಾಖೆಯ ಜಂಟಿ ಕೃಷಿ ನಿರ್ದೇಶಕರು ಆಗಮಿಸಲಿರುವುದರಿಂದ ಸರ್ವ ರೀತಿಯ ವ್ಯವಸ್ಥೆ- ಏರ್ಪಾಡುಗಳನ್ನು ಮಾಡಿಕೊಳ್ಳುವಂತೆ



ಸಭೆಯಲ್ಲಿ ತೀರ್ಮಾನಿಸಲಾಯಿತು.

ಬೇಲ್ ನಮ್ಮೆಯ ಸಂಪೂರ್ಣ ಉಸ್ತುವಾರಿಯನ್ನು ಮಾತಂಡ ಪಿ. ಧೀರಜ್ ಚಂಗಪ್ಪ, ಮಾತಂಡ ರನ್ನ, ಮೇಚುವಂಡ ಎ. ಮಂಜು, ಕಳ್ಳಿರ ವಿನು ಕರುಂಬಯ್ಯ, ಪಟ್ಟಂಡ ಅರುಣ್, ಮುಂಡಂಡ ನವೀನ್, ಮುಕ್ಕಾಟಿರ ಬಿನ್ನು, ಮಾತಂಡ ಮಧು ಪೂವಯ್ಯ, ಅಲ್ಲಪಿರ ಶ್ವೇತ ನಾಣಯ್ಯ, ಮಾತಂಡ ಯಶ್ಮ ಕರುಂಬಯ್ಯ ಇವರುಗಳಿಗೆ ವಹಿಸಲಾಯಿತು.

ಸ್ವಾಗತ ಸಮಿತಿಗೆ ಅಕಾಡೆಮಿ ಅಧ್ಯಕ್ಷರು, ರಿಜಿಸ್ಟ್ರಾರ್, ಸದಸ್ಯರು, ಮಾತಂಡ ಬೇಬ ಪೂವಯ್ಯ, ಬಟ್ಟಕಾಳಂಡ ಕಾಮುಣಿ, ಮಾತಂಡ ಕಂಬು ಕರುಂಬಯ್ಯ ಆಯ್ಕೆ ಮಾಡಲಾಯಿತು. ವೇದಿಕೆ ಸಮಿತಿಗೆ ಅಲ್ಲಪ್ಪಿರ ಶ್ವೇತ ನಾಣಯ್ಯ, ಮಾತಂಡ ಯಶ್ಮ ಕರುಂಬಯ್ಯ, ಕಂಬು ಕರುಂಬಯ್ಯ, ಶಕು ಅಕ್ಕಮ್ಮರನ್ನು ಉಸ್ತುವಾರಿಗಳಾಗಿ ನೇಮಿಸಿಕೊಳ್ಳಲಾಯಿತು. ಪೈಪೋಟಿ ಸಮಿತಿಗೆ ಚೇನಂಡ ಸುರೇಶ್, ಮಾತಂಡ ಸೋಮಣ್ಣರಿಗೆ ಜವಾಬ್ದಾರಿ ನೀಡಲಾಯಿತು.ಸ್ವಚ್ಛತಾ ಸಮಿತಿಗೆ ಗ್ರಾಮ ಪಂಚಾಯಿತಿ ಸದಸ್ಯರಾದ ಕುಮ್ಮಂಡ ಕಾಳಯ್ಯರಿಗೆ ಜವಾಬ್ದಾರಿಕೆ ನೀಡಲಾಯಿತು. ವಾಲಗ ತಂಡದ ವ್ಯವಸ್ಥೆಯನ್ನು ಮಾತಂಡ ಮನು ದೇವಯ್ಯ ನಿರ್ವಹಿಸುವಂತೆ, ಉಳುವ ಎತ್ತಿನ ವ್ಯವಸ್ಥೆಗೆ ಪೊನ್ನಚಂಡ ಸುರೇಂದ್ರರವರನ್ನು, ಬಂದೂಕು ದಾರಿಗಳ ತಯಾರಿಗೆ ಪಂದ್ಯಂಡ ರವಿ ಹಾಗೂ ಮಾತಂಡ ಮಧು ಪೂವಯ್ಯರನ್ನು ನೇಮಿಸಕೊಳ್ಳಲಾಯಿತು. ಊಟೋಪಚಾರದ ವ್ಯವಸ್ಥೆಯನ್ನು ಕುಳಿಯಕಂಡ ಪೊನ್ನಣ್ಣ ನೋಡಿಕೊಳ್ಳುವಂತೆ ತೀರ್ಮಾನಿಸಲಾಯಿತು. ಒಯ್ಯಪಾಟ್ ಗುಂಪನ್ನು ಕೂತಂಡ ಕುಶಾಲಪ್ಪ ನಿರ್ವಹಿಸುವಂತೆ, ಕಾಕೋಟುಪರಂಬು ಗ್ರಾಮ ಪಂಚಾಯಿತಿ ವ್ಯಾಪ್ತಿಯಿಡೀ ವ್ಯಾಪಕ ಪ್ರಚಾರದ ಜವಾಬ್ದಾರಿಯನ್ನು ಪಾಲಚಂಡ ಸರೇಶ್‌ರಿಗೆ ನೀಡಲಾಯಿತು. ಓಟಾಕ ಓಟ, ಹಗ್ಗ ಜಗ್ಗಾಟ ಹಾಗೂ ನಾಟಿಗದ್ದೆಗಳ ಉಸ್ತುವಾರಿಯನ್ನು ಮಾತಂಡ ಪಂಚು, ಚೇನಂಡ ಸುರೇಶ್, ಬಡಕಡ ದೀನ ಪೂವಯ್ಯರು ನಿರ್ವಹಿಸುವಂತಾಯಿತು. ಓಟಾಕ ಓಟದಲ್ಲಿ ನಾಲ್ಕು ವಿಭಾಗಗಳಿದ್ದು ಪುರುಷರು, ಮಹಿಳೆಯರು, ಬಾಲಕರು, ಬಾಲಕಿಯರು ಇದರಲ್ಲಿ ಪುರುಷರು ಹಾಗೂ ಮಹಿಳೆಯರಲ್ಲಿ ಪ್ರಥಮ ಬಹುಮಾನವಾಗಿ ಕೋರಿಕೊಡೆಯೊಂದಿಗೆ ನಗದು ರೂ.2000, ದ್ವಿತೀಯ ರೂ.1500, ತೃತೀಯ ರೂ.1000 ಕೊಡುವಂತೆ ತೀರ್ಮಾನಿಸಲಾಯಿತು. ಹಗ್ಗ ಜಗ್ಗಾಟದಲ್ಲಿ ಪ್ರಥಮ ಬಹುಮಾನ ರೂ.10,000, ದ್ವಿತೀಯ ರೂ.7000, ಕೊಡಲಾಗುವುದು. ವೇದಿಕೆ ಕಾರ್ಯಕ್ರಮದ ವೇಳೆ ಪೊನ್ನಂಪೇಟೆ ಅರಣ್ಯ ಕಾಲೇಜಿನ ನಿವೃತ್ತ ಡೀನ್, ಕೊಡಗು ವಿಜ್ಞಾನ ವೇದಿಕೆಯ ಅಧ್ಯಕ್ಷರಾದ ಡಾ. ಚೆಪ್ಪುಡಿರ ಜಿ. ಕುಶಾಲಪ್ಪನವರಿಂದ ''ಗದ್ದೆ ಕೃಷಿ : ಕಷ್ಟ: ಸುಖ: ಪರಿಹಾರ ವಿಷಯ ವಾಗಿ ವಿಚಾರ ಮಂಡಿಸಲಾಗುವುದು. ಈ ವೇಳೆ ಕೃಷಿ ಮಂತ್ರಿಗಳು ಹಾಗೂ ಶಾಸಕರ ಸಮ್ಮುಖದಲ್ಲಿ ಹತ್ತು ನಿಮಿಷಗಳ ಕಾಲ ಕೃಷಿ ಕುರಿತಾಗಿ ರೈತಾಪಿ ವರ್ಗದಿಂದ ಸಂವಾದವನ್ನು ಏರ್ಪಡಿಸಲಾಗಿದೆ. ಅಕಾಡೆಮಿ ಅಧ್ಯಕ್ಷರಾದ ಅಜ್ಜಿನಿಕಂಡ ಸಿ. ಮಹೇಶ್ ನಾಚಯ್ಯ ಅವರು ಈ ಎಲ್ಲಾ ಸಮಿತಿಯವರು ಬೇಲ್ ನಮ್ಮೆಯನ್ನು ತಮ್ಮ ಊರಿನ ನಮ್ಮೆಯಂತೆ ಒಗ್ಗೂಡಿ ನಡೆಸಿಕೊರುವ ಭರವಸೆ ಮಾತುಗಳನ್ನಾಡಿದರು. ಸಭೆಯಲ್ಲಿ ವಿಶೇಷ ಮಹಿಳಾ ಕೃಷಿಕರಾಗಿರುವ ಮಾತಂಡ ಶಕು ಅಕ್ಕಮ್ಮರನ್ನು ವೇದಿಕೆಯಲ್ಲಿ ಸನ್ಮಾನಿಸಿ ಗೌರವಿಸುವಂತೆ ತೀರ್ಮಾನಿಸಲಾಯಿತು. ಪೂರ್ವಭಾವಿ ಸಭೆಯಲ್ಲಿ ಅಕಾಡೆಮಿಯ ಸದಸ್ಯರು ಹಾಗೂ ಸಂಚಾಕರಾದ ಪುತ್ತರಿರ ಪಪ್ಪು ತಿಮ್ಮಯ್ಯ, ಚೊಟ್ಟೆಯಂಡ ಸಂಜು ಕಾವೇರಪ್ಪ, ನಾಯಕಂಡ ಬೇಬಿ ಚಿಣ್ಣಪ್ಪ, ಪೊನ್ನಿರ ಗಗನ್, ಬೊಳ್ಳುಮಾಡು, ಕುಂಜಿಲಗೇರಿ, ಕಡಂಗ ಮರೂರು ಗ್ರಾಮಸ್ಥರು ಹಾಜರಿದ್ದರು.

## ಮೈಸೂರಿನಲ್ಲಿ 600 ಕೋಟಿ ರೂಪಾಯಿ ಹೊಸ ಹೂಡಿಕೆ

**ಬೆಂಗಳೂರು:** ಕರ್ನಾಟಕ ಇಎಸ್ಡಿಎಂ (ಎಲೆಕ್ಟ್ರಾನಿಕ್ಸ್ ಸಿಸ್ಟಂಸ್ ಡಿಸೈನ್ ಮತ್ತು ತಯಾರಿಕೆ) ವಲಯದಲ್ಲಿ ಕರ್ನಾಟಕವನ್ನು ಜಾಗತಿಕ ನಾಯಕನನ್ನಾಗಿಸುವ ಗುರಿ ಹೊಂದಲಾಗಿದ್ದು, ವಿಶ್ವ ಮಟ್ಟದಲ್ಲಿ ಹೂಡಿಕೆಗಳ ಹರಿವು ಹೆಚ್ಚಿಸುವುದು, ಹೊಸ ಉದ್ಯಮಗಳನ್ನು ಆರಂಭಿಸಲು ಉತ್ತೇಜನ ನೀಡುವುದು ಮತ್ತು ರಾಜ್ಯದಲ್ಲಿ ಪ್ರಾರಂಭಿಸಿರುವ ಉದ್ಯಮಗಳನ್ನು ಉಳಿಸಿಕೊಳ್ಳುವ ವಾತಾವರಣವನ್ನು ಸೃಷ್ಟಿಸುವುದು ಕರ್ನಾಟಕ ಸರ್ಕಾರದ ಉದ್ದೇಶವಾಗಿದೆ ಎಂದು ಗ್ರಾಮೀಣಾಭಿವೃದ್ಧಿ ಮತ್ತು



ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಖಾತೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿದರು. ಮೈಸೂರಿನಲ್ಲಿ ಸೆಮಿಕಂಡಕ್ಟರ್, ಎಲಿಮೆಂಟ್ ಮ್ಯಾನೇಜ್ಮೆಂಟ್ ಸಿಸ್ಟಂ ಮತ್ತು ಘಟಕ ಗೋದಾಮುಗಳು ಸೇರಿದಂತೆ 20ಕ್ಕೂ ಹೆಚ್ಚು ಇಎಸ್ಡಿಎಂ ಕಂಪನಿಗಳು ಕ್ಲಸ್ಟರ್ಗೆ ಸೇರ್ಪಡೆಗೊಳ್ಳುತ್ತಿದ್ದು ಸುಮಾರು 600ಕೋಟಿ ರೂ.ಗಳ ಹೊಸ ಹೂಡಿಕೆ ಹರಿದು ಬಂದಿದೆ. ಹೆಚ್ಚುವರಿಯಾಗಿ 150 ಎಕರೆಗಳಷ್ಟು ಪಿಸಿಬಿ ಕ್ಲಸ್ಟರ್ ಅನ್ನು ಸ್ಥಾಪಿಸುವ ಉದ್ದೇಶದಿಂದ ಪ್ರಸ್ತುತ ಪರೀಕ್ಷಾ ಸೌಲಭ್ಯವನ್ನು ವಿಸ್ತರಿಸಲು, ಮಲ್ಟಿಟೆನೆನ್ಸಿ ಕ್ಲೀನ್ ರೂಮ್ ಅನ್ನು ಸೇರಿಸಲು ಉದ್ದೇಶಿಸಿದ್ದೇವೆ. ಇದು 5000 ಹೊಸ ಉದ್ಯೋಗಗಳಿಗೆ ಚಾಲನೆ ನೀಡಲಿದೆ, ಅ??ಟೇ ಅಲ್ಲದೆ, ಮಹಿಳಾ ಉದ್ಯೋಗಿಗಳನ್ನು ಸಬಲೀಕರಣಗೊಳಿಸಲು ಸಹಕಾರವಾಗಲಿದೆ, ಈ ಎಲ್ಲಾ ಬೆಳವಣಿಗೆಯಿಂದ ಜಾಗತಿಕ ಕಂಪನಿಗಳು ಮೈಸೂರಿನಲ್ಲಿ ಬೆಳೆಯಲು ಇದು ಉತ್ತಮ ಸಮಯವಾಗಿದೆ ಎಂದು ತಿಳಿಸಿದರು. ಮೈಸೂರಿನಲ್ಲಿ ಡಿಜಿಟಲ್ ಎಕಾನಮಿ ಮಿಷನ್ (ಕೆಡಿಇಎಂ) ಮತ್ತು ಇಂಡಿಯಾ ಎಲೆಕ್ಟ್ರಾನಿಕ್ಸ್ ಮತ್ತು ಸೆಮಿಕಂಡಕ್ಟರ್ ಅಸೋಸಿಯೇಷನ್ (ಕೆಡಿಇಎಂ) ಸಹಯೋಗದಲ್ಲಿ 4ನೇ ಆವೃತ್ತಿ ಅನಾವರಣಗೊಳಿಸುತ್ತಿರುವ ಸಂದರ್ಭದಲ್ಲಿ ನೀಡಿರುವ ಸಂದೇಶದಲ್ಲಿ ಸಚಿವರು ಮೈಸೂರನ್ನು ಉದ್ಯೋಗಶೀಲ ನಗರವನ್ನಾಗಿ ವರ್ಧಿಸಲು ಮಾಹಿತಿ ತಂತ್ರಜ್ಞಾನ ಇಲಾಖೆ ಯೋಜಿಸಿದೆ ಎಂದು ತಿಳಿಸಿದರು.

## ಆರ್ಥಿಕ ನೆರವು ಅರ್ಜಿ ಆಹ್ವಾನ

**ಮಂಡ್ಯ:** ಹಿಂದುಳಿದ ವರ್ಗಗಳ ನಿಗಮಗಳಡಿ 2024-25ನೇ ಸಾಲಿಗೆ ಶೈಕ್ಷಣಿಕ ಉದ್ದೇಶಕ್ಕಾಗಿ ಅರಿವು ಶೈಕ್ಷಣಿಕ ಸಾಲ ಯೋಜನೆ (ಹೊಸತು), ನವೀಕರಣ ಹಾಗೂ ವಿದೇಶಿ ವಿಶ್ವವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕೆ ಆರ್ಥಿಕ ನೆರವು ಯೋಜನೆಗಳಡಿ ಅರ್ಜಿ ಆಹ್ವಾನಿಸಲಾಗಿರುತ್ತದೆ. ಅರ್ಜಿದಾರರು ಸಾಮಾನ್ಯ ಅರ್ಹತೆಗಳು: ತಮ್ಮ ಆಧಾರ್ ಸಂಖ್ಯೆಗೆ ಕಡ್ಡಾಯವಾಗಿ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ಜೋಡಣೆ ಮಾಡಿರಬೇಕು. ಅರ್ಜಿದಾರರು ನಿಗಮವಾರು ಆಯಾ ಸಮುದಾಯದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಹೊಂದಿರಬೇಕು. ಅರಿವು ಶೈಕ್ಷಣಿಕ ಸಾಲ ಯೋಜನೆಯಡಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳ ಕುಟುಂಬದ ವಾರ್ಷಿಕ ವರಮಾನವು ರೂ. 3.50 ಲಕ್ಷಗಳ ಮಿತಿಯಲ್ಲಿರುಬೇಕು ಮತ್ತು ಗರಿಷ್ಟ ವಯೋಮಿತಿ 18-35 ವರ್ಷಗಳು. ವಿದೇಶಿ ವಿದ್ಯಾಲಯಗಳಲ್ಲಿ ಉನ್ನತ ವ್ಯಾಸಂಗಕ್ಕಾಗಿ ಸೌಲಭ್ಯ ಪಡೆಯುವ ವಿದ್ಯಾರ್ಥಿಗಳ ಕುಟುಂಬ ವಾರ್ಷಿಕ ವರಮಾನ 8.00 ಲಕ್ಷಗಳ ಮಿತಿಯಲ್ಲಿರಬೇಕು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಶೇ.60ಕ್ಕಿಂತಲೂ ಹೆಚ್ಚಿನ ಅಂಕ ಪಡೆದಿರಬೇಕು. QS World Ranking 500 ರೊಳಗೆ ಬರುವ ವಿಶ್ವವಿದ್ಯಾನಿಲಯಗಳಲ್ಲಿ ಪ್ರವೇಶಾತಿ ಖಾತರಿಯಾಗಿರಬೇಕು ಹಾಗೂ ಗರಿಷ್ಟ ವಯೋಮಿತಿ 27 ವರ್ಷಗಳಾಗಿರಬೇಕು. ಆಸಕ್ತ ವಿದ್ಯಾರ್ಥಿಗಳು ಆಯಾ ಸಮುದಾಯದ ಅರಿವು ಶೈಕ್ಷಣಿಕ ಯೋಜನೆಯಡಿ ಸೌಲಭ್ಯ ಕೋರಿ ಆನ್ ಲೈನ್ ಮೂಲಕ ಸೇವಾ ಸಿಂಧು ಪೋರ್ಟಲ್‌ನಲ್ಲಿ https://sevasindhu.karnataka.gov.in ಗ್ರಾಮ ಒನ್, ಕರ್ನಾಟಕ ಒನ್, ಬೆಂಗಳೂರು ಒನ್ ಸೇವಾ ಕೇಂದ್ರಗಳಲ್ಲಿ ಆಗಸ್ಟ್ 31 ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿರುತ್ತದೆ. ಹೆಚ್ಚಿನ ಮಾಹಿತಿಗಾಗಿ ಆಯಾ ನಿಗಮಗಳ ವೆಬ್ ಸೈಟ್ bcwdcorporations.karnataka.gov.in ಅಥವಾ ಮಂಡ್ಯ ಜಿಲ್ಲಾ ಕಛೇರಿ ದೂರವಾಣಿ ಸಂಖ್ಯೆ: 08232-231804 ಸಂಪರ್ಕಿಸಬಹುದಾಗಿದೆ ಎಂದು ಡಿ.ಬಿ.ಸಿ.ಡಿ.ಸಿ ಜಿಲ್ಲಾ ವ್ಯವಸ್ಥಾಕಪರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**ಬೆಂಗಳೂರು:** ಕರ್ನಾಟಕ ವೀರಶೈವ-ಲಿಂಗಾಯತ ಅಭಿವೃದ್ಧಿ ನಿಗಮ ನಿಯಮಿತ, ಬೆಂಗಳೂರು ಇವರ ವತಿಯಿಂದ 2024-25 ನೇ ಸಾಲಿಗೆ ವೀರಶೈವ-ಲಿಂಗಾಯತ ಜಾತಿ ಹಾಗೂ ಉಪಜಾತಿಗೆ ಸೇರಿದ ಸಮುದಾಯದ ಜನರ (ಪ್ರವರ್ಗ-3ಬಿ) ಅಭಿವೃದ್ಧಿಗಾಗಿ ಶೈಕ್ಷಣಿಕ ಸಾಲ ಯೋಜನೆ (ಬಸವಬೆಳಗು ಮತ್ತು ವಿದೇಶ ವಿದ್ಯಾವಿಕಾಸ), ಜೀವಜಲ (ಗಂಗಾಕಲ್ಯಾಣ), ಸ್ವಯಂ ಉದ್ಯೋಗ ಯೋಜನೆಗಳು (ಕಾಯಕಕಿರಣ, ಸ್ವಾವಲಂಭಿ ಸಾರಥಿ, ವಿಭೂತಿ ನಿರ್ಮಾಣ ಘಟಕ, ಭೋಜನಾಲಯ ಕೇಂದ್ರ ಮತ್ತು ಸ್ವಯಂ ಉದ್ಯೋಗ ಬ್ಯಾಂಕ್ ಸಹಯೋಗದೊಂದಿಗೆ) ಗಳಿಗೆ ಸೇವಾಸಿಂಧು ತಂತ್ರಾಂಶದ ಮೂಲಕ ಆನ್ಲೈನ್ನಲ್ಲಿ ಅರ್ಜಿಗಳನ್ನು ಆಹ್ವಾನಿಸಲಾಗಿದೆ.ಅರ್ಹ ಫಲಾಪೇಕ್ಷಿಗಳು ಗ್ರಾಮ ಒನ್/ ಬೆಂಗಳೂರು ಒನ್/ ಕರ್ನಾಟಕ ಒನ್ ನಾಗರೀಕ ಸೇವಾ ಕೇಂದ್ರಗಳಲ್ಲಿ ದಾಖಲೆಗಳೊಂದಿಗೆ ಸೇವಾಸಿಂಧು ಪೋರ್ಟಲ್ನಲ್ಲಿ ಅರ್ಜಿಗಳನ್ನು ಸಲ್ಲಿಸಬೇಕಾಗಿರುತ್ತದೆ. 2023-24 ನೇ ಸಾಲಿಗೆ ಅರ್ಜಿ ಸಲ್ಲಿಸಿ ಆಯ್ಕೆಯಾಗದವರು ಅದೇ ಯೋಜನೆಗೆ ಈ ವರ್ಷ ಮರುಅರ್ಜಿ ಸಲ್ಲಿಸುವ ಅಗತ್ಯತೆ ಇರುವುದಿಲ್ಲ. ಸ್ವಾತಂತ್ರ್ಯ ಅಮೃತ ಮಹೋತ್ಸವದ ಮುನ್ನಡೆ ಯೋಜನೆಯಡಿ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ತರಬೇತಿಯನ್ನು ಸರ್ಕಾರಿ ಸ್ವಾಮ್ಯದ ಸಂಸ್ಥೆಗಳಾದ ಖಖಿಖ, ಉಖಿಖಿಅ ಏಉಖಿಖಿಖ ೦ಖಿಆಅ ಗಿಖಿಗ ಮೂಲಕ ತರಬೇತಿಯನ್ನು ಪಡೆಯಲು ಅರ್ಜಿದಾರ https://www.kaushalkar.com ಜಾಲತಾಣದೊಂದಿಗೆ ಅರ್ಜಿಯನ್ನು ಆಗಸ್ಟ್ 31, 2024ರೊಳಗೆ ಸಲ್ಲಿಸಬಹುದು. ನಿಗಮದ ಜಾಲತಾಣ https://www.kaushalkar.com/ ಅಥವಾ ನಿಗಮದ ದೂರವಾಣಿ ಸಂಖ್ಯೆ 080 22865522/ 9900012351 ನ್ನು ಅಥವಾ ಜಿಲ್ಲಾ ವ್ಯವಸ್ಥಾಪಕರು, ಡಿ. ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮದ ಜಿಲ್ಲಾ ಕಛೇರಿ ಸಂಪರ್ಕಿಸಬಹುದಾಗಿದೆ .

# ಕರ್ನಾಟಕ ಗ್ರಾಮೀಣ ಬ್ಯಾಂಕಿನಿಂದ ನಬಾರ್ಡ್ ಕೃಷಿಗೆ ಸಂಬಂಧಿಸಿದ ಸಾಲ ಸೌಲಭ್ಯಗಳು

**ಹುಳಿಯಾರು:** ರೈತರು, ಸ್ವಸಹಾಯ ಸಂಘಗಳು ಈಗಾಗಲೇ ಪಡೆದಿರುವ ಸಾಲಗಳ ಮರುಪಾವತಿಯನ್ನು ಮಾಡಿದಲ್ಲಿ ಹೊಸದಾಗಿ ಕಡಿಮೆ ಬಡ್ಡಿ ದರದಲ್ಲಿ ದೊರೆಯುವ ಕಿಸಾನ್ ಕ್ರೆಡಿಟ್ ಕಾರ್ಡ್ ಸಾಲ ಸೌಲಭ್ಯದ ಜೊತೆಗೆ ಮುದ್ರಾ ಯೋಜನೆ, ವಿಶ್ವಕರ್ಮ ಯೋಜನೆ, ಜಮೀನು ಅಭಿವೃದ್ಧಿ ಸಾಲ, ಸ್ಟ್ಯಾಂಡ್ ಅಫ್ ಇಂಡಿಯಾ ನಬಾರ್ಡ್ ಯೋಜನೆ ಮುಂತಾದ ಸಾಲ ಸೌಲಭ್ಯಗಳನ್ನು ನೀಡಲಾಗುವುದು ಎಂದು ಕಂದಿಕೆರೆ ಕರ್ನಾಟಕ ಗ್ರಾಮೀಣ ಬ್ಯಾಂಕಿನ ವ್ಯವಸ್ಥಾಪಕರಾದ ಆರ್.ತಿಪ್ಪೇಸ್ವಾಮಿ ತಿಳಿಸಿದರು. ಕರ್ನಾಟಕ ಗ್ರಾಮೀಣ ಬ್ಯಾಂಕ್ ಕಂದಿಕೆರೆ ಹಾಗೂ ಆರ್ಥಿಕ ಸಾಕ್ಷರತಾ ಕೇಂದ್ರ, ಚಿಕ್ಕನಾಯಕನಹಳ್ಳಿ ಜಂಟಿಯಾಗಿ ಕಂದಿಕೆರೆ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿರುವ ರಾಮಪ್ಪನಹಟ್ಟಿಯಲ್ಲಿ ಏರ್ಪಡಿಸಿದ್ದ



ಜನ ಸುರಕ್ಷಾ ಶಿಬಿರದಲ್ಲಿ ಮಾತನಾಡಿದರು. ಆರ್ಥಿಕ ಸಾಕ್ಷರತಾ ಸಲಹೆಗಾರರಾದ ಆರ್. ಎಂ.ಕುಮಾರಸ್ವಾಮಿ ಕೇಂದ್ರ ಸರ್ಕಾರದ ಯೋಜನೆಗಳಾದ ವಿಮಾ ಯೋಜನೆಗಳ ಬಗ್ಗೆ ತಿಳುವಳಿಕೆ ನೀಡಿದರಲ್ಲದೆ ಕೇವಲ ನಿಮ್ಮ ಅಂಗೈಯಲ್ಲಿರುವ ಮೊಬೈಲ್ ಮುಖಾಂತರ ಬ್ಯಾಂಕಿನ ವ್ಯವಹಾರಗಳನ್ನು ಮಾಡಿ ಡಿಜಿಟಲ್ ಬ್ಯಾಂಕಿಗೆ ಹೊತ್ತು ನೀಡಬೇಕೆಂದು ಕರೆ ನೀಡಿದರು.

ಕರ್ನಾಟಕ ಗ್ರಾಮೀಣ ಬ್ಯಾಂಕಿನ ಅಧಿಕಾರಿಯದ ಈರಣ್ಣ ಅಶೋಕ್, ಕಂದಿಕೆರೆ ಗ್ರಾಮ ಪಂಚಾಯಿತಿ ಸದಸ್ಯರಾದ ವಸಂತ್, ಮಾಜಿ ಸದಸ್ಯ ಈರಣ್ಣ , ಸಂಜೀವಿನಿ ಒಕ್ಕೂಟದ ಎಂಬಿಕೆ ಲಕ್ಷ್ಮಿ ಉಪಸ್ಥಿತರಿದ್ದರು.

# ಡೆಂಗ್ಯೂ ನಿಯಂತ್ರಣಕ್ಕೆ ಗ್ರಾಮಾಂತರ ಪ್ರದೇಶದಲ್ಲಿ ಒತ್ತು

**ಚಿಕ್ಕಬಳ್ಳಾಪುರ:** ಜಿಲ್ಲೆಯ ಗ್ರಾಮಾಂತರ ಪ್ರದೇಶಗಳಲ್ಲಿ ಡೆಂಗ್ಯೂ ಜ್ವರವು ಏರುಗತಿ ಸ್ಥಿತಿಯಲ್ಲಿದ್ದು, ಗ್ರಾಮಗಳಲ್ಲಿ ಸಮಗ್ರ ಸ್ವಚ್ಛತೆಗೆ ಒತ್ತು ನೀಡುವ ಮೂಲಕ ನಿಯಂತ್ರಣ ಕ್ರಮಗಳನ್ನು ಕೈಗೊಳ್ಳಬೇಕಿದೆ. ಆ ನಿಟ್ಟಿನಲ್ಲಿ ಸ್ಥಳೀಯ ಅಧಿಕಾರಿಗಳು ಅಗತ್ಯ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಪಿ.ಎನ್ ರವೀಂದ್ರ ಅವರು ಸೂಚನೆಗಳನ್ನು ನೀಡಿದರು.

ಜಿಲ್ಲಾಡಳಿತ ಭವನದ ಜಿಲ್ಲಾ ಪಂಚಾಯತ್ ನ ಸರ್. ಎಂ ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ಮಂಗಳವಾರ ನಡೆದ



''ವಿಪತ್ತು ನಿರ್ವಹಣಾ ಪ್ರಾಧಿಕಾರದ ಸಭೆ''ಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಜೂನ್ 1 ರಿಂದ ಜುಲೈ 31 ರ ವರಗೆ ಜಿಲ್ಲೆಯಲ್ಲಿ 210 ಡೆಂಗ್ಯೂ ಪ್ರಕರಣಗಳು ದಾಖಲಾಗಿದ್ದವು. ಕಳೆದ 5 ದಿನಗಳಲ್ಲಿ 16 ಪ್ರಕರಣಗಳು ವರದಿಯಾಗಿದ್ದು,ಪ್ರಸ್ತುತ 226 ಪ್ರಕರಣಗಳು ದಾಖಲಾಗಿವೆ. ಶೇ. 80 ರಷ್ಟು ಪ್ರಕರಣಗಳು ಗ್ರಾಮಾಂತರ ಪ್ರದೇಶದಲ್ಲಿ ದಾಖಲಾಗಿವೆ.ಆದ್ದರಿಂದ ಗ್ರಾಮಾಂತರ ಪ್ರದೇಶಗಳಲ್ಲಿ ಸೊಳ್ಳೆ ಉತ್ಪತ್ತಿ ತಾಣಗಳ ನಾಶ ಕಾರ್ಯವನ್ನು ಸಮರೋಪಾಧಿಯಲ್ಲಿ ಕೈಗೊಳ್ಳಬೇಕಿದೆ. ಎಲ್ಲಾ ನೀರಿನ ತೊಟ್ಟಿಗಳು, ಡ್ರಮ್, ಬ್ಯಾರಲ್ ಗಳು, ಏರ್ ಕೂಲರ್ ಇತ್ಯಾದಿಗಳನ್ನು ವಾರಕ್ಕೊಮ್ಮೆ ಶುಕ್ರವಾರ ಒಣಗಲು ದಿನವಾಗಿ ಆಚರಿಸಬೇಕು. ಒಣಗಿಸಿ ಪುನಃ ನೀರು ಭರ್ತಿ ಮಾಡಬೇಕು. ನೀರು ಖಾಲಿ ಮಾಡಲು ಸಾಧ್ಯವಿಲ್ಲದಿದ್ದಲ್ಲಿ ತೊಟ್ಟಿ ಮುಂತಾದವುಗಳಲ್ಲಿ ಕೀಟಗಳು ನುಸುಳದಂತೆ



ಸರಿಯಾದ ಮುಚ್ಚಳದಿಂದ ಮುಚ್ಚಬೇಕು. ಬಯಲಿನಲ್ಲಿರುವ ಘನತ್ಯಾಜ್ಯ ವಸ್ತುಗಳಾದ ಟೈರು, ಎಳನೀರಿನ ಚಿಪ್ಪು, ಒಡೆದ ಬಾಟಲಿ ಮುಂತಾದವುಗಳಲ್ಲಿ ಮಳೆ ನೀರು ಸಂಗ್ರಹವಾಗದಂತೆ ಎಚ್ಚರವಹಿಸುವುದು ಅಥವಾ ಸೂಕ್ತ ವಿಲೇವಾರಿ ಮಾಡುವುದು. ಸ್ವಯಂ ರಕ್ಷಣಾ ವಿಧಾನಗಳಾದ ಸೊಳ್ಳೆ ನಿರೋಧಕಗಳನ್ನು ಹಾಗೂ ಸೊಳ್ಳೆ ಪರದೆಗಳನ್ನು ಬಳಸುವುದು. ಸೊಳ್ಳೆ ಕಚ್ಚದಂತೆ ಮುನ್ನಎಚ್ಚರವಹಿಸುವಂತೆ ಸಾರ್ವಜನಿಕರಲ್ಲಿ ಎಲ್ಲಾ ಇಲಾಖೆಯ ಅಧಿಕಾರಿಗಳು ಡೆಂಗ್ಯೂ ಜ್ವರ ನಿಯಂತ್ರಣಕ್ಕೆ ಕಟ್ಟು ನಿಟ್ಟಿನ ಅಗತ್ಯ ಕ್ರಮವಹಿಸಬೇಕು ಅದರಲ್ಲೂ ತಾಲೂಕು ಪಂಚಾಯಿತಿ ಕಾರ್ಯ ನಿರ್ವಹಣಾಧಿಕಾರಿಗಳು ಹೆಚ್ಚಿನ ನಿಗಾ ವಹಿಸಬೇಕು ಎಂದರು.

15 ನೇ ಹಣಕಾಸು ಯೋಜನೆಯಡಿ ಜಿಲ್ಲೆಯಲ್ಲಿ 37 ಆಯುಷ್ ಆರೋಗ್ಯ ಕೇಂದ್ರಗಳನ್ನು ನಿರ್ಮಿಸಲು ಯೋಜಿಸಲಾಗಿದ್ದು, ಅದಕ್ಕಾಗಿ ಜಾಗ ಗುರ್ತಿಸಲು ತಹಸೀಲ್ದಾರ್ ರವರಿಗೆ ಸೂಚನೆ ನೀಡಿದರು.

### ಆಯುಷ್ ಅರೋಗ್ಯ ಕೇಂದ್ರಗಳ ತಾಲೂಕುವಾರು ಗುರಿ ವಿವರ

**ಚಿಕ್ಕಬಳ್ಳಾಪುರ ತಾಲೂಕು -9, ಚಿಂತಾಮಣಿ ತಾಲೂಕು -5, ಶಿಡ್ಲಘಟ್ಟ ತಾಲೂಕು -4, ಗೌರಿಬಿದನೂರು ತಾಲೂಕು -4, ಬಾಗೇಪಲ್ಲಿ ತಾಲೂಕು -13, ಗುಡಿಬಂಡೆ ತಾಲೂಕು -3 ಗೋಡೆಗಳನ್ನು ಮಣ್ಣಿನಿಂದ ಹಾಗೂ ಚಾವಣಿಯನ್ನು ಕಲ್ಲು ಚಪ್ಪಡಿಗಳಿಂದ ನಿರ್ಮಿಸಿರುವ ಕಚ್ಚಾ ಮನೆಗಳನ್ನು ತಮ್ಮ ವ್ಯಾಪ್ತಿಯಲ್ಲಿ ಕಂದಾಯ ನಿರೀಕ್ಷಕರು ತುರ್ತಾಗಿ ಗುರ್ತಿಸಿ ಪಟ್ಟಿ ಮಾಡಿಟ್ಟು ಕೊಳ್ಳಬೇಕು. ಮುಂದಿನ ದಿನಗಳಲ್ಲಿ ಜಡಿ ಮಳೆ ಬರುವ ಸಾಧ್ಯತೆ ಇದ್ದು ಅಂತಹ ಸಂದರ್ಭದಲ್ಲಿ ಕಚ್ಚಾ ಮನೆಗಳಲ್ಲಿ ವಾಸ ಮಾಡುವವರನ್ನು ಸುರಕ್ಷಿತ ಸ್ಥಳಗಳಿಗೆ ಸ್ಥಳಾಂತರಿಸಲು ಮುನ್ನೆಚ್ಚರಿಕೆ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಡಿಸಿ ತಿಳಿಸಿದರು. ಕೃಷಿ ಮತ್ತು ತೋಟಗಾರಿಕಾ ಬೆಳೆಗಳಿಗೆ ಎಲ್ಲ ರೈತರು ಬೆಳೆ ವಿಮೆಗಳನ್ನು ಮಾಡಿಸುವಂತೆ ಜಾಗೃತಿ ಕಾರ್ಯಕ್ರಮಗಳನ್ನು ಕೃಷಿ ಮತ್ತು ತೋಟಗಾರಿಕಾ ಇಲಾಖೆ ಅಧಿಕಾರಿಗಳು ಹಮ್ಮಿಕೊಳ್ಳಬೇಕೆಂದು ಸೂಚಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಕುಶಲ್ ಚೌಕ್ಸೆ, ಅಪರ ಜಿಲ್ಲಾಧಿಕಾರಿ ಎನ್. ಭಾಸ್ಕರ್, ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಅಪೂರ್ವ ಬಿದರಿ, ಜಿಲ್ಲಾ ಮತ್ತು ತಾಲೂಕು ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು. ತಾಲೂಕುವಾರು ಡೆಂಗ್ಯೂ ಜ್ವರದ ವಿವರಚಿಕ್ಕಬಳ್ಳಾಪುರ ತಾಲೂಕು -64, ಚಿಂತಾಮಣಿ ತಾಲೂಕು -36, ಶಿಡ್ಲಘಟ್ಟ ತಾಲೂಕು -46, ಗೌರಿಬಿದನೂರು ತಾಲೂಕು - 47, ಬಾಗೇಪಲ್ಲಿ ತಾಲೂಕು -22, ಗುಡಿಬಂಡೆ ತಾಲೂಕು -11 ಪ್ರಕರಣಗಳು ದಾಖಲಾಗಿವೆ.**



## ಆಟೋ ಪ್ರಚಾರ ಕಾರ್ಯಕ್ರಮಕ್ಕೆ ಚಾಲನೆ

ರಾಮನಗರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಕಾರ್ಮಿಕ ಇಲಾಖೆ ಹಾಗೂ ಜಿಲ್ಲಾ ಬಾಲ ಕಾರ್ಮಿಕ ಯೋಜನಾ ಸೊಸೈಟಿ ಇವರ ಸಹಯೋಗದೊಂದಿಗೆ ಬಾಲ ಕಾರ್ಮಿಕ ನಿರ್ಮೂಲನಾ ಅಭಿಯಾನದಡಿ ಆಟೋ ಪ್ರಚಾರ ಕಾರ್ಯಕ್ರಮವನ್ನು ಆ. 5ರ ಸೋಮವಾರ ನಗರದ ಜಿಲ್ಲಾ ಮತ್ತು ಸತ್ರ ನ್ಯಾಯಾಲಯದ ಆವರಣದಲ್ಲಿ ಏರ್ಪಡಿಸಲಾಗಿತ್ತು. ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ನ್ಯಾ. ಬಿ.ವಿ.ರೇಣುಕ ಅವರು ಆಟೋ ಪ್ರಚಾರ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು. ಕಾರ್ಯಕ್ರಮದಲ್ಲಿ ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಸದಸ್ಯ ಕಾರ್ಯದರ್ಶಿಗಳಾದ ಸವಿತ.ಪಿ.ಆರ್, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಶ್ರೀವತ್ಸ, ಉಪಾಧ್ಯಕ್ಷರಾದ ವಿ. ಚಂದ್ರಶೇಖರ್, ಕಾರ್ಯದರ್ಶಿ ತಿಮ್ಮೇಗೌಡ ಎಸ್, ಖಜಾಂಚಿ ಮಂಜೇಶ್ ಗೌಡ, ಜಿಲ್ಲಾ ಕಾರ್ಮಿಕ ಅಧಿಕಾರಿ ಎಚ್.ಆರ್. ನಾಗೇಂದ್ರ ಹಾಗೂ ಇತರರು ಭಾಗವಹಿಸಿದ್ದರು.



**ರಾಜ್ಯಪಾಲರ ಭೇಟಿ**

**ಕರ್ನಾಟಕ ಸರ್ಕಾರದ ನೂತನ ಮುಖ್ಯ ಕಾರ್ಯದರ್ಶಿ ಡಾ. ಶಾಲಿನಿ ರಜನೀಶ್ ಅವರು ಅಧಿಕಾರ ವಹಿಸಿಕೊಂಡ ನಂತರ ಮೊದಲ ಬಾರಿಗೆ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಸೌಹಾರ್ದಯುತವಾಗಿ ರಾಜಭವನದಲ್ಲಿ ಇಂದು ಭೇಟಿ ಮಾಡಿದರು.**

# ಕೃಷಿ ವಿಶ್ವವಿದ್ಯಾನಿಲಯದಲ್ಲಿ ಸ್ನಾತಕೋತ್ತರ ವಿಜ್ಞಾನ ಸಪ್ತಾಹ

**ಬೆಂಗಳೂರು:** ಸ್ನಾತಕೋತ್ತರ ಅಧ್ಯಯನ ನಿರ್ದೇಶನಾಲಯ, ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು ರವರು ಹಮ್ಮಿಕೊಂಡಿದ್ದ ''ಸ್ನಾತಕೋತ್ತರ ವಿಜ್ಞಾನ ಸಪ್ತಾಹ 2024''ರ ಉದ್ಘಾಟನಾ ಕಾರ್ಯಕ್ರಮವನ್ನು ಇಂದು ಗಾಂಧಿ ಕೃಷಿ ವಿಜ್ಞಾನ ಕೇಂದ್ರದ ಆವರಣದಲ್ಲಿ ನೆರವೇರಿಸಲಾಯಿತು.

ಕಾರ್ಯಕ್ರಮವನ್ನು ಉದ್ಘಾಟಿಸಿದ ಕೃಷಿ ವಿಶ್ವವಿದ್ಯಾನಿಲಯದ ಕುಲಪತಿಗಳಾದ ಡಾ. ಎಸ್ .ವಿ.ಸುರೇಶ ಅವರು ಮಾತನಾಡಿ ಸಂಶೋಧನೆ ಬದುಕಿನ ಒಂದು ಕ್ರಮ. ಇಂದಿನ ಸಂಶೋಧನೆಗಳು ಭವಿಷ್ಯದ ಅಭಿವೃದ್ಧಿಗೆ ಬುನಾದಿ. ಯುವ ಜನತೆ ಸಂಶೋಧನೆಗಳ ಬಗ್ಗೆ ಹೆಚ್ಚು ಒತ್ತು ನೀಡಿ ಸ್ಥಳೀಯ ಸಮಸ್ಯೆಗಳನ್ನು ಪರಿಹರಿಸುವತ್ತ ಹೆಚ್ಚು ಗಮನವಹಿಸಬೇಕು ಎಂದರು.

ವಿಜ್ಞಾನ ಸಪ್ತಾಹವು ಸಂಶೋಧನೆಯ ಮೂಲಭೂತ ಹಾಗೂ ಅನ್ವಯಿಕ ಆಯಾಮಗಳೆರಡನ್ನೂ ಪರಿಚಯಿಸುವುದರ ಜೊತೆಗೆ ಪರಿಣಾಮಕಾರಿ ಸಂವಹನ ಪ್ರಾವೀಣ್ಯತೆಯನ್ನು ಸಾಧಿಸಲು ನೆರವಾಗುತ್ತದೆ. ಕೃಷಿಯು ವೈಜ್ಞಾನಿಕ ಜ್ಞಾನವನ್ನು ಸಂಯೋಜಿಸಿ ವರ್ಗಾಯಿಸುವಲ್ಲಿ ಸಹಕಾರಿಯಾಗುತ್ತದೆ. ಸ್ನಾತಕೋತ್ತರ ಅಧ್ಯಯನ ವಿಭಾಗದಲ್ಲಿ 2014 ರಿಂದ ಪ್ರಾರಂಭವಾದ ಈ ವಿಜ್ಞಾನ ಕಾರ್ಯಕ್ರಮವು ಇಂದು ಕೃವಿವಿ, ಬೆಂಗಳೂರಿನ ಪ್ರತಿಷ್ಠಿತ ವಾರ್ಷಿಕ ಕಾರ್ಯಕ್ರಮವಾಗಿ ಬೆಳೆದಿದೆ ಮತ್ತು ಬಲವಾದ ವೈಜ್ಞಾನಿಕ ತತ್ತ್ವಶಾಸ್ತ್ರ ಹಾಗೂ ಕಠಿಣ ಮೌಲ್ಯಮಾಪನ ಪ್ರಕ್ರಿಯೆಗಾಗಿ ಗುರುತಿಸಲ್ಪಟ್ಟಿದೆ. ಇದು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ತಮ್ಮ ಸಂಶೋಧನಾ ಪ್ರಯತ್ನಗಳು ಮತ್ತು ಆವಿಷ್ಕಾರಗಳನ್ನು ಪ್ರಸ್ತುತಪಡಿಸಲು ಒಂದು ವೈಶಿಷ್ಟ ವೇದಿಕೆಯನ್ನು ಒದಗಿಸಿ ಭಾರತದ ಇನ್ನಿತರೆ ಕೃಷಿ ವಿಶ್ವವಿದ್ಯಾನಿಲಯಗಳ ಮೆಚ್ಚುಗೆಯನ್ನು ಗಳಿಸಿದೆ.

ಈ ವಿಚಾರ ಸಂಕಿರಣವು ಕೃಷಿ ವಿಜ್ಞಾನದ ತಿಳುವಳಿಕೆಯನ್ನು ಹೆಚ್ಚಿಸುವುದರ ಜೊತೆಗೆ ಪರಿಣಾಮಕಾರಿ ಸಂವಹನ ಕೌಶಲ್ಯಗಳನ್ನು ಹದಗೊಳಿಸುವುದರ ಮೂಲಕ ಸಂಶೋಧನಾ ಉತ್ಕೃಷ್ಟತೆಯನ್ನು ಪ್ರೇರೇಪಿಸುವ ಹಾಗೂ ಪೋಷಿಸುವ ಗುರಿಯನ್ನು ಹೊಂದಿದೆ, ಮುಂದಿನ ದಿನಗಳಲ್ಲಿ ಅಂತರ ಕೃಷಿ ವಿಶ್ವವಿದ್ಯಾನಿಲಯಗಳ ವಿಜ್ಞಾನ ಸಪ್ತಾಹವನ್ನಾಗಿ ಆಚರಿಸಲು ಕ್ರಮ ಕೈಗೊಳ್ಳಲಾಗುವುದು. ಇದರಿಂದಾಗಿಸಂಶೋಧನೆಗಳ ಫಲಶೃತಿಗಳನ್ನು ಇತರೆ ಕೃಷಿ ವಿಶ್ವವಿದ್ಯಾನಿಲಯಗಳ ಜೊತೆ ಹಂಚಿಕೊಳ್ಳಲು ವೇದಿಕೆಯನ್ನು ಕಲ್ಪಿಸುತ್ತದೆ. ವೈಜ್ಞಾನಿಕ ಅನ್ವೇಷಣೆಯು ಕುತೂಹಲತೆಯಲ್ಲಿ ಅಡಗಿದೆ. ಆದ್ದರಿಂದ ಪ್ರತಿಯೊಬ್ಬ ವಿದ್ಯಾರ್ಥಿಯು ವೈಚಾರಿಕತೆಯನ್ನು ಒರೆಹಚ್ಚುವ ಮೂಲಕ ಹೊಸ ಅನ್ವೇಷಣೆಗಳಿಗೆ ಮುಂದಾಗಬೇಕು ಎಂದು ಕರೆಯಿತ್ತರು. ಡೀನ್ (ಸ್ನಾತಕೋತ್ತರ ಅಧ್ಯಯನ) (ವಿಶ್ರಾಂತ) ಹಾಗೂ ಖ್ಯಾತ ಕಾದಂಬರಿಕಾರರಾದ ಡಾ. ಕೆ.ಎನ್.ಗಣೇಶಯ್ಯ ಮುಖ್ಯ ಅತಿಥಿಯಾಗಿ ಭಾಗವಹಿಸಿ, ಮಾತನಾಡಿದ ಅರು ಪ್ರಸ್ತುತ ಪರಿಸ್ಥಿತಿಯಲ್ಲಿ ಮಹಿಳೆಯರು ಎಲ್ಲಾ ರಂಗದಲ್ಲೂ ತಮ್ಮದೇ ಆದ ಛಾಪು ಮೂಡಿಸಿದ್ದಾರೆ.ಮಹಿಳೆಯರು ಆರ್ಥಿಕ, ರಾಜಕೀಯ, ಕ್ರೀಡೆ, ರಕ್ಷಣಾ ಕ್ಷೇತ್ರ, ವಿಶೇಷವಾಗಿ ವಿಜ್ಞಾನ ಕ್ಷೇತ್ರ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಸೇವೆ ಸಲ್ಲಿಸಿ ದೇಶದ ಅಭಿವೃದ್ಧಿಗೆ ಶ್ರಮಿಸುತ್ತಿದ್ದಾರೆ. ಇವರ ತಾಳ್ಮೆ, ಧೈರ್ಯ, ಉತ್ಸಾಹ ಮತ್ತು ನೈಪುಣ್ಯತೆಯಿಂದ ಯಾವುದೇ ಕೆಲಸವನ್ನು ಅಚ್ಚುಕಟ್ಟಾಗಿ ಮಾಡಬಲ್ಲರು, ವೈಚಾರಿಕ ಕಟ್ಟುಪಾಡುಗಳಿಂದ ಹೊರಬಂದು ವೈಜ್ಞಾನಿಕ ರೀತಿಯಲ್ಲಿ ಚಿಂತಿಸಿ ಪ್ರಗತಿಯ ಪಥದಲ್ಲಿ ಸಾಗಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಕೃಷಿ ವಿಶ್ವವಿದ್ಯಾನಿಲಯದ ಶಿಕ್ಷಣ ನಿರ್ದೇಶಕರಾದ ಡಾ. ಕೆ.ಸಿ. ನಾರಾಯಣಸ್ವಾಮಿ, ಜಿಕೆವಿಕೆಯ ಅಧಿಕಾರಿಗಳು, ಶಿಕ್ಷಕರು ಭಾಗವಹಿಸಿದ್ದರು.

# ಬೇಸಿಕ್ ಕಂಪ್ಯೂಟರ್ ಸರ್ಟಿಫಿಕೇಟ್ ಕೋರ್ಸ್

**ಹುಳಿಯಾರು:** ಹುಳಿಯಾರಿನ ಬಿ.ಎಂ.ಎಸ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಪ್ಲೇಸ್‌ಮೆಂಟ್ ಸೆಲ್ ಹಾಗೂ ಐಕ್ಯೂಎಸಿ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿದ್ದ ಬೇಸಿಕ್ ಕಂಪ್ಯೂಟರ್ ಸರ್ಟಿಫಿಕೇಟ್ ಕೋರ್ಸ್



ಉಚಿತ ಕಂಪ್ಯೂಟರ್ ಕಲಿಕೆಯ ಸಮರೋಪ ಸಮಾರಂಭ ನಡೆಸಲಾಯಿತು.

ಅಧ್ಯಕ್ಷತೆಯನ್ನು ವಹಿಸಿ ಮಾತನಾಡಿದ ಕಾಲೇಜಿನ ಪ್ರಾಂಶುಪಾಲರಾದ ಪ್ರೋ .ವೀರಣ್ಣ ಎಸ್.ಸಿ ರವರು ಪದವಿ ಪಡೆದ ನಂತರ ವಿದ್ಯಾರ್ಥಿಗಳು ಅಧೈರ್ಯಗೊಳ್ಳದೆ ಧೈರ್ಯವಾಗಿ ಬದುಕಲು ಕಂಪ್ಯೂಟರ್ ಕಲಿಕೆ ಹಾಗೂ ಸ್ಪೋಕನ್ ಇಂಗ್ಲಿಷ್ ಕಲಿಕೆ ಸಹಾಯಕವಾಗಬಲ್ಲದು ಗ್ರಾಮೀಣ ಭಾಗದ ಮಕ್ಕಳು ಈ ಕೌಶಲಗಳನ್ನು ಕಲಿತು ಸ್ಪರ್ಧಾ ಪ್ರಪಂಚದಲ್ಲಿ ಬದುಕನ್ನು ಕಟ್ಟಿಕೊಳ್ಳಬೇಕು ಗುರುಗಳು ತಮ್ಮ ಶಿಷ್ಯಂದಿರ ಬದುಕನ್ನ ಕಟ್ಟಿಕೊಡುವ ಕೈಂಕರ್ಯದಲ್ಲಿ ತೊಡಗಿದಾಗ ಮಾತ್ರವೇ ಸೇವೆ ತೃಪ್ತಿ ತರಲು ಸಾದ್ಯ ವಿದ್ಯಾರ್ಥಿಗಳು ಆ ದಿಕ್ಕಿನಲ್ಲಿ ಸಾಗಿ ಯಶಸ್ವಿಯಾಗಿ ಸಾಗಬೇಕೆಂದು ಶುಭ ಹಾರೈಸಿದರು. ಪ್ಲೇಸ್ ಮೆಂಟ್ ಸೆಲ್ ಸಂಯೋಜನಾಧಿಕಾರಿಗಳಾದ ಡಾ.ಸುಷ್ಮಾ ಎಲ್ ಬಿರಾದರ್ ಮಾತನಾಡಿ ವಿದ್ಯಾರ್ಥಿಗಳು ಕಾಲೇಜಿನಲ್ಲಿ ಸಿಗುವ ಎಲ್ಲಾ ಸೌಲಭ್ಯಗಳನ್ನು ಬಳಸಿಕೊಂಡು ಅವುಗಳನ್ನ ಮೆಟ್ಟಿಲುಗಳಾಗಿಸಿಕೊಂಡು ವಿದ್ಯಾರ್ಥಿಗಳು ಬೆಳೆಯಬೇಕೆಂದು ಹಾರೈಸಿದರು. ಐಕ್ಯೂ ಎಸಿ ಸಂಯೋಜಕರಾದ ಪ್ರೋ. ಮಂಜುನಾಥ್ ಕೆ.ಎಸ್ ವಿದ್ಯಾರ್ಥಿಗಳನ್ನು ಉದ್ದೇಶಿಸಿ ಮಾತನಾಡುತ್ತಾ ನಿಮ್ಮ ಕಲಿಕೆ ಯಾವುದೇ ನಿಲ್ದಾಣದಲ್ಲಿ ನಿಲ್ಲದೆ ಅಗತ್ಯಕ್ಕೆ ತಕ್ಕಂತೆ ನವೀಕರಣಗೊಳ್ಳುತ್ತಾ ಸಾಗಿ ಒಂದು ಹಂತವನ್ನ ತಲುಪಬೇಲೆಂದು ಪ್ರೇರೆಪಿಸಿದರು. ಕಂಪ್ಯೂಟರ್ ಕಲಿಕಾ ಟ್ರೈನರ್ ಆದ ತಿಪ್ಪೇಸ್ವಾಮಿ .ಎಂ.ಕೆ ಮಾತನಾಡಿ ವಿದ್ಯಾರ್ಥಿಗಳಿಗೆ ಪದವಿಗಳು ಕೈ ಕೊಟ್ಟಾಗ ನಿಮಗೆ ಕಾಣುವ ಏಕೈಕ ರಾಮಬಾಣ ಮತ್ತು ಮರುಭೂಮಿಯ ಒಯಾಸಿಸ್ ಅಂದರೆ ಅದೇ ಕಂಪ್ಯೂಟರ್ ಶಿಕ್ಷಣ. ಕಂಪ್ಯೂಟರ್ ಕಲಿತವ ಎಲ್ಲಿ ಹೋದರು ಬದುಕಬಲ್ಲ. ಕಲಿಕೆ ನಿಂತ ನೀರಾಗದೇ ಹರಿಯುವ ನೀರಾಗಲಿ ಕಲಿಕೆ ನಿರಂತರವಾಗಿರಲಿ ಎಂದು ವಿದ್ಯಾರ್ಥಿಗಳಲ್ಲಿ ಉತ್ಸಾಹ ತುಂಬಿದರು. ವಿದ್ಯಾರ್ಥಿನಿ ಪೂಜಾಶ್ರೀ ಕಾರ್ಯಕ್ರಮವನ್ನು ನಿರೂಪಿಸಿದರು. ರಾಜೇಶ್ವರಿ ಯವರು ಸ್ವಾಗತಿಸಿ, ದರ್ಶಿನಿ ಪ್ರಾರ್ಥಸಿದರು, ಹೇಮ.ಡಿ.ಬಿ ವಂದಿಸಿದರು.

## ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

**ರಾಮನಗರ:** ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯು ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ, ನೃತ್ಯ, ಸುಗಮ ಸಂಗೀತ, ಕಥಾಕೀರ್ತನ ಮತ್ತು ಗಮಕ - ಈ ಆರು ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ 16 ರಿಂದ 24 ವರ್ಷ ವಯೋಮಾನದೊಳಗಿನ ಅಭ್ಯರ್ಥಿಗಳಿಗೆ ಶಿಷ್ಯವೇತನ ನೀಡಲು ಅರ್ಜಿ ಆಹ್ವಾನಿಸಿದೆ. 2023-24 ಮತ್ತು 2024-25ನೇ ಸಾಲಿನಿಂದ ಶಿಷ್ಯವೇತನಕ್ಕೆ ಆಯ್ಕೆ ಪ್ರಕ್ರಿಯೆಯನ್ನು ಮೊಬೈಲ್/ ವಿಡಿಯೋ ಚಿತ್ರೀಕರಣದ ಮೂಲಕ ಆಯ್ಕೆ ಮಾಡಲು ಅಕಾಡೆಮಿ ತೀರ್ಮಾನಿಸಿದೆ. ಶಿಷ್ಯವೇತನ ಅರ್ಜಿಗಳ ಬಗ್ಗೆ ಮಾಹಿತಿಯನ್ನು ಅಕಾಡೆಮಿ ಫೇಸ್‌ಬುಕ್(facebook.com/karnatakasangeeta1978) ಮೂಲಕ ಪಡೆದು ವೆಬ್‌ಸೈಟ್ (sangeetanrityaacademy.karnataka.gov.in) ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಸಂದರ್ಶನದ ಬದಲಿಗೆ ಅಭ್ಯರ್ಥಿಗಳು ಇನ್ನು ಮುಂದೆ ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್, ವಿಡಿಯೋ ಚಿತ್ರೀಕರಿಸಿ, ಪೆನ್‌ಡ್ರೈವ್‌ನಲ್ಲಿ ಅಳವಡಿಸಿ ಪೆನ್ ಡ್ರೈವ್‌ನೊಂದಿಗೆ, ಅರ್ಜಿಯನ್ನು ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ಕನ್ನಡ ಭವನ, 2ನೇ ಮಹಡಿ, ಜೆ.ಸಿ.ರಸ್ತೆ, ಬೆಂಗಳೂರು-560 002 ಕಾರ್ಯಾಲಯಕ್ಕೆ ಅಂಚೆ ಮೂಲಕ ಅಥವಾ ಖುದ್ದಾಗಿ ತಲುಪಿಸಬಹುದು. ಈ ರೀತಿಯಾಗಿ ಬಂದ ಅರ್ಜಿಗಳನ್ನು ಆಯಾ ಕಲಾ ಪ್ರಕಾರಕ್ಕೆ ಅನುಗುಣವಾಗಿ ತೀರ್ಪುಗಾರರು ಅಭ್ಯರ್ಥಿಗಳು ಚಿತ್ರೀಕರಿಸಿ ಕಳುಹಿಸಿಕೊಟ್ಟಿರುವ ಪೆನ್‌ಡ್ರೈವ್‌ಅನ್ನು ಪರಿಶೀಲಿಸಿ, ಶಿಷ್ಯವೇತನಕ್ಕೆ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಪಠ್ಯಕ್ರಮ ಚಿತ್ರೀಕರಿಸಿದ ಪೆನ್‌ಡ್ರೈವ್‌ನೊಂದಿಗೆ ಅರ್ಜಿಯನ್ನು ಸ್ವೀಕರಿಸಲು ಆ. 12 ಕೊನೆಯ ದಿನವಾಗಿದೆ ಎಂದು ಕರ್ನಾಟಕ ಸಂಗೀತ ನೃತ್ಯ ಅಕಾಡಮಿಯ ರಿಜಿಸ್ಟ್ರಾರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ರವಿಕುಮಾರ್ ಹಿಟ್ನೆಹೆಬ್ಬಾಗಿಲು ಗ್ರಾಪಂ ಅಧ್ಯಕ್ಷ



**ಪಿರಿಯಾಪಟ್ಟಣ :** ಪಿರಿಯಾಪಟ್ಟಣ ತಾಲೂಕಿನ ಹಿಟ್ನೆಹೆಬ್ಬಾಗಿಲು ಗ್ರಾಮಪಂಚಾಯಿತಿ ನೂತನ ಅಧ್ಯಕ್ಷರಾಗಿ ಕಾಂಗ್ರೆಸ್ ಪಕ್ಷದ ಬೆಂಬಲಿತ ಅಭ್ಯರ್ಥಿಗಳಾದ ಎಚ್.ಜಿ.ರವಿಕುಮಾರ್ ಉಪಾಧ್ಯಕ್ಷರಾಗಿ ವನಜಾಕ್ಷಮ್ಮ ಅವಿರೋಧವಾಗಿ ಆಯ್ಕೆಯಾದರು.

ಪಿರಿಯಾಪಟ್ಟಣ ತಾಲೂಕಿನ ಹಿಟ್ನೆಹೆಬ್ಬಾಗಿಲು ಗ್ರಾಮಪಂಚಾಯಿತಿಯಲ್ಲಿ ಒಟ್ಟು 18 ಸದಸ್ಯ ಬಲವಿದ್ದು ಕಾಂಗ್ರೆಸ್ ಪಕ್ಷದ ಬೆಂಬಲಿತ ಸದಸ್ಯರೆ ಹೆಚ್ಚಾಗಿದ್ದರು. ಈ ಹಿಂದೆ ಇದೇ ಪಕ್ಷದ ಕಾಮರಾಜು ಅಧ್ಯಕ್ಷರಾಗಿದ್ದು ಉಪಾಧ್ಯಕ್ಷರಾಗಿ ಸಾಕಮ್ಮ ಅಧಿಕಾರ ನಡೆಸಿದ್ದು ಒಳ ಒಪ್ಪಂದದಂತೆ ರಾಜೀನಾಮೆ ನೀಡಿದ ಹಿನ್ನೆಲೆಯಲ್ಲಿ ತೆರವಾಗಿದ್ದ ಸ್ಥಾನಕ್ಕೆ ಸೋಮವಾರ ಚುನಾವಣೆ ನಡೆಸಲಾಯಿತು. ಅಧ್ಯಕ್ಷಸ್ಥಾನ ಸಾಮಾನ್ಯ ವರ್ಗಕ್ಕೆ ಮೀಸಲಾಗಿದ್ದು ಉಪಾಧ್ಯಕ್ಷಸ್ಥಾನ ಸಾಮಾನ್ಯ ಮಹಿಳೆಗೆ ಮೀಸಲಾಗಿತ್ತು. ಇದರಲ್ಲಿ ಅಧ್ಯಕ್ಷಸ್ಥಾನಕ್ಕೆ ಎಚ್.ಜಿ.ರವಿಕುಮಾರ್ ಮತ್ತು ಉಪಾಧ್ಯಕ್ಷ ಸ್ಥಾನಕ್ಕೆ ವನಜಾಕ್ಷಮ್ಮ ಹೊರತು ಪಡಿಸಿ ಯಾರು ನಾಮಪತ್ರ ಸಲ್ಲಿಸದ ಕಾರಣ ಇವರನ್ನು ಅವಿರೋಧವಾಗಿ ಆಯ್ಕೆ ಮಾಡಲಾಗಿದೆ ಎಂದು ಚುನಾವಣಾಧಿಕಾರಿ ಹಾಗೂ ಪಶುಸಂಗೋಪನಾ ಇಲಾಖೆ ಸಹಾಯಕ ನಿರ್ದೇಶಕ ಡಾ.ಸೋಮಯ್ಯ ಘೋಷಿಸಿದರು. ಈ ಸಂದರ್ಭದಲ್ಲಿ 17 ಮಂದಿ ಸದಸ್ಯರು ಹಾಜರಿದ್ದು ಎಂ.ಎಸ್.ಸೌಮ್ಯ ಗೈರುಹಾಜರಾಗಿದ್ದರು, ಪಿಡಿಒ ನಾಗೇಂದ್ರಕುಮಾರ್, ವೀರಶೈವ ಮಹಾಸಭಾ ಅಧ್ಯಕ್ಷ ಎಚ್.ಜಿ.ಪರಮೇಶ್, ಕೆಪಿಸಿಸಿ ಸದಸ್ಯ ಅನಿಲ್, ಮಾಜಿ ಅಧ್ಯಕ್ಷ ಕಾಮರಾಜು, ದಸಸಂ ಮುಖಂಡ ಸೀಗೂರು ವಿಜಯಕುಮಾರ್, ಸೇರಿದಂತೆ ಮತ್ತಿತರರು ಹಾಜರಿದ್ದರು.

ಸಂಜೆ ಟಿಪ್ಸ್


## 'ಪಯೋನೀರ್ ಪ್ರೈವೇಟ್' ಆಯ ಹಣಕಾಸು ಪರಿಹಾರ ಪ್ರಾರಂಭಿಸಿದ ಇಂಡಸ್ ಇಂಡ್ ಬ್ಯಾಂಕ್

IndusInd Bank

'ಪಯೋನೀರ್ ಪ್ರೈವೇಟ್' ಎಂಬ ವೈಯಕ್ತೀಕರಿಸಿದ (ಬೆಸ್ಪೋಕ್) ಮತ್ತು ಆಯ್ದ (ಕ್ಯೂರೇಟೆಡ್) ಹಣಕಾಸು ಪರಿಹಾರಗಳ ಯೋಜನೆಯನ್ನು ಪ್ರಾರಂಭಿಸಯವುದಾಗಿ ಇಂಡಸ್‌ಇಂಡ್ ಬ್ಯಾಂಕ್ ಘೋಷಿಸಿದೆ. ಇದು ಅಧಿಕ ಆಸ್ತಿವಂತರು (ಹೈ ನೆಟ್ವರ್ತ್ ಇಂಡಿವಿಜುವಲ್ಸ್ - ಎಚ್‌ಎನ್‌ಐ) ಮತ್ತು ಅತ್ಯಧಿಕ ಆಸ್ತಿವಂತರ (ಅಲ್ಟ್ರಾ ಹೈ ನೆಟ್ವರ್ತ್ ಇಂಡಿವಿಜುವಲ್ಸ್ - ಯುಎನ್‌ಎಚ್‌ಐ) ಪ್ರತಿಯೊಂದು ಅಗತ್ಯಕ್ಕೆ ಅನುಗುಣವಾಗಿದೆ. ಎಚ್‌ಎನ್‌ಐ ವಿಭಾಗಕ್ಕೆ ಸೇವೆ ಸಲ್ಲಿಸುವಲ್ಲಿ ಬಲವಾದ ಉಪಸ್ಥಿತಿಯನ್ನು ಹೊಂದಿರುವ ಇಂಡಸ್‌ಇಂಡ್ ಬ್ಯಾಂಕ್ನ ಈ ಹೊಸ ಕಾರ್ಯಕ್ರಮವು, ಅಧಿಕ ಆಸ್ತಿವಂತರ ವೈವಿಧ್ಯಮಯ ಹಣಕಾಸು ಮತ್ತು ಬ್ಯಾಂಕಿಂಗ್ ಅಗತ್ಯಗಳನ್ನು ಪೂರೈಸುವಲ್ಲಿ ವೈಯಕ್ತಿಕರಿಸಿದ ಉತ್ಕೃಷ್ಟತೆಗೆ ಬ್ಯಾಂಕಿನ ಬದ್ಧತೆ ಮುಂದುವರಿದಿರುವುದನ್ನು ಸೂಚಿಸುತ್ತದೆ. ಪಯೋನೀರ್ ಪ್ರೈವೇಟ್ ಎಂಬುದು ಅಧಿಕ ಆಸ್ತಿವಂತರು (ಎಚ್‌ಎನ್‌ಐ) / ಅತ್ಯಧಿಕ ಆಸ್ತಿವಂತರು (ಯುಎಚ್‌ಎನ್‌ಐ) ಸಮುದಾಯದ ವಿಶಿಷ್ಟ ಅಗತ್ಯಗಳನ್ನು ಪೂರೈಸಲು ವಿನ್ಯಾಸಗೊಳಿಸಲಾದ ಹಣಕಾಸು ಪರಿಹಾರಗಳ ವಿಶೇಷ ಯೋಜನೆಯಾಗಿದೆ. ವೈಯಕ್ತೀಕರಿಸಿದ ಈ ಯೋಜನೆಯನ್ನು 'ಇತಿಹಾಸವು ಮುಂದಿದೆ' ಎಂಬ ತತ್ವದ ಆಧಾರದ ಮೇಲೆ ರೂಪಿಸಲಾಗಿದೆ ಮತ್ತು ವಿವೇಚನಾಶೀಲ ಅತ್ಯಧಿಕ ಆಸ್ತಿವಂತರ ಆರ್ಥಿಕ ಪ್ರಯಾಣದ ಪ್ರತಿಯೊಂದು ಅಗತ್ಯವನ್ನೂ ಪೂರೈಸುತ್ತದೆ. ಸಾಂಪ್ರದಾಯಿಕ ವಿಧಾನಗಳಿಂದ ಅತ್ಯಾಧುನಿಕ ಪ್ರಯೋಗಾತ್ಮಕ ವಿಧಾನಗಳು, ಎಸ್ಟೇಟ್ ಮತ್ತು ಪಾರಂಪರಿಕ ಯೋಜನೆ ರೂಪಿಸುವುದು, ತಡೆರಹಿತ ವ್ಯಾಪಾರ ಮತ್ತು ವಿದೇಶಿ ವಿನಿಮಯ ಸೇವೆಗಳು, ವೈಯಕ್ತೀಕರಿಸಿದ ಸಾಲ ಮತ್ತು ರಚನೆಯ ಪರಿಹಾರಗಳು ಹಾಗೂ ಇನ್ನೂ ಅನೇಕ ಗ್ರಾಹಕ-ಕೇಂದ್ರಿತ ವೈಯಕ್ತಿಕ ಕೊಡುಗೆಗಳನ್ನು ಇದು ಒಳಗೊಂಡಿದೆ. ಇಂತಹ ಅತ್ಯಾಧುನಿಕ ಹೂಡಿಕೆ ಮಾರ್ಗಗಳ ಮೇಲೆ ಗಮನ ಕೇಂದ್ರೀಕರಿಸುವ ಸಮಗ್ರ ಶ್ರೇಣಿಯ ವೆಬ್ ಆಧರಿತ ಬ್ಯಾಂಕಿಂಗ್ ಪರಿಹಾರಗಳು ಇದರಲ್ಲಿವೆ. ಅಲ್ಲದೆ, ಈ ಕಾರ್ಯಕ್ರಮವು ಪ್ರಮುಖ ವಿಮಾದಾರರ ಸಹಭಾಗಿತ್ವದಲ್ಲಿ ವೈಯಕ್ತಿಕಗೊಳಿಸಿದ ವಿಮಾ ಪರಿಹಾರಗಳನ್ನು ನೀಡುತ್ತದೆ ಮತ್ತು ಗ್ರಾಹಕರ ಆದ್ಯತೆಗಳಿಗೆ ಅನುಗುಣವಾಗಿ ಶ್ರೀಮಂತ ಜೀವನಶೈಲಿ ಅನುಭವಗಳನ್ನು ಒದಗಿಸುತ್ತದೆ, ಉನ್ನತ ಮಟ್ಟದ ಖಾಸಗಿ ಲೋಹದ ಕ್ರೆಡಿಟ್ ಮತ್ತು ಡೆಬಿಟ್ ಕಾರ್ಡ್ಗಳು ಹಾಗೂ ಅತ್ಯಾಧುನಿಕ ವೇಯರಬಲ್ ಸಾಧನಗಳಿಂದ ಬೆಂಬಲಿಸಲ್ಪಟ್ಟಿದೆ.


# ಕೊತ್ತಂಬರಿ ಚಟ್ನಿ

## ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಕೊತ್ತಂಬರಿ ಸೊಪ್ಪು- 1 ಸಣ್ಣ ಗೊಂಚಲು, ಜೀರಿಗೆ - 1/2 ಚಮಚ, ಹಸಿರು ಮೆಣಸಿನಕಾಯಿ- 1, ತುರಿದ ತೆಂಗಿನಕಾಯಿ - 1/2 ಬಟ್ಟಲು, ಮೊಸರು- 1 ಬಟ್ಟಲು, ಕೆಂಪು ಮೆಣಸಿನಕಾಯಿ-1, ಅಡುಗೆ ಎಣ್ಣೆ / ತುಪ್ಪ- 2 ಚಮಚ, ಸಾಸಿವೆ- ಸ್ವಲ್ಪ, ಕರಿಬೇವು-ಸ್ವಲ್ಪ, ಇಂಗು-ಸ್ವಲ್ಪ, ಉಪ್ಪು- ರುಚಿಗೆ ತಕ್ಕಷ್ಟು

### ಮಾಡುವ ವಿಧಾನ

ಕೊತ್ತಂಬರಿ ಸೊಪ್ಪನ್ನು ಸ್ವಚ್ಛಗೊಳಿಸಿ, ಚೆನ್ನಾಗಿ ತೊಳೆಯಿರಿ. ನಂತರ ಕೊತ್ತಂಬರಿ ಸೊಪ್ಪು ಮತ್ತು ಹಸಿ ಮೆಣಸಿನಕಾಯಿಯನ್ನು ಸಣ್ಣಗೆ ಕತ್ತರಿಸಿಕೊಳ್ಳಿ. ಬಾಣಲೆಯನ್ನು ಬಿಸಿ ಮಾಡಿ, ಎಣ್ಣೆ ಹಾಗೂ ಜೀರಿಗೆಯನ್ನು ಹಾಕಿ. ನಂತರ ಸಣ್ಣಗೆ ಕತ್ತರಿಸಿಕೊಂಡ ಕೊತ್ತಂಬರಿ ಸೊಪ್ಪು ಹಾಗೂ ಹಸಿಮೆಣಸಿನ ಕಾಯಿ, ತೆಂಗಿನ ತುರಿಯನ್ನು ಸೇರಿಸಿ. ಸಣ್ಣ ಉರಿಯಲ್ಲಿ 5 ಸೆಕೆಂಡ್ ಗಳ ಕಾಲ ಫ್ರೈ ಮಾಡಿ. ಬಳಿಕ ಇದನ್ನು ಮಿಕ್ಸಿ ಜಾರ್'ಗೆ ಹಾಕಿ ನುಣ್ಣಗೆ ರುಬ್ಬಿಕೊಳ್ಳಿ. ನೀರು ಸೇರಿಸಬಹುದು. ನಂತರ ಇದಕ್ಕೆ 3 ಟೇಬಲ್ ಸ್ಪೂನ್ ನಷ್ಟು ಮೊಸರು ಸೇರಿಸಿ. ಚೆನ್ನಾಗಿ ಮಿಕ್ಸ್ ಮಾಡಿಕೊಳ್ಳಿ. ಬಳಿಕ ರುಚಿಗೆ ತಕ್ಕಷ್ಟು ಉಪ್ಪು ಸೇರಿಸಿ. ಆಮೇಲೆ ಒಂದು ಒಗ್ಗರಣೆ ಪಾತ್ರೆಗೆ 1 ಚಮಚ ಎಣ್ಣೆ ಹಾಕಿ ಅದು ಬಿಸಿಯಾಗುತ್ತಲೆ ಸಾಸಿವೆ, ಜೀರಿಗೆ, ಕೆಂಪು ಮೆಣಸಿನಕಾಯಿ, ಚಿಟಿಕೆ ಇಂಗು, ಕರಿಬೇವು ಹಾಕಿ. ಈ ಒಗ್ಗರಣೆಯನ್ನು ತಂಬುಳಿಗೆ ಹಾಕಿ ಮಿಕ್ಸ್ ಮಾಡಿಕರೆ ರುಚಿಕರವಾದ ಕೊತ್ತಂಬರಿ ಸೊಪ್ಪಿನ ತಂಬುಳಿ ಸವಿಯಲು ಸಿದ್ಧ.

# ಮನು ಭಾಕರ್ ಗೆದ್ದ ಒಲಿಂಪಿಕ್ಸ್ ಪದಕ ದೊಂದಿಗೆ ನಟ ಜಾನ್ ಅಬ್ರಾಹಂ ಪೋಸ್



ಪ್ಯಾರಿಸ್ ಒಲಿಂಪಿಕ್ಸ್ ಶೂಟಿಂಗ್ ವಿಭಾಗದಲ್ಲಿ 2 ಐತಿಹಾಸಿಕ ಕಂಚಿನ ಪದಕ ಗೆದ್ದ ಶೂಟರ್ ಮನು ಭಾಕರ್ ಅವರು ಭಾರತಕ್ಕೆ ಆಗಮಿಸಿದ್ದಾರೆ. ಅವರು ದೆಹಲಿಯ ವಿಮಾನ ನಿಲ್ದಾಣಕ್ಕೆ ಆಗಮಿಸುತ್ತಲೇ ಅದ್ದೂರಿಯಾಗಿ ಸ್ವಾಗತಿಸಲಾಯಿತು.

ಹೂವಿನ ಹಾರ ಮತ್ತು ಸಿಹಿ ತಿನ್ನಿಸುವ ಮೂಲಕ ಭರ್ಜರಿ ವೆಲ್ಕಮ್ ಮಾಡಲಾಯಿತು. ಇದಾದ ಬಳಿಕ ಬಾಲಿವುಡ್ ನಟ ಜಾನ್ ಅಬ್ರಾಹಂ ಅವರು ಮನು ಭಾಕರ್ ಅವರನ್ನು ಭೇಟಿಯಾಗಿದ್ದು, ಅವರ ಪದಕಗಳನ್ನು ನಟ ಮುಟ್ಟಿದ್ದು ಈಗ ಜಾಲತಾಣದಲ್ಲಿ ಭಾರಿ ಚರ್ಚೆಗೆ ಕಾರಣವಾಗಿದೆ. ಮನು ಭಾಕರ್ ಜತೆಗಿನ ಫೋಟೊವನ್ನು ಜಾನ್ ಅಬ್ರಾಹಂ ಅವರು ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದಾರೆ. ಅವರು ಮನು ಭಾಕರ್ ಅವರ ಒಂದು ಪದಕವನ್ನು ಕೈಯಲ್ಲಿ ಹಿಡಿದಿರುವುದು ಈಗ ಜನರ ಆಕ್ರೋಶಕ್ಕೆ ಕಾರಣವಾಗಿದೆ. 'ಒಲಿಂಪಿಕ್ಸ್‌ನಲ್ಲಿ ಮನು ಭಾಕರ್ ಅವರು ಪದಕಗಳನ್ನು ಗೆದ್ದು ಭಾರತಕ್ಕೆ ಹೆಮ್ಮೆ ತಂದಿದ್ದಾರೆ. ಅವರು ಗೆದ್ದಿರುವ ಪದಕಗಳನ್ನು ನೀವೇ ಗೆದ್ದಿರುವಂತೆ ಹಿಡಿದುಕೊಂಡು ಪೋಸ್ ನೀಡುವುದು ಸಮಂಜಸವಲ್ಲ' ಎಂದು ಜನ ಜಾಲತಾಣದಲ್ಲಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

22 ವರ್ಷದ ಮನು ಭಾಕರ್ ಇದಕ್ಕೂ ಮುನ್ನ ಮಹಿಳೆಯರ ವೈಯಕ್ತಿಕ 10 ಮೀಟರ್ ಏರ್ ಪಿಸ್ತೂಲ್ ಸ್ಪರ್ಧೆಯಲ್ಲಿ ಮತ್ತು ಸರಬ್ಜೋತ್ ಸಿಂಗ್ ಜತೆಗೂಡಿ 10 ಮೀಟರ್ ಏರ್ ಪಿಸ್ತೂಲ್ ಮಿಶ್ರ ಸ್ಪರ್ಧೆಯಲ್ಲೂ ಕಂಚಿನ ಪದಕ ಜಯಿಸುವ ಮೂಲಕ ಸ್ವಾತಂತ್ರ್ಯ ಭಾರತದ ಇತಿಹಾಸದಲ್ಲೇ ಒಂದೇ ಒಲಿಂಪಿಕ್ಸ್‌ನಲ್ಲಿ ಎರಡು ಪದಕ ಜಯಿಸಿದ ಭಾರತದ ಮೊದಲ ಕ್ರೀಡಾಪಟು ಎನ್ನುವ ಐತಿಹಾಸಿಕ ದಾಖಲೆ ನಿರ್ಮಿಸಿದ್ದರು. 25 ಮೀ. ಪಿಸ್ತೂಲ್ ಶೂಟಿಂಗ್ ಫೈನಲ್ ಪಂದ್ಯದಲ್ಲಿ ನಾಲ್ಕನೇ ಸ್ಥಾನ ಪಡೆಯುವ ಮೂಲಕ ಹ್ಯಾಟ್ರಿಕ್ ಪದಕ ಗೆಲ್ಲುವ ಅವಕಾಶದಿಂದ ವಂಚಿತರಾಗಿದ್ದರು.

ಕಳೆದ ಟೋಕಿಯೊ ಒಲಿಂಪಿಕ್ಸ್‌ನಲ್ಲಿ ಪದಕ ಗೆಲ್ಲುವ ಕನಸಿನೊಂದಿಗೆ ಟೋಕಿಯೋಗೆ ಆಗಮಿಸಿದ್ದ ಮನು ಭಾಕರ್ಗೆ ಅದೃಷ್ಟ ಕೈಕೊಟ್ಟಿತ್ತು. ಕೂಟದ ಮೊದಲ ಸ್ಪರ್ಧೆಯಲ್ಲೇ ಅವರ ಪಿಸ್ತೂಲ್ನಲ್ಲಿ ತಾಂತ್ರಿಕ ದೋಷ ಕಾಣಿಸಿಕೊಂಡ ಕಾರಣ ಅವರಿಗೆ ಫೈನಲ್ಗೇರುವ ಅವಕಾಶ ಕೈತಪ್ಪಿತ್ತು. ಮೊದಲ ಸುತ್ತಿನಲ್ಲಿ ಎದುರಾಗ ಈ ಆಘಾತದಿಂದ ಚೇತರಿಕೊಳ್ಳದ ಮನು ಆ ಬಳಿಕ ಆಡಿದ 2 ಸ್ಪರ್ಧೆಗಳಲ್ಲಿಯೂ ಏಕಾಗ್ರತೆ ಸಾಧಿಸಲು ವಿಫಲರಾಗಿ ಸೋಲು ಕಂಡಿದ್ದರು. ಅಂದಿನ ಸೋಲಿನಿಂದ ಮನನೊಂದು ಶೂಟಿಂಗ್ಗೆ ವಿದಾಯ ಹೇಳಲು ಬಯಸಿದ್ದ ಮನು, ತಂದೆಯ ಆತ್ಮವಿಶ್ವಾಸದ ಮಾತಿನಂತೆ ಶೂಟಿಂಗ್ನಲ್ಲಿ ಮುಂದುವರಿದಿದ್ದರು. ಈ ಬಾರಿ ಪ್ಯಾರಿಸ್ನಲ್ಲಿ 2 ಪದಕ ಗೆದ್ದು ಭಾರತೀಯ ಒಲಿಂಪಿಕ್ಸ್ ಕ್ರೀಡಾ ಇತಿಹಾಸದಲ್ಲಿ ತಮ್ಮ ಹೆಸರನ್ನು ದಾಖಲಿಸಿದ್ದಾರೆ.

# ಕತ್ತು ಮತ್ತು ತಲೆಯ ಕ್ಯಾನ್ಸರ್ ಪ್ರಕರಣ: ರೋಗಿಯ ಜೀವ ಉಳಿಯುವ ಸಾಧ್ಯತೆ ನಿಮೊಟುಜುಮ್ಯಾಬ್ ಗಮನಾರ್ಹ ಪ್ರಮಾಣ ಹೆಚ್ಚಳ

ಹೆಲ್ತ್ ಟಿಪ್ಸ್

ಸಾಮಾನ್ಯವಾಗಿ ಅನುಸರಿಸುತ್ತಿರುವ ಚಿಕಿತ್ಸಾ ಪದ್ಧತಿಯಲ್ಲಿ ನಿಮೊಟುಜುಮ್ಯಾಬ್ ಸೇರಿಸುವುದರಿಂದ ಕತ್ತು ಮತ್ತು ತಲೆಯ ಕ್ಯಾನ್ಸರ್ ಪ್ರಕರಣಗಳಲ್ಲಿ ರೋಗಿಯು ಬದುಕುಳಿಯುವ ಸಾಧ್ಯತೆಯು ಗಮನಾರ್ಹ ಪ್ರಮಾಣದಲ್ಲಿ ಹೆಚ್ಚಾಗುತ್ತದೆ ಎಂಬುದು ಮುಂಬೈನ ಟಾಟಾ ಸ್ಮಾರಕ ಆಸ್ಪತ್ರೆ ನಡೆಸಿದ ಅಧ್ಯಯನದಿಂದ ಗೊತ್ತಾಗಿದೆ. 536 ಮಂದಿ ರೋಗಿಗಳ ಮೇಲೆ ಮೂರನೆಯ ಹಂತದಲ್ಲಿ ನಡೆಸಿದ ಈ ಅಧ್ಯಯನವು, ನಿಮೊಟೊಜುಮ್ಯಾಬ್ನಿಂದಾಗಿ ಬದುಕುಳಿಯುವ ಸಾಧ್ಯತೆ ಹೆಚ್ಚಾಗುವುದಷ್ಟೇ ಅಲ್ಲದೆ, ಬಹುಕಾಲದಿಂದ ಕ್ಯಾನ್ಸರ್ಗೆ ತುತ್ತಾದವರು ಕೂಡ ಉತ್ತಮ ಗುಣಮಟ್ಟದ ಜೀವನ ನಡೆಸಲು ಸಾಧ್ಯವಾಗುತ್ತದೆ ಎಂಬುದನ್ನು ತಿಳಿಸಿದೆ. ಈ ಕಾರಣದಿಂದಾಗಿ ಈ ಕಾಯಿಲೆಗೆ ಭಾರತದಲ್ಲಿ ಚಿಕಿತ್ಸೆ ನೀಡಲು ನಿಮೊಟುಜುಮ್ಯಾಬ್ ಬಳಕೆಯನ್ನು ಒಂದು ಆಯ್ಕೆಯನ್ನಾಗಿಸಲು ಅವಕಾಶ ಇದೆ.

ತಲೆ ಮತ್ತು ಕತ್ತಿನ ಕ್ಯಾನ್ಸರ್ ಇರುವ ರೋಗಿಗಳಿಗೆ ರೇಡಿಯೊಥೆರಪಿ ಹಾಗೂ ಸಿಸ್ಪ್ಲಾಟಿನ್ ಜೊತೆ ನಿಮೊಟುಜುಮ್ಯಾಬ್ ನೀಡಿದಾಗ, 10 ವರ್ಷಗಳ ಒಟ್ಟಾರೆ ಬದುಕುಳಿಯುವ ಸಾಧ್ಯತೆಯು 33.5%ನಷ್ಟು ಇತ್ತು. ರೇಡಿಯೊಥೆರಪಿ ಮತ್ತು ಸಿಸ್ಪ್ಲಾಟಿನ್ ಮಾತ್ರ ಪಡೆದವರಲ್ಲಿ ಈ ಪ್ರಮಾಣವು 22.5%ನಷ್ಟು ಇತ್ತು. ನಿಮೊಟುಜುಮ್ಯಾಬ್ ಬಳಕೆ ಇಲ್ಲದಿದ್ದಾಗ ಉಳಿಯುವ ಪ್ರಮಾಣವು 2.78 ವರ್ಷಗಳಷ್ಟು ಇದ್ದಿದ್ದು, ನಿಮೊಟುಜುಮ್ಯಾಬ್ ಬಳಕೆ ಮಾಡಿದಾಗ 3.69 ವರ್ಷಗಳಿಗೆ ಹೆಚ್ಚಳ ಕಂಡಿತು. ಅಲ್ಲದೆ, ನಂತರದ ಹಂತಗಳಲ್ಲಿ ಕೆಟ್ಟ ಪರಿಣಾಮಗಳು ಉಂಟಾಗುವ ಗಣನೀಯ ಸಾಧ್ಯತೆಯು ಇಲ್ಲ ಎಂಬುದನ್ನು ಕೂಡ ಅಧ್ಯಯನ ಕಂಡುಕೊಂಡಿದೆ. ಇದು ನಿಮೊಟುಜುಮ್ಯಾಬ್ ಬಳಕೆಯು ಸುರಕ್ಷಿತ ಎಂಬುದನ್ನು ಹೇಳುತ್ತಿದೆ.

ಕುತ್ತಿಗೆ ಮತ್ತು ತಲೆಯ ಕ್ಯಾನ್ಸರ್ ಪ್ರಕರಣಗಳು ಭಾರದಲ್ಲಿ ಒಟ್ಟು ಕ್ಯಾನ್ಸರ್ ಹೊರೆಯ ಮೂರನೆಯ ಒಂದರಷ್ಟು ಇವೆ. ಇಲ್ಲಿ 65%ಗಿಂತ ಹೆಚ್ಚಿನ ರೋಗಿಗಳಲ್ಲಿ ಕ್ಯಾನ್ಸರ್ ಕೋಶಗಳನ್ನು ಶಸ್ತ್ರಚಿಕಿತ್ಸೆಯ ಮೂಲಕ ತೆಗೆಯಲು ಆಗುವುದಿಲ್ಲ. ಹೀಗಾಗಿ, ವೈದ್ಯಕೀಯವಾಗಿ ಇವುಗಳನ್ನು ನಿಭಾಯಿಸುವ ಅಗತ್ಯ ಇರುತ್ತದೆ. ಇದು ಒಂದೇ ಕಡೆ ಹೆಚ್ಚು ಉಲ್ಬಣಿಸಿದ ಸಂದರ್ಭಗಳಲ್ಲಿ ಕಿಮೊರೇಡಿಯೇಷನ್ ಚಿಕಿತ್ಸೆಯ ಜೊತೆ ಬೇರೆ ಯಾವುದೇ ಚಿಕಿತ್ಸೆ ನೀಡಲು ಆಗುವುದಿಲ್ಲ. ಹೀಗಾಗಿ ಕತ್ತು ಮತ್ತು ತಲೆಯ ಕ್ಯಾನ್ಸರ್ ನಿಭಾಯಿಸುವುದರಲ್ಲಿ ನಿಮೊಟುಜುಮ್ಯಾಬ್ ಬಳಕೆಯು ಗಣನೀಯ ಮುನ್ನಡೆಯಾಗಿದೆ.

ಮುಂಬೈನ ಟಾಟಾ ಸ್ಮಾರಕ ಆಸ್ಪತ್ರೆಯ ಪ್ರೊಫೆಸರ್ ಮತ್ತು ಮುಖ್ಯಸ್ಥರು, ವೈದ್ಯಕೀಯ ಆಂಕೊಲಾಜಿ ವಿಭಾಗ ಡಾ. ಕುಮಾರ್ ಪ್ರಭಾಷ್ ಅವರು ''ಕತ್ತು ಮತ್ತು ತಲೆಯ ಕ್ಯಾನ್ಸರ್ ಇರುವ ರೋಗಿಗಳ ಪಾಲಿಗೆ ಈ ಅಧ್ಯಯನದ ಅಂಶವು ಭರವಸೆ ಮೂಡಿಸುವಂತೆ ಇದೆ. ಈಗಿರುವ ಚಿಕಿತ್ಸಾ ಕ್ರಮಕ್ಕೆ ನಿಮೊಟುಜುಮ್ಯಾಬ್ ಸೇರಿಸುವ ಮೂಲಕ ರೋಗಿಗಳು ಬದುಕುಳಿಯುವ ಹಾಗೂ ಹೆಚ್ಚು ಉತ್ತಮವಾದ ಗುಣಮಟ್ಟದ ಜೀವನವನ್ನು ಸಾಗಿಸುವ ಸಾಧ್ಯತೆಯು ಗಣನೀಯವಾಗಿ ಹೆಚ್ಚಾಗುತ್ತದೆ'' ಎಂದು ಹೇಳಿದ್ದಾರೆ. ಬೆಂಗಳೂರಿನ ಎಚ್ಸಿಜಿ ಆಸ್ಪತ್ರೆಯ ಹಿರಿಯ ಕ್ಯಾನ್ಸರ್ ತಜ್ಞ ಡಾ.ಕೆ. ಗೋವಿಂದ ಬಾಬು ಅವರು, ''ನಿಮೊಟುಜುಮ್ಯಾಬ್ ಬಳಸಿ ಬೆಂಗಳೂರಿನ ಕಿದ್ವಾಯಿ ಸ್ಮಾರದ ಗಂಥಿ ಆಸ್ಪತ್ರೆಯಲ್ಲಿ ನಡೆಸಿದ ಬೆಸ್ಟ್ ಟ್ರಯಲ್ ಹೆಸರಿನ ಮೊದಲ ಅಧ್ಯಯನವು ಉತ್ತೇಜನಕಾರಿ ಫಲಿತಾಂಶ ನೀಡಿದೆ. ಕಿಮೊರೇಡಿಯೇಷನ್ ಜೊತೆ ನಿಮೊಟುಜುಮ್ಯಾಬ್ ಪಡೆದ 50%ಗಿಂತ ಹೆಚ್ಚಿನ ರೋಗಿಗಳು ಐದು ವರ್ಷಗಳ ನಂತರವೂ ಬದುಕುಳಿದಿದ್ದರು. ಟಾಟಾ ಅಧ್ಯಯನದಲ್ಲಿನ ದೀರ್ಘಾವಧಿಯ ದತ್ತಾಂಶವು ಹೆಚ್ಚಿನ ಸಂಖ್ಯೆಯ ರೋಗಿಗಳಲ್ಲಿ ಬದುಕುಳಿಯುವ ಸಾಧ್ಯತೆ ಹೆಚ್ಚಿರುತ್ತದೆ ಎಂಬುದನ್ನು ಸ್ಪಷ್ಟಪಡಿಸಿದೆ'' ಎಂದು ಹೇಳಿದ್ದಾರೆ. ಎರಿಸ್ ಲೈಫ್ಸೈನ್ಸಸ್ ಕಂಪನಿಯ ಮೆಡಿಕಲ್ ಅಫೇರ್ಸ್ ಮತ್ತು ಕ್ಲಿನಿಕಲ್ ಡೆವಲಪ್ಮೆಂಟ್ ವಿಭಾಗದ ವ್ಯವಸ್ಥಾಪಕ ನಿರ್ದೇಶಕರಾದ ಡಾ. ನೀರಾ ಗುಪ್ತಾ ಅವರು ''ಕತ್ತು ಮತ್ತು ತಲೆಯ ಕ್ಯಾನ್ಸರ್ ರೋಗಿಗಳಲ್ಲಿ ಹೊಸ ಭರವಸೆಯನ್ನು ಮೂಡಿಸುವ ಈ ಅಧ್ಯಯನಕ್ಕೆ ನೆರವು ನೀಡಿದ್ದಕ್ಕೆ ನಮಗೆ ಹೆಮ್ಮೆ ಅನಿಸುತ್ತಿದೆ. ಈ ರೋಗಿಗಳ ಜೀವನದ ಗುಣಮಟ್ಟವು ಬಹಳ ಕುಸಿದಿರುತ್ತದೆ. ಅವರಿಗೆ ಮಾತನಾಡಲು ಹಾಗೂ ನುಂಗುವುದಕ್ಕೂ ಕೂಡ ತೊಂದರೆ ಆಗುತ್ತಿರುತ್ತದೆ. ಕಿಮೊರೇಡಿಯೇಷನ್ ಜೊತೆ ನಿಮೊಟುಜುಮ್ಯಾಬ್ ಸೇರಿಸುವುದರಿಂದ ಕ್ಯಾನ್ಸರ್ ಉಲ್ಬಣಗೊಳ್ಳದೆ ರೋಗಿಯು ಬದುಕುಳಿಯುವ ಸಾಧ್ಯತೆ ಹಾಗೂ ಒಟ್ಟಾರೆಯಾಗಿ ರೋಗಿ ಬದುಕುಳಿಯುವ ಸಾಧ್ಯತೆ ಹೆಚ್ಚುತ್ತದೆ ಎಂಬುದನ್ನು ಅಧ್ಯಯನವು ತೋರಿಸಿದೆಹೇಳಿದ್ದಾರೆ.

# ವಿರಾಟ್ ಬಗ್ಗೆ ಹೇಳಿದ್ದಕ್ಕೆ ಸಿಟ್ಟು ಮಾಡಿಕೊಂಡ ಮೃಣಾಲ್ ಠಾಕೂರ್

ಸಂದರ್ಶನಗಳಲ್ಲಿ ತಾವೇ ನೀಡಿದ ಕೆಲ ಹೇಳಿಕೆಯನ್ನು ಸೆಲೆಬ್ರಿಟಿಗಳು ಒಪ್ಪಲು ರೆಡಿ ಇರೋದಿಲ್ಲ. ಚರ್ಚೆಯ ಸಂದರ್ಭ ಜೋಶ್‌ನಲ್ಲಿ ಏನೇನೋ ಹೇಳಿಕೆ ನೀಡಿ ನಂತರ ಟೀಕೆಗೆ ಒಳಗಾಗುತ್ತಾರೆ. ಈಗ ಮೃಣಾಲ್ ಠಾಕೂರ್ ಅವರಿಗೆ ಹಾಗೆಯೇ ಆಗಿದೆ. ಅವರು ಟೀಂ ಇಂಡಿಯಾದ ಸ್ಟಾರ್ ಆಟಗಾರ ವಿರಾಟ್ ಕೊಹ್ಲಿ ಮೇಲೆ ಪ್ರೀತಿ ಇದೆ ಎಂದು ಹೇಳಿಕೊಂಡಿದ್ದರು. ಇದನ್ನು ಮತ್ತೆ ಮತ್ತೆ ವೈರಲ್ ಮಾಡುತ್ತಿರುವವರ ವಿರುದ್ಧ ಅವರು ಸಿಟ್ಟಾಗಿದ್ದಾರೆ. ಮೃಣಾಲ್ ಠಾಕೂರ್ ಅವರಿಗೆ ಈಗ ಬೇಡಿಕೆ ಹೆಚ್ಚಾಗಿದೆ. ಅವರು ಯಾರು ಎಂಬುದು ಈ ಮೊದಲು ಕೆಲವೇ ಕೆಲವು ಮಂದಿಗೆ ಗೊತ್ತಿತ್ತು. ಆದರೆ, ಈಗ ಹಾಗಲ್ಲ ಬಹುತೇಕರಿಗೆ ಅವರ ಪರಿಚಯ ಇದೆ. ಹೀಗಾಗಿ, ತಮ್ಮ ಹಳೆಯ ಹೇಳಿಕೆ ವೈರಲ್ ಮಾಡುವವರಿಗೆ ಅವರು ಎಚ್ಚರಿಕೆ ನೀಡುತ್ತಿದ್ದಾರೆ. 'ಇನ್‌ಸ್ಟಂಟ್ ಬಾಲಿವುಡ್' ಹೆಸರಿನ ಇನ್‌ಸ್ಟಾಗ್ರಾಮ್ ಪೇಜ್ ಇದೆ. ಇದರಲ್ಲಿ ಬಾಲಿವುಡ್‌ಗೆ ಸಂಬಂಧಿಸಿದ ಪೋಸ್ಟ್‌ಗಳನ್ನು ಹಾಕಲಾಗುತ್ತದೆ. ಮೃಣಾಲ್ ಫೋಟೋ ಹಾಕಿ 'ಒಂದು ಸಮಯದಲ್ಲಿ ವಿರಾಟ್ ಕೊಹ್ಲಿ ಮೇಲೆ ಸಾಕಷ್ಟು ಪ್ರೀತಿ ಇತ್ತು-ಮೃಣಾಲ್' ಎಂದು ಪೋಸ್ಟ್ ಮಾಡಲಾಗಿದೆ. ಇದು ಅವರು ಇತ್ತೀಚೆಗೆ ನೀಡಿದ ಹೇಳಿಕೆ ಎಂಬ ರೀತಿಯಲ್ಲಿ ಬಿಂಬಿಸಲಾಗಿದೆ. ಇದು ಮೃಣಾಲ್ ಕೋಪಕ್ಕೆ ಕಾರಣ ಆಗಿದೆ. ಹೀಗಾಗಿ, 'ಇದನ್ನು ನಿಲ್ಲಿಸಿ' ಎಂದು ಮೃಣಾಲ್ ಈ ಪೋಸ್ಟ್‌ಗೆ ಕಮೆಂಟ್ ಮಾಡಿದ್ದಾರೆ.



# ಭರವಸೆಯ ಕಲಾಪ್ರತಿಭೆ ಕು. ಎಂ. ವರ್ಷಾ ರಂಗಪ್ರವೇಶ



ಖ್ಯಾತ ''ಉಷಾಸ್ ಫೌಂಡೇಶನ್ ' ನೃತ್ಯಸಂಸ್ಥೆಯ ಕಲಾತ್ಮಕ ನಿರ್ದೇಶಕಿ, ಗುರು ಕಲೈಮಾಮಣಿ ಡಾ. ಸಂಗೀತಾ ಕಪಿಲನ್ ಅವರ ನುರಿತ ಗರಡಿಯಲ್ಲಿ ರೂಪುಗೊಂಡ ನೃತ್ಯ ಕಲಾಶಿಲ್ಪ ಕು. ಎಂ. ವರ್ಷಾ ಭರವಸೆಯ ಉದಯೋನ್ಮುಖ ನೃತ್ಯ ಕಲಾವಿದೆ, ಕಳೆದ ಹತ್ತುವರ್ಷಗಳಿಂದ ಅತ್ಯಂತ ಪರಿಶ್ರಮ- ನಿಷ್ಠೆಯಿಂದ ಅವರಲ್ಲಿ ನೃತ್ಯಾಭ್ಯಾಸ ಮಾಡುತ್ತಿದ್ದಾಳೆ. ಪರಿಣತ ಅಭಿನಯ-ಹರಿತ ನೃತ್ತ ಪಾಂಡಿತ್ಯದಲ್ಲಿ ಪಂದನಲ್ಲೂರು ಬಾನಿಯಲ್ಲಿ ಹೆಸರು ಮಾಡಿರುವ ಗುರು ಸಂಗೀತಾ ಅವರ ಮಾರ್ಗದರ್ಶನದಲ್ಲಿ, ನೃತ್ಯ ಸಂಯೋಜನೆಯಲ್ಲಿ ವರ್ಷಾ, ಅನೇಕ ನೃತ್ಯ ಪ್ರದರ್ಶನಗಳನ್ನು ನೀಡಿ ಕಲಾರಸಿಕರ ಮೆಚ್ಚುಗೆ ಗಳಿಸಿದ್ದಾಳೆ. ಶ್ರೀ ಮಣಿಕಂಠನ್ ಅಚ್ಯುತನ್ ಮತ್ತು ಮಹೇಶ್ವರಿಯವರ ಪುತ್ರಿಯಾದ ವರ್ಷಾ, ಇದೇ ಆಗಸ್ಟ್ ತಿಂಗಳ 10 ಶನಿವಾರದಂದು ಮಲ್ಲೇಶ್ವರದ 'ಸೇವಾಸದನ'ದಲ್ಲಿ ಬೆಳಗ್ಗೆ 10 ಗಂಟೆಗೆ ತನ್ನ ನೃತ್ಯದ ಕಲಾಸೊಬಗನ್ನು ಪ್ರದರ್ಶಿಸಲು ವಿದ್ಯುಕ್ತವಾಗಿ ರಂಗಪ್ರವೇಶ ಮಾಡುತ್ತಿದ್ದಾಳೆ. ಆಕೆಯ ನೃತ್ಯ ಸೌಂದರ್ಯವನ್ನು ಕಣ್ತುಂಬಿಕೊಳ್ಳಲು ಎಲ್ಲ ಕಲಾರಸಿಕರಿಗೂ ಆದರದ ಸುಸ್ವಾಗತ.

ಕು. ವರ್ಷಾ ಬಾಲಪ್ರತಿಭೆ. ಐದುವರ್ಷದ ಮಗಳ ಹೆಜ್ಜೆಗಳ ತಾಳ-ಲಯಜ್ಞಾನ ಹಾಗೂ ಅವಳ ನೃತ್ಯ ಪ್ರತಿಭೆಯನ್ನು ಗುರುತಿಸಿದ ಹೆತ್ತವರು, ಅವಳ ಪ್ರತಿಭಾ ಪೋಷಣೆಗೆ ಮುಂದಾದರು. ಶಾಸ್ತ್ರೀಯವಾಗಿ ಭರತನಾಟ್ಯವನ್ನು ಕಲಿಯಲು ಪ್ರಸಿದ್ಧ ಗುರುಗಳಾದ ಡಾ. ಸಂಗೀತಾ ಕಪಿಲನ್ ಅವರಲ್ಲಿ ಸೇರಿಸಿದರು. ಅಲ್ಲಿಂದ ವರ್ಷಾಳಿಗೆ ಕ್ರಮಬದ್ಧ ಉತ್ತಮ ನೃತ್ಯಶಿಕ್ಷಣ ದೊರೆಯತೊಡಗಿತು. ವರ್ಷಾ, ಅಷ್ಟೇ ಆಸಕ್ತಿಯಿಂದ ನೃತ್ಯಾರ್ಜನೆ ಮಾಡಿಕೊಳ್ಳತೊಡಗಿದಳು. ಕಳೆದ ಹತ್ತುವರ್ಷಗಳಿಂದ ಏಕಗುರು ನಿಷ್ಠೆಯಲ್ಲಿ ಸಂಗೀತಾ ಅವರ ಬಳಿಯೇ ಪಂದನಲ್ಲೂರು ಶೈಲಿಯ ಭರತನಾಟ್ಯವನ್ನು ಅತ್ಯಂತ ಆಸಕ್ತಿ-ಪರಿಶ್ರಮಗಳಿಂದ ಕಲಿಯುತ್ತ 'ಉಷಾಸ್ ಫೌಂಡೇಶನ್' ನೃತ್ಯಶಾಲೆಯ ಎಲ್ಲ ಕಾರ್ಯಕ್ರಮಗಳಲ್ಲಿ, ನಾಡಿನ ಅನೇಕ ವೇದಿಕೆಗಳ ಮೇಲೆ ನರ್ತಿಸಿದ್ದಾಳೆ.

ಶಾಲಾ- ಕಾಲೇಜಿನ ಎಲ್ಲ ಸಾಂಸ್ಕೃತಿಕ ಚಟುವಟಿಕೆಗಳಲ್ಲೂ ವರ್ಷಾ ಮುಂದು. ಅಂತರ್ಶಾಲೆ ಮತ್ತು ಕಾಲೇಜು ನೃತ್ಯಸ್ಪರ್ಧೆಗಳಲ್ಲಿ ಬಹುಮಾನಗಳ ಸೂರೆ. ಸದಾ ಲವಲವಿಕೆಯಿಂದಿರುವ ವರ್ಷಾ ನಾಯಕತ್ವದ ಗುಣ ಹೊಂದಿದ್ದು, ಓದಿನಲ್ಲೂ ಬುದ್ಧಿವಂತಿಕೆ ಮೆರೆದಿರುವುದು ಅವಳ ಅಗ್ಗಳಿಕೆ. ಪ್ರಸ್ತುತ ರಾಮಯ್ಯ ಯೂನಿವರ್ಸಿಟಿ ಆಫ್ ಅಪ್ಲೈಡ್ ಸೈನ್ಸಸ್ ನಲ್ಲಿ ಬಯೋಟೆಕ್ನಾಲಜಿಯಲ್ಲಿ ಬಿ .ಎಸ್ಸಿ. (ಆನರ್ಸ್) ವಿದ್ಯಾಭ್ಯಾಸ ನಡೆಸುತ್ತಿದ್ದಾಳೆ. ಪಾಕ ಪ್ರವೀಣೆಯಾದ ವರ್ಷಳ ಇನ್ನಿತರ ಅಚ್ಚುಮೆಚ್ಚಿನ ಹವ್ಯಾಸಗಳೆಂದರೆ ಚಿತ್ರಕಲೆ ಮತ್ತು ಸಂಗೀತ. ಚಂಡೀಘರ್ ನ ಪ್ರಾಚೀನ ಕಲಾಕೇಂದ್ರದಿಂದ ಡ್ರಾಯಿಂಗ್ ಕಲೆಯಲ್ಲಿ ಡಿಸ್ಟಿಂಕ್ಷನ್ ಮತ್ತು ಕಲ್ಕತ್ತಾದ ರವೀಂದ್ರ ಭಾರತೀ ಯುನಿವರ್ಸಿಟಿಯಿಂದ ಸಂಗೀತ ಪ್ರತಿಭೆ-ಸಾಧನೆಗಾಗಿ ಡಿಸ್ಟಿಂಕ್ಷನ್ ಪಡೆದಿರುವುದು ವರ್ಷಳ ವೈಶಿಷ್ಟ್ಯ. ತಾನು ನೃತ್ಯ ಕಲಿಯುತ್ತಿರುವ 'ಉಷಾಸ್ ಫೌಂಡೇಶನ್' ನ ವಿವಿಧ ನೃತ್ಯ ಪ್ರದರ್ಶನ ಕಾರ್ಯಕ್ರಮದ ಸಂದರ್ಭದಲ್ಲಿ ವರ್ಷಾಳಿಗೆ ವಿಪುಲ ಅವಕಾಶಗಳು ದೊರೆತಿವೆ. ವಿವಿಧ ನಾಟ್ಯಾಂಜಲಿ ನೃತ್ಯೋತ್ಸವಗಳು, ದೆಹಲಿ ಕರ್ನಾಟಕ ಸಂಘದಲ್ಲಿ ರಾಜ್ಯೋತ್ಸವ ಸಮಾರಂಭ, ತಿರುನೆಲ್ವೇಲಿ , ಇಸ್ಕಾನ್ ಮುಂತಾದೆಡೆ ನೃತ್ಯ ಪ್ರದರ್ಶನ , ನವರಾತ್ರಿ, ವಾಲ್ಮೀಕಿ ಜಯಂತಿ- ಮುಂತಾದ ನೃತ್ಯೋತ್ಸವಗಳಲ್ಲಿ ವರ್ಷಾ ನರ್ತಿಸುವ ಅವಕಾಶ ಪಡೆದು ಕಲಾರಸಿಕರಿಂದ ಮನ್ನಣೆ-ಮೆಚ್ಚುಗೆ ಗಳಿಸಿದ್ದಾಳೆ.

**ವೈ.ಕೆ.ಸಂಧ್ಯಾ ಶರ್ಮ**

# ಡ್ರೈ ಸ್ಕಿನ್ ಗೆ ಸಿಂಪಲ್ ಟಿಪ್ಸ್

## ಬ್ಯೂಟಿ ಟಿಪ್ಸ್

ಬೆಳ್ಳಗಿನ ಹೊಳೆಯುವ ಚರ್ಮ ಇರಬೇಕೆಂದು ಪ್ರತಿಯೊಬ್ಬರೂ ಬಯಸುತ್ತಾರೆ. ಆದರೆ ಬೇಸಿಗೆಯಲ್ಲಿ ತ್ವಚೆಯ ರಕ್ಷಣೆ ಕಷ್ಟ. ಮುಖ ಒಣಗಿ ಕಾಂತಿ ಕಳೆದುಕೊಳ್ಳುತ್ತೆ . ಚರ್ಮ ಒಣಗುವ ಮುನ್ನ ಕಾಳಜಿ ತೆಗೆದುಕೊಳ್ಳುವುದು ಉತ್ತಮ. ಒಣ ಚರ್ಮ ಸಮಸ್ಯೆ ನಿವಾರಣಗೆ ಮಾರುಕಟ್ಟೆಯಲ್ಲಿ ಸಾಕಷ್ಟು ಬ್ಯೂಟಿ ಪ್ರಾಡಕ್ಟ್ ಗಳಿವೆ. ಆದ್ರೆ ಅವುಗಳ ಬಳಕೆಯಿಂದ ಅಡ್ಡ ಪರಿಣಾಮದ ಅಪಾಯ ಕಾಡುತ್ತದೆ. ಆದ್ದರಿಂದ ಬೇಸಿಗೆಯಲ್ಲಿ ಮುಖದ ಆರೋಗ್ಯವನ್ನು ಕಾಪಾಡಿಕೊಂಡು, ಸೌಂದರ್ಯವನ್ನು ಹೆಚ್ಚಿಸಲು ಕೆಲವು ಸರಳ ನೈಸರ್ಗಿಕ ಉಪಾಯಗಳು ಇಲ್ಲಿವೆ. ಜೇನುತುಪ್ಪ ಆರೋಗ್ಯಕ್ಕೊಂದೇ ಅಲ್ಲ ತ್ವಚೆಗೆ ಉತ್ತಮ. ಎಲ್ಲರ ಮನೆಯಲ್ಲಿ ಸಾಮಾನ್ಯವಾಗಿ ಇರುವ ಪದಾರ್ಥ ಇದು. ಜೇನುತುಪ್ಪವನ್ನು ಮುಖದ ಮೇಲೆ ಹಚ್ಚಿ ನಿಧಾನವಾಗಿ ಸ್ಕಬ್ ಮಾಡಬೇಕು. ಹತ್ತು ನಿಮಿಷದ ನಂತರ ಮುಖವನ್ನು ನೀರಿನಲ್ಲಿ ತೊಳೆಯಬೇಕು. ಇದು ಮುಖದ ಕಾಂತಿ ಹೆಚ್ಚಿಸುವ ಜೊತೆಗೆ ಒಣ ಚರ್ಮ ಸಮಸ್ಯೆಯಿಂದ ಮುಕ್ತಿ ನೀಡುತ್ತದೆ. ಹಾಲು ಮತ್ತು ಆಲಿವ್ ಆಯಿಲ್ ಕೂಡ ಚರ್ಮದ ಕಾಂತಿ ಹೆಚ್ಚಿಸುತ್ತವೆ.



ತಂಪಾದ ಹಾಲಿನಲ್ಲಿ ಆಲಿವ್ ಆಯಿಲ್ ನ 2 ಹನಿ ಹಾಕಿ ಅದನ್ನು ಮುಖಕ್ಕೆ ಮಸಾಜ್ ಮಾಡುವ ಮೂಲಕ ಒಣ ಚರ್ಮದಿಂದ ಪರಿಹಾರ ಹೊಂದಬಹುದಾಗಿದೆ.

# ರಾಶಿ ಭವಿಷ್ಯ




ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ–9964739507
www.jyotishyavaastu.com


**ಮೇಷ:** ಅಧಿಕ ನಷ್ಟ, ಸರ್ಕಾರಿ ಅಧಿಕಾರಿಗಳಿಂದ ಅನುಕೂಲ, ಶತ್ರು ದಮನ, ಕೋರ್ಟ್ ಕೇಸುಗಳಲ್ಲಿ ಜಯ

**ವೃಷಭ:** ಆಸ್ತಿ ಸಮಸ್ಯೆಗಳು ಬಗೆಹರಿಯುವುದು, ಸಹೋದರಿಯಿಂದ ಅನುಕೂಲ, ರಾಜಕೀಯ ವ್ಯಕ್ತಿಗಳ ಭೇಟಿ

**ಮಿಥುನ:** ಉದ್ಯೋಗ ಸ್ಥಳ, ಗೃಹ ಬದಲಾವಣೆ ಆಲೋಚನೆ, ಮಾತಿನಿಂದ ಕುಟುಂಬಸ್ಥರಿಗೆ ನೋವು, ಗುಪ್ತ ಧನಾಗಮನ

**ಕಟಕ:** ಅಧಿಕ ಧನಾಗಮನ, ಅನಗತ್ಯ ತಿರುಗಾಟ, ಅಧಿಕ ಧೈರ್ಯ ದಕ್ಷತೆ, ಶೌರ್ಯ ದಿಟ್ಟತನ

**ಸಿಂಹ:** ಆದಾಯ ಮತ್ತು ನಷ್ಟ ಸಮ, ಉತ್ತಮ ಹೆಸರು ಗೌರವ ಕೀರ್ತಿ, ಅಭಿವೃದ್ಧಿ ಹೊಂದಬೇಕೆನ್ನುವ ಹಂಬಲ , ಆರ್ಥಿಕ ಒತ್ತಡಗಳಿಂದ ನಿದ್ರಾಭಂಗ

**ಕನ್ಯಾ:** ಒತ್ತಡಕ್ಕೆ ಸಿಲುಕುವಿರಿ, ಉದ್ಯೋಗ ಒತ್ತಡದಿಂದ ನಿದ್ರಾಭಂಗ, ನಷ್ಟದ ಪ್ರಮಾಣ ಅಧಿಕ, ಸರ್ಕಾರಿ ಅಧಿಕಾರಿಗಳಿಂದ ಸಂಕಷ್ಟ

**ತುಲಾ:** ಉದ್ಯೋಗ ಲಾಭ, ಲಾಭದ ಪ್ರಮಾಣ ಕುಂಠಿತ,ಅದೃಷ್ಟ ವಂಚಿತರು ಎನ್ನುವ ಭಾವನೆ

**ವೃಶ್ಚಿಕ:** ರಾಜಕೀಯ ವ್ಯಕ್ತಿಗಳಿಂದ ಅನುಕೂಲ, ಅನುಕೂಲಕರ ದಿನ, ಮಿತ್ರರಿಂದ ಅದೃಷ್ಟ, ಉತ್ತಮ ಹೆಸರು ಗೌರವ ಕೀರ್ತಿ ಪ್ರತಿಷ್ಠೆ

**ಧನಸ್ಸು:** ಅನಿರೀಕ್ಷಿತ ಗಣ್ಯರ ಭೇಟಿ, ಪೂರ್ವಿಕರ ಕಾರ್ಯದಲ್ಲಿ ತೊಡಗುವಿರಿ, ಪ್ರಯಾಣದಲ್ಲಿ ತೊಂದರೆ ಎಚ್ಚರಿಕೆ, ಉದ್ಯೋಗ ಸಮಸ್ಯೆಗಳು

**ಮಕರ:** ಸಂಗಾತಿಯೊಂದಿಗೆ ಕಲಹ, ಪಾಲುದಾರಿಕೆಯಲ್ಲಿ ಸಮಸ್ಯೆ, ಮಾನಸಿಕವಾಗಿ ಒತ್ತಡ

**ಕುಂಭ:** ಆರೋಗ್ಯ ಸಮಸ್ಯೆ ಕಾಡುವುದು, ನೀರಿನಿಂದ ಮತ್ತು ಆಹಾರದಿಂದ ಸಮಸ್ಯೆ, ಅಧಿಕಾರಿಗಳಿಂದ ಸರ್ಕಾರದಿಂದ ಸಮಸ್ಯೆ, ಪರಿಹಾರ ಕಾವಿ ಬಟ್ಟೆಯನ್ನು ದಾನ ಮಾಡಿ

**ಮೀನ:** ಪ್ರೀತಿ ಪ್ರೇಮ ವಿಷಯಗಳಲ್ಲಿ ಸಮಸ್ಯೆ, ಮಕ್ಕಳೊಂದಿಗೆ ವಾಗ್ವಾದ ಮತ್ತು ಬೇಸರ, ಸಾಲದ ಸಮಸ್ಯೆ ಶತ್ರು ಬಾಧೆ , ನಷ್ಟದ ಪ್ರಮಾಣ ಅಧಿಕ

# ಇಂಟರ್‌ನ್ಯಾಷನಲ್ ಕ್ಯಾಟ್ ಡೇ

ಆಗಸ್ಟ್ 8 ಅಂತರರಾಷ್ಟ್ರೀಯ ಬೆಕ್ಕು ದಿನವಾಗಿದೆ - ಮನುಷ್ಯನ ಅತ್ಯಂತ ಸಾಮಾನ್ಯ ಮತ್ತು ಪ್ರಾಚೀನ ಸಾಕುಪ್ರಾಣಿಗಳಲ್ಲಿ ಒಂದನ್ನು ಆಚರಿಸುವ ದಿನ. ಅವರನ್ನು ದೇವರಂತೆ ಪೂಜಿಸಲಾಗುತ್ತದೆ (ನಾವು ನಿಮ್ಮನ್ನು ನೋಡುತ್ತೇವೆ, ಈಜಿಪ್ಟ್.) ಇದು ಆಶ್ಚರ್ಯವೇನಿಲ್ಲ, ಬೆಕ್ಕುಗಳು ಗ್ರಹದ ತಂಪಾದ ಜೀವಿಗಳಲ್ಲಿ ಒಂದಾಗಿದೆ: ಅವು ಸ್ವತಂತ್ರ, ಜಿಜ್ಞಾಸೆ, ಸಾಹಸಮಯ, ಅದ್ಭುತ ಭೌತಶಾಸ್ತ್ರ ಮತ್ತು ಶಕ್ತಿಯನ್ನು ಹೊಂದಿವೆ.

ಬೆಕ್ಕುಗಳು ಮಾಂಸಾಹಾರಿ ಸಣ್ಣ ರೋಮದಿಂದ ಕೂಡಿದ ಸಸ್ತನಿಗಳಾಗಿವೆ - ಬಹುಪಾಲು - ನಾಲ್ಕು ಕಾಲುಗಳು, ಬಾಲ ಮತ್ತು ಉಗುರುಗಳು, ಪ್ರಾಚೀನ ಕಾಲದಿಂದಲೂ ಮಾನವರು ಸಾಕುಪ್ರಾಣಿಗಳಾಗಿ ಸಾಕುಪ್ರಾಣಿಗಳಾಗಿರುತ್ತಾರೆ, ಅವರು ಆಫ್ರಿಕನ್ ವೈಲ್ಡ್ ಕ್ಯಾಟ್ನಿಂದ ಬಂದವರು ಮತ್ತು ಅವರು ಕ್ರಿಮಿಕೀಟಗಳನ್ನು ಹಿಡಿಯಲು ಬಳಸುತ್ತಿದ್ದರು.

ಬೆಕ್ಕುಗಳ ಬಗ್ಗೆ ಮೊದಲ ಐತಿಹಾಸಿಕ ಮಾನವ ದಾಖಲೆಯನ್ನು ಪ್ರಾಚೀನ ಈಜಿಪ್ಟಿನ ನಾಗರಿಕತೆಯ ಸಂಸ್ಕೃತಿಯಲ್ಲಿ ಕಾಣಬಹುದು. ನಾವೆಲ್ಲರೂ ಬೆಕ್ಕುಗಳನ್ನು ಈಜಿಪ್ಟಿನವರೊಂದಿಗೆ ಸಂಬಂಧ ಹೊಂದಿದ್ದೇವೆ, ಏಕೆಂದರೆ ಅವರ ಆರಾಧನೆ ಮತ್ತು ಬೆಕ್ಕುಗಳನ್ನು ದೇವರು ಎಂದು ಪರಿಗಣಿಸುತ್ತದೆ. ಮಾಫ್ಡೆಟ್ ಮೊದಲ ತಿಳಿದಿರುವ ಬೆಕ್ಕು ದೇವತೆ ಮತ್ತು ಮೊದಲ ರಾಜವಂಶದ ಸಮಯದಲ್ಲಿ ಹಾವುಗಳು, ಚೇಳುಗಳು ಮತ್ತು ದುಷ್ಟರ ವಿರುದ್ಧ ರಕ್ಷಕ ಎಂದು ಪರಿಗಣಿಸಲ್ಪಟ್ಟಿತು, ಆದ್ದರಿಂದ ಅವರಿಗೆ ಬೆಕ್ಕುಗಳು ಕೇವಲ ದೇವತೆಗಳಾಗಿರಲಿಲ್ಲ, ಆದರೆ ರಕ್ಷಕರೂ ಆಗಿದ್ದವು.

ನಂತರ, ಈಜಿಪ್ಟಿನ ರಾಜವಂಶದ ಪತನದ ನಂತರ, ಬೆಕ್ಕುಗಳು ಎಲ್ಲೆಡೆ ಜನಪ್ರಿಯವಾಯಿತು! ಗ್ರೀಕರು ಮತ್ತು ರೋಮನ್ನರು ಅವುಗಳನ್ನು ಕೀಟ ನಿಯಂತ್ರಣವಾಗಿ ಬಳಸಿದರು, ಮತ್ತು ಪೂರ್ವದಲ್ಲಿ, ಬೆಕ್ಕುಗಳು ಮೂಲತಃ ಶ್ರೀಮಂತ ಮತ್ತು ಶ್ರೀಮಂತ ಜನರ ಒಡೆತನದಲ್ಲಿದ್ದವು. ಆದರೆ ಮಧ್ಯಯುಗದಲ್ಲಿ, ಯುರೋಪ್ನಲ್ಲಿ, ಬೆಕ್ಕುಗಳು ಮೂಢನಂಬಿಕೆಯೊಂದಿಗೆ ಸಂಬಂಧ ಹೊಂದಿದ್ದವು ಮತ್ತು 1348 ರ ಬ್ಲ್ಯಾಕ್ ಡೆತ್ನ ಸಮಯದಲ್ಲಿ ಈ ರೋಗವನ್ನು ಹೊತ್ತೊಯ್ಯುವ ಶಂಕೆಯುಂಟಾಯಿತು, ಆ ಯುಗದಲ್ಲಿ ಹಲವಾರು ಬೆಕ್ಕುಗಳು ಕೊಲ್ಲಲ್ಪಟ್ಟವು ಮತ್ತು 1600 ರವರೆಗೂ ಅದು ಸಂಭವಿಸಲಿಲ್ಲ. ಬೆಕ್ಕುಗಳ ಖ್ಯಾತಿಯು ಚೇತರಿಸಿಕೊಳ್ಳಲು ಪ್ರಾರಂಭಿಸಿತು.

ಅಮೆರಿಕಾದಲ್ಲಿ, ಕ್ರಿಮಿಕೀಟಗಳು ಮತ್ತು ರೋಗಗಳನ್ನು ಕಡಿಮೆ ಮಾಡಲು ಬೆಕ್ಕುಗಳು ವಸಾಹತುಶಾಹಿ ಹಡಗುಗಳ ಸರಕುಗಳ ಭಾಗವಾಗಿದ್ದವು, ಆದ್ದರಿಂದ ಆ ಬೆಕ್ಕುಗಳು ತೀರಕ್ಕೆ ಹೋಗಿ ಅಭಿವೃದ್ಧಿ ಹೊಂದುತ್ತವೆ. ಇತ್ತೀಚಿನ ದಿನಗಳಲ್ಲಿ, ಆಧುನಿಕ ಸಮಾಜದಲ್ಲಿ ಬೆಕ್ಕುಗಳು ಪಾಪ್ ಐಕಾನ್‌ಗಳಲ್ಲಿ ಒಂದಾಗಿವೆ ಎಂದು ತೋರುತ್ತದೆ.

# ರಾಷ್ಟ್ರಪತಿ ಭವನದ ಅಮೃತ ಉದ್ಯಾನಕ್ಕೆ ಆಗಸ್ಟ 16ರಿಂದ ಸಾರ್ವಜನಿಕರಿಗೆ ಮುಕ್ತ ಪ್ರವೇಶ



**ನವದೆಹಲಿ:** ರಾಷ್ಟ್ರಪತಿ ಭವನದಲ್ಲಿರುವ ಅಮೃತ ಉದ್ಯಾನವು ಆಗಸ್ಟ್ 16ರಿಂದ ಸೆಪ್ಟೆಂಬರ್ 15ರವರೆಗೆ ಸಾರ್ವಜನಿಕರಿಗೆ ಮುಕ್ತವಾಗಿರಲಿದೆ. ವಾರ್ಷಿಕ ಉದ್ಯಾನೋತ್ಸವವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಆಗಸ್ಟ್ 14ರಂದು ಉದ್ಘಾಟಿಸಲಿದ್ದಾರೆ. ರಾಷ್ಟ್ರೀಯ ಕ್ರೀಡಾ ದಿನವನ್ನು ಆಚರಿಸಲು ಆಗಸ್ಟ್ 29 ಅನ್ನು ಕ್ರೀಡಾಪಟುಗಳಿಗೆ ಪ್ರತ್ಯೇಕವಾಗಿ ಮೀಸಲಿಡಲಾಗಿದೆ. ಹಿಂದಿನ ವರ್ಷದಂತೆ ಸೆಪ್ಟೆಂಬರ್ 5 ಶಿಕ್ಷಕರ ದಿನಾಚರಣೆಯಂದು ಶಿಕ್ಷಕರಿಗೆ ಮೀಸಲಿಡಲಾಗಿದೆ.

ನಿರ್ವಹಣೆಗಾಗಿ ಅಮೃತ್ ಉದ್ಯಾನವನ್ನು ಎಲ್ಲಾ ಸೋಮವಾರಗಳಂದು ಮುಚ್ಚಲಾಗುತ್ತದೆ. ಸಾರ್ವಜನಿಕರಿಗೆ ಪ್ರವೇಶವು ರಾಷ್ಟ್ರಪತಿ ಭವನದ ಗೇಟ್ ನಂ. 35 ರಿಂದ ಉತ್ತರ ಅವೆನ್ಯೂ ರಸ್ತೆಯ ಬಳಿ ಇರುತ್ತದೆ. ಅಷ್ಟೇ ಅಲ್ಲದೆ ಸ್ಪಿರಿಚುವಲ್ ಗಾರ್ಡನ್, ಹರ್ಬಲ್ ಗಾರ್ಡನ್, ಬೋನ್ಸಾಯ್ ಗಾರ್ಡನ್, ಮ್ಯೂಸಿಕಲ್ ಗಾರ್ಡನ್ ಗಳನ್ನು ಕೂಡ ವೀಕ್ಷಿಸಬಹುದಾಗಿದೆ. ಸಾರ್ವಜನಿಕರು ಪ್ರವೇಶ ಮಾಡಬಹುದು. ಹಾಗೆಯೇ ಅದೇ ಗೇಟ್ ಮೂಲಕವೇ ಹೊರಗೆ ಹೋಗಲು ಅವಕಾಶ ಮಾಡಿಕೊಡಲಾಗಿದೆ.

ಉದ್ಯಾನದಲ್ಲಿ ಸುಂದರವಾದ ಹುಲ್ಲು, ಆಧ್ಯಾತ್ಮಿಕ ಉದ್ಯಾನ, ಗಿಡಮೂಲಿಕೆಯ ಗಾರ್ಡನ್ ಹಾಗೂ ಸಂಗೀತ ಉದ್ಯಾನವಿದೆ. ನೀರಿನ ಬಾಟಲಿ, ಕ್ಯಾಮರಾ, ರೇಡಿಯೋ, ಬ್ಯಾಗ್, ತಿಂಡಿ ಸೇರಿದಂತೆ ಯಾವುದೇ ವಸ್ತುಗಳನ್ನು ಉದ್ಯಾನಕ್ಕೆ ತರುವಂತಿಲ್ಲ. ಶೌಚಾಲಯ, ಪ್ರಥಮ ಚಿಕಿತ್ಸೆ , ವೈದ್ಯಕೀಯ ಸೌಲಭ್ಯವನ್ನು ಅಲ್ಲಿಯೇ ಒದಗಿಸಲಾಗುತ್ತದೆ.

ಇತ್ತೀಚೆಗಷ್ಟೇ ರಾಷ್ಟ್ರಪತಿ ಭವನದ ಆವರಣದಲ್ಲಿರುವ ಮೊಘಲ್ ಉದ್ಯಾನಕ್ಕೆ ಅಮೃತ ಉದ್ಯಾನ ಎಂದು ರಾಷ್ಟ್ರಪತಿಯವರು ಮರುನಾಮಕರಣ ಮಾಡಿದ್ದಾರೆ. ಮೂಲತಃ ಇದು ಈಸ್ಟ್ ಲಾನ್, ಸೆಂಟ್ರಲ್ ಲಾನ್, ಲಾಂಗ್ ಗಾರ್ಡನ್ ಮತ್ತು ಸರ್ಕ್ಯುಲರ್ ಗಾರ್ಡನ್ ಅನ್ನು ಒಳಗೊಂಡಿತ್ತು. ಮಾಜಿ ರಾಷ್ಟ್ರಪತಿ ಡಾ. ಎಪಿಜೆ ಅಬ್ದುಲ್ ಕಲಾಂ ಮತ್ತು ರಾಮ್ ನಾಥ್ ಕೋವಿಂದ್ ಅವರ ಅವಧಿಯಲ್ಲಿ ಹರ್ಬಲ್-I, ಹರ್ಬಲ್-II, ಟ್ಯಾಕ್ಟೈಲ್ ಗಾರ್ಡನ್, ಬೋನ್ಸಾಯ್ ಗಾರ್ಡನ್ ಮತ್ತು ಆರೋಗ್ಯ ವನಂಗಳಂತಹ ಹೆಚ್ಚಿನ ಉದ್ಯಾನಗಳನ್ನು ಅಭಿವೃದ್ಧಿಪಡಿಸಲಾಯಿತು.

# ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರ ಗುರಿ: ಸಚಿವ ಡಾ. ಎಸ್. ಜೈಶಂಕರ



**ನವದೆಹಲಿ:** ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರನ್ನು ಗುರಿಯಾಗಿಸಲಾಗುತ್ತಿದೆ. ನಾವು ಅವರ ಪರಿಸ್ಥಿತಿಯ ಮೇಲೆ ನಿಗಾ ವಹಿಸಿದ್ದೇವೆ. ಅನೇಕ ನಗರಗಳಲ್ಲಿ ಅಲ್ಪಸಂಖ್ಯಾತ ಸಮುದಾಯದ ಅಂಗಡಿಗಳು ಮತ್ತು ಮನೆಗಳನ್ನು ಗುರಿಯಾಗಿರಿಸಿಕೊಂಡಿವೆ ಎಂಬುದು ಚಿಂತೆಯ ವಿಷಯವಾಗಿದೆ.

ಹಿಂಸಾಚಾರ ಎಷ್ಟರ ಮಟ್ಟಿಗೆ ಹಬ್ಬಿದೆ ಎಂಬುದು ಇನ್ನೂ ನಮಗೆ ತಿಳಿದಿಲ್ಲ. ಅವರ ರಕ್ಷಣೆಗಾಗಿ ಹಲವು ಸಂಘಟನೆಗಳು ಮುಂದೆ ಬಂದಿವೆಯೆನ್ನುವ ಸುದ್ದಿಯಿದೆ. ನಾವು ಅದನ್ನು ಸ್ವಾಗತಿಸುತ್ತೇವೆ; ಆದರೆ ಕಾನೂನು ಮತ್ತು ಸುವ್ಯವಸ್ಥೆ ಸುಧಾರಿಸುವವರೆಗೆ ನಾವು ಚಿಂತೆಯಲ್ಲಿದ್ದೇವೆ. ಈ ಪರಿಸ್ಥಿತಿಯಿಂದಾಗಿ ಗಡಿ ಭದ್ರತಾ ಪಡೆಗಳಿಗೆ ವಿಶೇಷವಾಗಿ ಜಾಗರೂಕತೆಯಿಂದ ಇರುವಂತೆ ಸೂಚನೆ ನೀಡಲಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಇವರು ರಾಜ್ಯಸಭೆಯಲ್ಲಿ ಬಾಂಗ್ಲಾದೇಶದ ಪರಿಸ್ಥಿತಿ ಕುರಿತು ಮಾತನಾಡುವಾಗ ಹೇಳಿದರು.

ಎಸ್. ಜೈಶಂಕರ ಇವರು ಮಾತು ಮುಂದುವರೆಸಿ, ಬಾಂಗ್ಲಾದೇಶದಲ್ಲಿ ಜುಲೈನಿಂದ ಹಿಂಸಾಚಾರ ಮುಂದುವರಿದಿದೆ. ಸರ್ವೋಚ್ಚ ನ್ಯಾಯಾಲಯದ ನಿರ್ಣಯದ ಬಳಿಕವೂ ಅಲ್ಲಿ ಹಿಂಸಾಚಾರ ಮುಂದುವರಿದಿದೆ. ಭಾರತ ಸರಕಾರ ಬಾಂಗ್ಲಾದೇಶದ ಅಧಿಕಾರಿಗಳ ಸಂಪರ್ಕದಲ್ಲಿದೆ. ಅಲ್ಲಿ ಪೊಲೀಸರ ಮೇಲೆಯೂ ದಾಳಿಗಳು ನಡೆಯುತ್ತಿವೆ.

# ಬಾಂಗ್ಲಾ ಖ್ಯಾತ ಗಾಯಕನ ಮನೆ ಮೇಲೂ ದಾಳಿ

**ಬಾಂಗ್ಲಾ:** ಬಾಂಗ್ಲಾದಲ್ಲಿ ಭುಗಿಲೆದ್ದಿರುವ ದಂಗೆಯಲ್ಲಿ ಅಲ್ಪಸಂಖ್ಯಾತ ಹಿಂದು ಗಳ ಮೇಲೆ ಕಿಡಿಗೇಡಿಗಳು ದಾಳಿ ನಡೆಸುತ್ತಿದ್ದು, ದಿನೇ ದಿನೇ ನರಕಯಾತನೆ ಅನುಭವಿಸುವಂತಾಗಿದೆ. ಹಿಂದುಗಳಿಗೆ ಸಂಬಂಧಿಸಿದ ಮನೆ ಅಂಗಡಿಗಳನ್ನು ಮತ್ತು ದೇಗುಲಗಳನ್ನು ಕಿಡಿಗೇಡಿಗಳು ಪುಡಿಗಟ್ಟಿದ್ದಾರೆ.ಕೈಗೆ ಸಿಕ್ಕವಸ್ತುಗಳನ್ನು ದೋಚುತ್ತಿದ್ದಾರೆ. ಇದೀಗ ಬಾಂಗ್ಲಾದೇಶದ ಖ್ಯಾತ ಗಾಯಕನ ಮನೆಗೆ ಪ್ರತಿಭಟನಾಕಾರರು ಬೆಂಕಿ ಇಟ್ಟಿದ್ದಾರೆ. ಬಾಂಗ್ಲಾದೇಶದ ಖ್ಯಾತ ಗಾಯಕ ರಾಹುಲ್ ಆನಂದ್‌ಅವರ ಢಾಕಾದ ಧನ್ಮೋಂಡಿಯಲ್ಲಿದ್ದಂತಹ ಮನೆಯನ್ನು ಲೂಟಿ ಮಾಡಿ ಅದಕ್ಕೆ ಬೆಂಕಿ ಹಚ್ಚಲಾಗಿದೆ. ಸೋಮವಾರದಂದು ಈ ಘಟನೆ ನಡೆದಿದ್ದು ಇದಕ್ಕೆ ಸಂಬಂಧಿಸಿದ ಫೋಟೋಗಳು ವೈರಲ್ ಆಗಿವೆ. ಪ್ರತಿಭಟನಾಕಾರರು ಗೇಟ್ ಮುರಿದು ನಂತರ ಮನೆಯಲ್ಲಿದ್ದ ವಸ್ತುಗಳನ್ನು ಒಡೆದು ಹಾಕಲಾರಂಭಿಸಿದ್ದರು. ದುಷ್ಕರ್ಮಿಗಳ ಹಚ್ಚಿದ ಬೆಂಕಿಗೆ ರಾಹುಲ್ ಆನಂದ್ ಅವರ ಮನೆಯಲ್ಲಿದ್ದ 3000ಕ್ಕೂ ಅಧಿಕ ಸಂಗೀತೋಪಕರಣಗಳು ಬೆಂಕಿಗಾಹುತಿಯಾಗಿವೆ. ಇನ್ನು ಕಿಡಿಗೇಡಿಗಳು ರಾಹುಲ್ ಆನಂದ್ ಮನೆಯಲ್ಲಿದ್ದ ಪೀಠೋಪಕರಣಗಳು, ಕನ್ನಡಿಗಳು ಸೇರಿದಂತೆ ಮನೆಯಲ್ಲಿದ್ದಂತಹ ದುಬಾರಿ ವಸ್ತುಗಳನ್ನೆಲ್ಲ ಕೊಂಡೊಯ್ದಿದ್ದಾರೆ. ಈ ಮನೆಯು ಸುಮಾರು 140 ವರ್ಷ ಹಳೆಯದ್ದಾಗಿತ್ತು. ರಾಹುಲ್ ಆನಂದ್ ಅವರು ಜಾನಪದ ಬ್ಯಾಂಡ್ ನಡೆಸುತ್ತಿದ್ದು ಇದಕ್ಕೆ ಜೋಲರ್ ಗಾನ್ ಎಂದು ಹೆಸರಿಟ್ಟಿದ್ದರು. ಇದೀಗ ದುಷ್ಕರ್ಮಿಗಳ ಅಟ್ಟಹಾಸಕ್ಕೆ ಇಡೀ ಪರಂಪರೆಯೇ ನಾಶವಾಗಿದೆ.



# ರಾಜ್ಯಸಭೆಯ ತೆರವಾದ 12 ಸ್ಥಾನಗಳಿಗೆ ಚುನಾವಣೆ ಘೋಷಣೆ



**ದೆಹಲಿ:** 9 ರಾಜ್ಯಗಳಲ್ಲಿ ತೆರವಾದ 12 ರಾಜ್ಯಸಭಾ ಸ್ಥಾನಗಳಿಗೆ ಸೆಪ್ಟಂಬರ್ 3ರಂದು ಚುನಾವಣೆ ನಡೆಸಲಾಗುವುದು ಎಂದು ಚುನಾವಣಾ ಆಯೋಗ ಬುಧವಾರ ಘೋಷಿಸಿದೆ.

ಕೇಂದ್ರ ಸಚಿವ ಪಿಯೂಷ್ ಗೋಯಲ್, ಸರ್ಬಾನಂದ ಸೋನೋವಾಲ್ ಹಾಗೂ ಜ್ಯೋತಿರಾದಿತ್ಯ ಸಿಂಧ್ಯಾ ಸೇರಿದಂತೆ ಹಾಲಿ ಸದಸ್ಯರು ಲೋಕಸಭೆಗೆ ಆಯ್ಕೆಯಾದ ಬಳಿಕ ರಾಜ್ಯ ಸಭೆಯ 10 ಸ್ಥಾನಗಳು ತೆರವಾಗಿವೆ.

ತೆಲಂಗಾಣ ಹಾಗೂ ಹಾಗೂ ಒಡಿಶಾದ 2 ರಾಜ್ಯಸಭಾ ಸ್ಥಾನಗಳಿಗೆ ಕೂಡ ಉಪ ಚುನಾವಣೆ ನಡೆಸಲಾಗುವುದು ಎಂದು ಆಯೋಗ ತಿಳಿಸಿದೆ.

ಕಾಂಗ್ರೆಸ್ ಸೇರಲು ಭಾರತ್ ರಾಷ್ಟ್ರ ಸಮಿತಿ (ಬಿಆರ್‌ಎಸ್)ಗೆ ರಾಜೀನಾಮೆ ನೀಡಿದ ಬಳಿಕ ತೆಲಂಗಾಣದ ಕೆ. ಕೇಶವ ರಾವ್ ರಾಜ್ಯಸಭೆಗೆ ಇತ್ತೀಚೆಗೆ ರಾಜೀನಾಮೆ ನೀಡಿದ್ದರು. ಬಿಜು ಜನತಾ ದಳ (ಬಿಜೆಡಿ)ದ ಸಂಸದೆ ಮಮತಾ ಮೊಹಂತಾ ತನ್ನ ರಾಜ್ಯಸಭಾ ಸ್ಥಾನಕ್ಕೆ ಹಾಗೂ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡಿದ್ದರು.

ರಾಜ್ಯಸಭೆ ಚುನಾವಣೆಗೆ ಆಗಸ್ಟ್ 14ರಂದು ಅಧಿಸೂಚನೆ ಹೊರಡಿಸಲಾಗುವುದು. ನಾಮಪತ್ರ ಸಲ್ಲಿಸಲು ಆಗಸ್ಟ್ 21 ಕೊನೆಯ ದಿನಾಂಕವಾಗಿದೆ. ಪ್ರತಿ ರಾಜ್ಯ ಸಭಾ ಸ್ಥಾನಕ್ಕೆ ಸೆಪ್ಟಂಬರ್ 3ರಂದು ಪ್ರತ್ಯೇಕ ಮತದಾನ ನಡೆಸಲಾಗುವುದು. ಅದೇ ದಿನ ಫಲಿತಾಂಶ ಪ್ರಕಟಿಸಲಾಗುವುದು ಎಂದು ಚುನಾವಣಾ ಆಯೋಗ ತಿಳಿಸಿದೆ.

# ಕೆನರಾ ಬ್ಯಾಂಕ್‌ನಿಂದ ಕೇರಳಕ್ಕೆ 1 ಕೋಟಿ ರೂಪಾಯಿ ಪರಿಹಾರ ನಿಧಿ



**ಬೆಂಗಳೂರು:** ಭಾರತದ ಪ್ರಮುಖ ಸಾರ್ವಜನಿಕ ವಲಯದ ಬ್ಯಾಂಕ್ ಆಗಿರುವ ಕೆನರಾ ಬ್ಯಾಂಕ್ ಇಂದು ರೂ. ಕೇರಳದ ವಯನಾಡಿನಲ್ಲಿ ಸಂಭವಿಸಿದ ಭೀಕರ ಪ್ರವಾಹದ ಹಿನ್ನೆಲೆಯಲ್ಲಿ ಪರಿಹಾರ ಮತ್ತು ಪುನರ್ವಸತಿ ಪ್ರಯತ್ನಗಳಿಗೆ ಬೆಂಬಲವಾಗಿ ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ 1 ಕೋಟಿ ರೂ.

ಈ ಕೊಡುಗೆಯು ಬಿಕ್ಕಟ್ಟಿನ ಸಮಯದಲ್ಲಿ ರಾಷ್ಟ್ರದೊಂದಿಗೆ ಒಗ್ಗಟ್ಟಿನಿಂದ ನಿಂತಿರುವುದರಿಂದ ಅದರ ಪ್ರಮುಖ ಮೌಲ್ಯವಾದ 'ಟುಗೆದರ್ ವಿ ಕ್ಯಾನ್' ಗೆ ಬ್ಯಾಂಕ್ನ ಬದ್ಧತೆಯನ್ನು ಪ್ರತಿಬಿಂಬಿಸುತ್ತದೆ. ಕಾರ್ಪೊರೇಟ್ ಸಾಮಾಜಿಕ ಜವಾಬ್ದಾರಿಯ ಮಹತ್ವದ ಸೂಚಕದಲ್ಲಿ, ಕೆನರಾ ಬ್ಯಾಂಕಿನ ತಿರುವನಂತಪುರಂ ವೃತ್ತದ ಕಛೇರಿಯ ಜನರಲ್ ಮ್ಯಾನೇಜರ್ ಮತ್ತು ಸರ್ಕಲ್ ಹೆಡ್ ಪ್ರದೀಪ್ ಕೆ.ಎಸ್ ಅವರು ಇಂದು 1 ಕೋಟಿಯ ಡಿಮ್ಯಾಂಡ್ ಡ್ರಾಫ್ಟ್ ಅನ್ನು ಕೇರಳದ ಮಾನ್ಯ ಮುಖ್ಯಮಂತ್ರಿಗಳಾದ ಶ್ರೀ. ಪಿಣರಾಯಿ ವಿಜಯನ್. ಕೆನರಾ ಬ್ಯಾಂಕ್ನ ಸಿಎಸ್‌ಆರ್ ನಿಧಿಯಿಂದ ಪಡೆದ ಕೊಡುಗೆಯನ್ನು ವಯನಾಡಿನಲ್ಲಿ ಇತ್ತೀಚಿನ ದುರಂತದ ನಂತರ ನಡೆಯುತ್ತಿರುವ ಪರಿಹಾರ ಮತ್ತು ಚೇತರಿಕೆಯ ಪ್ರಯತ್ನಗಳಲ್ಲಿ ಸಹಾಯವಾಗಿ ಮುಖ್ಯಮಂತ್ರಿಗಳ ಸಂಕಷ್ಟ ಪರಿಹಾರ ನಿಧಿಗೆ ನಿರ್ದೇಶಿಸಲಾಗಿದೆ.ಈ ಪ್ರದೇಶದಲ್ಲಿ ನಡೆಯುತ್ತಿರುವ ಪರಿಹಾರ ಮತ್ತು ಚೇತರಿಕೆಯ ಪ್ರಯತ್ನಗಳನ್ನು ಬೆಂಬಲಿಸಲು ಬ್ಯಾಂಕ್ ಬದ್ಧವಾಗಿದೆ.

ಭಾರತದಾದ್ಯಂತ ಆಳವಾಗಿ ಬೇರೂರಿರುವ ರಾಷ್ಟ್ರೀಕೃತ ಬ್ಯಾಂಕ್ ಆಗಿ, ಕೆನರಾ ಬ್ಯಾಂಕ್ ತನ್ನ ಗ್ರಾಹಕರು ಮತ್ತು ಅದು ಸೇವೆ ಸಲ್ಲಿಸುವ ಸಮುದಾಯಗಳನ್ನು ಬೆಂಬಲಿಸುವಲ್ಲಿ ಯಾವಾಗಲೂ ಮುಂಚೂಣಿಯಲ್ಲಿದೆ ಎಂದು ಕೆನರಾ ಬ್ಯಾಂಕ್ನ ಎಂಡಿ ಮತ್ತು ಸಿಇಒ ಕೆ ಸತ್ಯನಾರಾಯಣ ರಾಜು ಹೇಳಿದರು. ''ಕೇರಳದಲ್ಲಿ ಪ್ರವಾಹದಿಂದ ಉಂಟಾದ ವಿನಾಶವು ಹೃದಯ ವಿದ್ರಾವಕವಾಗಿದೆ ಮತ್ತು ಪೀಡಿತ ಜನರಿಗೆ ಸಾಧ್ಯವಿರುವ ಎಲ್ಲ ಬೆಂಬಲವನ್ನು ನೀಡಲು ನಾವು ಬದ್ಧರಾಗಿದ್ದೇವೆ. ಈ ಕೊಡುಗೆಯು ಜೀವನವನ್ನು ಪುನರ್ನಿರ್ಮಿಸಲು ಮತ್ತು ಭರವಸೆಯನ್ನು ಪುನಃಸ್ಥಾಪಿಸಲು ಒಂದು ಸಣ್ಣ ಹೆಜ್ಜೆಯಾಗಿದೆ.

ಕೆನರಾ ಬ್ಯಾಂಕ್ ಸಾಮೂಹಿಕ ಕ್ರಿಯೆಯ ಶಕ್ತಿಯನ್ನು ನಂಬುತ್ತದೆ ಮತ್ತು ಇತರ ಸಂಸ್ಥೆಗಳು ಮತ್ತು ವ್ಯಕ್ತಿಗಳು ಮುಂದೆ ಬಂದು ಪರಿಹಾರ ಪ್ರಯತ್ನಗಳಿಗೆ ಕೊಡುಗೆ ನೀಡುವಂತೆ ಒತ್ತಾಯಿಸುತ್ತದೆ.

# ರಾಹುಲ್ ಸೇರಿದಂತೆ 7 ಸಂಸದರಿಗೆ ಮಾವಿನ ಹಣ್ಣುಗಳನ್ನು ಕಳುಹಿಸಿದ ಪಾಕ್ ಹೈಕಮಿಷನ್

**ನವದೆಹಲಿ:** ಪಾಕಿಸ್ತಾನದ ಹೈಕಮಿಷನ್ ವಿರೋಧ ಪಕ್ಷದ ನಾಯಕ ರಾಹುಲ್ ಗಾಂಧಿ ಸೇರಿದಂತೆ 7 ಭಾರತೀಯ ಸಂಸದರಿಗೆ ಮಾವಿನಹಣ್ಣುಗಳನ್ನು ಕಳುಹಿಸಿಕೊಟ್ಟಿದೆ. ಕಾಂಗ್ರೆಸ್ ಸಂಸದರಾದ ರಾಹುಲ್ ಗಾಂಧಿ, ಶಶಿ ತರೂರ್, ಸಮಾಜವಾದಿ ಪಕ್ಷದ ಸಂಸದರಾದ ಮೊಹಿಬ್ಬುಲ್ಲಾ ನದ್ವಿ, ಜಿಯಾ ಉರ್ ರೆಹಮಾನ್ ಬಾರ್ಕ್, ಅಫ್ಜಲ್ ಅನ್ಸಾರಿ, ಇಕ್ರಾ ಚೌಧರಿ ಮತ್ತು ಕಪಿಲ್ ಸಿಬಲ್ ಸೇರಿದಂತೆ ಸಂಸತ್ತಿನ ಬಹು ಭಾರತೀಯ ಸದಸ್ಯರಿಗೆ ಪಾಕಿಸ್ತಾನದ ಹೈಕಮಿಷನ್ ಬುಟ್ಟಿಗಳಲ್ಲಿ ಮಾವಿನ ಹಣ್ಣುಗಳನ್ನು ಕಳುಹಿಸಿದೆ ಎಂಬ ವರದಿಗಳು ತಿಳಿಸಿವೆ. 1981 ರಲ್ಲಿ, ಪಾಕಿಸ್ತಾನದ ಅಧ್ಯಕ್ಷ ಜಿಯಾ ಉಲ್ ಹಕ್ ಅವರು ಅಂದಿನ ಪ್ರಧಾನಿ ಇಂದಿರಾ ಗಾಂಧಿ ಅವರಿಗೆ ''ಅನ್ವರ್ ರತೌಲ್'' ಮಾವಿನ ಹಣ್ಣನ್ನು ಬುಟ್ಟಿಯಲ್ಲಿ ಕಳುಹಿಸಿದ್ದರು. 2015ರ ಈದ್ ಹಬ್ಬದ ಸಮಯದಲ್ಲಿ ಪಾಕ್ ಪ್ರಧಾನಿ ನವಾಜ್ ಷರೀಫ್ ಅವರು ಪ್ರಧಾನಿ ಮೋದಿ ಮತ್ತು ರಾಷ್ಟ್ರಪತಿ ಪ್ರಣಬ್ ಮುಖರ್ಜಿ, ಮನಮೋಹನ್ ಸಿಂಗ್ ಮತ್ತು ಅಟಲ್ ಬಿಹಾರಿ ವಾಜಪೇಯಿ ಸೇರಿದಂತೆ ಇತರ ನಾಯಕರಿಗೆ 10 ಕೆಜಿ ಮಾವಿನ ಹಣ್ಣುಗಳನ್ನು ಕಳುಹಿಸಿದ್ದರು.



# ಶೇಖ್ ಹಸೀನಾಳನ್ನು ಬಾಂಗ್ಲಾದೇಶಕ್ಕೆ ಒಪ್ಪಿಸಿ



**ಢಾಕಾ:** ಮಾಜಿ ಪ್ರಧಾನಿ ಶೇಖ್ ಹಸೀನಾ ಮತ್ತು ಆಕೆಯ ಸಹೋದರಿಯನ್ನು ಬಂಧಿಸಿ ವಾಪಸ್ ಕಳುಹಿಸುವಂತೆ ಭಾರತಕ್ಕೆ ಬಾಂಗ್ಲಾದೇಶ ಮನವಿ ಮಾಡಿದೆ. ಬಾಂಗ್ಲಾದೇಶದ ಸುಪ್ರೀಂ ಕೋರ್ಟ್ ಬಾರ್ ಅಸೋಸಿಯೇಷನ್ನ ಅಧ್ಯಕ್ಷ ಎಎಂ ಮಹಬೂಬ್ ಉದ್ದೀನ್ ಖೋಕೊನ್, ಮಾನವ ಹಕ್ಕುಗಳ ಉಲ್ಲಂಘನೆಯಲ್ಲಿ ಭಾಗಿಯಾಗಿದ್ದಾರೆಂದು ಆರೋಪಿಸಿ ಶೇಖ್ ಹಸೀನಾ ಮತ್ತು ಅವರ ಸಹೋದರಿ ರೆಹಾನಾಳನ್ನು ಬಂಧಿಸಿ ವಾಪಸ್ ಕಳುಹಿಸುವಂತೆ ಭಾರತವನ್ನು ಒತ್ತಾಯಿಸಿದ್ದಾರೆ. ನಾವು ಭಾರತದ ಜನರೊಂದಿಗೆ ಉತ್ತಮ ಸಂಬಂಧವನ್ನು ಕಾಪಾಡಿಕೊಳ್ಳಲು ಬಯಸುತ್ತೇವೆ. ದಯವಿಟ್ಟು ದೇಶ ಬಿಟ್ಟು ಪರಾರಿಯಾಗಿರುವ ಶೇಖ್ ಹಸೀನಾ ಮತ್ತು ಶೇಖ್ ರಿಹಾನ್ನಾ ಅವರನ್ನು ಬಂಧಿಸಿ, ಅವರನ್ನು ಬಾಂಗ್ಲಾದೇಶಕ್ಕೆ ವಾಸಪ್ ಕಳುಹಿಸಿ. ಶೇಖ್ ಹಸೀನಾ ಬಾಂಗ್ಲಾದೇಶದಲ್ಲಿ ಅನೇಕ ಜನರ ಪ್ರಾಣವನ್ನು ತೆಗೆದುಕೊಂಡಿದ್ದಾಳೆ ಎಂದು ತಿಳಿಸಿದ್ದಾರೆ.

ಖೋಕೊನ್ ಅವರು ಖಲೀದಾ ಜಿಯಾ ನೇತೃತ್ವದ ಬಾಂಗ್ಲಾದೇಶ ನ್ಯಾಶನಲ್ ಪಾರ್ಟಿಯ ಜಂಟಿ ಕಾರ್ಯದರ್ಶಿಯೂ ಆಗಿದ್ದಾರೆ.

# ಇಸ್ಮಾಯಿಲ್ ಹನಿಯೆಹ್ ಹತ್ಯೆ ; ಹೊಸ ನಾಯಕನಾಗಿ ಯಾಹ್ಯಾ ಸಿನ್ವಾರ್ ಆಯ್ಕೆ



**ದೆಹಲಿ:** ಇಸ್ಮಾಯಿಲ್ ಹನಿಯೆಹ್ ಸಾವಿನ ನಂತರ ಹಮಾಸ್ ಯಾಹ್ಯಾ ಸಿನ್ವಾರ್ ಅವರನ್ನು ಹೊಸ ನಾಯಕ ಎಂದು ಘೋಷಿಸಲಾಗಿದೆ. ಯಾಹ್ಯಾ ಸಿನ್ವಾರ್ ಅವರನ್ನು ಹಮಾಸ್ನ ಮುಖ್ಯಸ್ಥರನ್ನಾಗಿ ಆಯ್ಕೆ ಮಾಡುವ ಮೂಲಕ ಹಮಾಸ್ ತನ್ನ ಪ್ರತಿರೋಧದ ಹಾದಿಯನ್ನು ಮುಂದುವರೆಸುತ್ತಿದೆ ಎಂದು ಹಮಾಸ್ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಮಧ್ಯಪ್ರಾಚ್ಯದ ಪ್ರಕ್ಷುಬ್ಧ ಸಂದರ್ಭದಲ್ಲಿ ಪ್ಯಾಲೇಸ್ಟಿನಿಯನ್ ಉಗ್ರಗಾಮಿ ಗುಂಪು ಹಮಾಸ್ ಇದೀಗ ಹೊಸ ನಾಯಕನನ್ನು ಘೋಷಿಸಿದೆ.

ಸಿನ್ವಾರ್ ಇಸ್ರೇಲ್ ವಿರುದ್ಧದ ಅನೇಕ ಕಾರ್ಯಾಚರಣೆಗಳಲ್ಲಿ ತೊಡಗಿಸಿಕೊಂಡಿದ್ದಾರೆ. ಅವರು ಇಸ್ರೇಲಿ ಜೈಲುಗಳಲ್ಲಿ 20 ವರ್ಷಗಳನ್ನು ಕಳೆದಿದ್ದರು. ಅವರ ಬಿಡುಗಡೆಯ ನಂತರ, ಅವರು ಹಮಾಸ್ಗೆ ತೆರಳಿದರು ಮತ್ತು 2017ರಲ್ಲಿ ಗಾಜಾದಲ್ಲಿ ಅದರ ನಾಯಕರಾದರು. ಅವರ ನಾಯಕತ್ವದಲ್ಲಿ, ಹಮಾಸ್ ಗಾಜಾದಲ್ಲಿ ತನ್ನ ಮಿಲಿಟರಿ ಶಕ್ತಿ ಮತ್ತು ಪ್ರಭಾವವನ್ನು ಸುಧಾರಿಸುವತ್ತ ಗಮನಹರಿಸಿದೆ.

# 14 ತಿಂಗಳಲ್ಲಿ 9 ಮಹಿಳೆಯರ ಹತ್ಯೆ, ಮೂವರು ಶಂಕಿತರ ಬಂಧನ

**ದೆಹಲಿ:** ಬರೇಲಿಯಲ್ಲಿ ಸರಣಿ ಹಂತಕರ ಅಟ್ಟಹಾಸ ಹೆಚ್ಚಾಗಿದೆ, 14 ತಿಂಗಳಲ್ಲಿ 9 ಮಹಿಳೆಯರನ್ನು ಹತ್ಯೆ ಮಾಡಿದ್ದು, ಆಭರಣಗಳನ್ನು ದೋಚಿ ಪರಾರಿಯಾಗಿದ್ದಾರೆ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೊಲೀಸರು ಮೂವರು ಶಂಕಿತರನ್ನು ಬಂಧಿಸಿದ್ದಾರೆ. ಈ ಎಲ್ಲಾ ಕೊಲೆಗಳು ಕೇವಲ 25 ಕಿ.ಮೀ ವ್ಯಾಪ್ತಿಯಲ್ಲಿ ನಡೆದಿದ್ದು, ಈ ಎಲ್ಲಾ ಕೊಲೆಯ ಹಿಂದೆ ಒಂದೇ ಗುಂಪಿನ ಕೈವಾಡವಿದೆ ಎಂದು ಅಂದಾಜಿಸಲಾಗಿದೆ. 45 ರಿಂದ 55 ವರ್ಷ ವಯಸ್ಸಿನ ಎಲ್ಲಾ ಮಹಿಳೆಯರು, ಮಧ್ಯಾಹ್ನದ ಸುಮಾರಿಗೆ ಹೊಲಗಳಲ್ಲಿ ಕತ್ತು ಹಿಸುಕಿದ ಸ್ಥಿತಿಯಲ್ಲಿ ಪತ್ತೆಯಾಗಿದ್ದಾರೆ. ಅವರ ಬಟ್ಟೆಗಳು ಎಲ್ಲವೂ ಸರಿಯಾಗೇ ಇದ್ದವು ಹಾಗಾಗಿ ಅವರ ಮೇಲೆ ಲೈಂಗಿಕ ದೌರ್ಜನ್ಯ ನಡೆದಿರುವ ಸಾಧ್ಯತೆ ಕಡಿಮೆ ಎನ್ನಲಾಗಿದೆ. ಆರು ತಿಂಗಳಿನಿಂದ ಪೊಲೀಸರು ಈ ಪ್ರಕರಣಗಳ ತನಿಖೆ ನಡೆಸುತ್ತಿದ್ದಾರೆ ಎಂದು ಯುಪಿ ಪೊಲೀಸ್ ಮಹಾನಿರ್ದೇಶಕ ಪ್ರಶಾಂತ್ ಕುಮಾರ್ ಖಚಿತಪಡಿಸಿದ್ದಾರೆ. ಹಾಗಾದರೆ ಆಭರಣಗಳನ್ನು ದೋಚುವುದೇ ಅವರ ಗುರಿಯಾಗಿದೆ ಎಂದು ಆಲೋಚಿಸಲಾಗಿದೆ. ಇದೆಲ್ಲವೂ ಒಂದೇ ವ್ಯಾಪ್ತಿಯಲ್ಲಿ ನಡೆದಿರುವ ಕಾರಣ ಸೀರಿಯಲ್ ಕಿಲ್ಲರ್ಸ್ ಕೃತ್ಯವಿರಬಹುದು ಎಂದು ಅಂದಾಜಿಸಲಾಗಿದೆ. ಕೊಲೆಗಳ ಪುನರಾವರ್ತಿತ ಮಾದರಿಯು ಭಾರತದಲ್ಲಿನ ಇತರ ಕುಖ್ಯಾತ ಸೀರಿಯಲ್ ಕಿಲ್ಲರ್‌ಪ್ರಕರಣಗಳಿಗೆ ಹೋಲಿಕೆಗಳನ್ನು ಮಾಡಿದೆ. ತೀರಾ ಇತ್ತೀಚಿನವರಲ್ಲಿ ಒಬ್ಬರು ರವೀಂದರ್ ಕುಮಾರ್, 2015 ರಲ್ಲಿ ಆರು ವರ್ಷದ ಬಾಲಕಿಯ ಅತ್ಯಾಚಾರ ಮತ್ತು ಕೊಲೆ ಮಾಡಿ ಬಂಧಿಸಲ್ಪಟ್ಟಿದ್ದರು.

# ಥಾಯ್ಲೆಂಡ್: ವಿರೋಧ ಪಕ್ಷ ವಿಸರ್ಜನೆಗೆ ನ್ಯಾಯಾಲಯ ಆದೇಶ



**ಬ್ಯಾಂಕಾಕ್:** ಪ್ರಬಲ ರಾಜಪ್ರಭುತ್ವವನ್ನು ಟೀಕೆಗಳಿಂದ ರಕ್ಷಿಸುವ ಕಾನೂನನ್ನು ತಿದ್ದುಪಡಿ ಮಾಡಬೇಕೆಂದು ಆಗ್ರಹಿಸಿ ನಡೆಯುತ್ತಿರುವ ಅಭಿಯಾನವನ್ನು ಆರಂಭಿಸಿರುವ ಥಾಯ್ಲೆಂಡ್ ನ ಪ್ರಮುಖ ವಿರೋಧ ಪಕ್ಷ 'ಮೂವ್ ಫಾರ್ವರ್ಡ್' ಪಕ್ಷವನ್ನು ವಿಸರ್ಜಿಸುವಂತೆ ಸಾಂವಿಧಾನಿಕ ನ್ಯಾಯಾಲಯ ಬುಧವಾರ ಆದೇಶಿಸಿದೆ. ರಾಜಪ್ರಭುತ್ವವನ್ನು ಟೀಕೆಯಿಂದ ರಕ್ಷಿಸುವ ಕಾನೂನಿನಲ್ಲಿ ತಿದ್ದುಪಡಿ ಮಾಡಬೇಕೆಂಬ ಅಭಿಯಾನ ಅಸಾಂವಿಧಾನಿಕವಾಗಿದ್ದು ದೊರೆ ಆಡಳಿತದ ಮುಖ್ಯಸ್ಥರಾಗಿರುವ ಥಾಯ್ಲೆಂಡ್ ನ ಆಡಳಿತ ವ್ಯವಸ್ಥೆಯನ್ನು ದುರ್ಬಲಗೊಳಿಸುವ ಅಪಾಯವಿದೆ. ಆದ್ದರಿಂದ ಈ ಅಭಿಯಾನವನ್ನು ಕೈಬಿಡುವಂತೆ 6 ತಿಂಗಳ ಹಿಂದೆ ಇದೇ ನ್ಯಾಯಾಲಯ ಸೂಚಿಸಿತ್ತು. ಆದರೆ ಮೂವ್ ಫಾರ್ವರ್ಡ್ ಪಕ್ಷ ಇದನ್ನು ತಿರಸ್ಕರಿಸಿತ್ತು. ಈ ತೀರ್ಪು ಪಕ್ಷದ ಸಂಸತ್ ಸದಸ್ಯರ ಸದಸ್ಯತ್ವದ ಮೇಲೆ ಪರಿಣಾಮ ಬೀರುವುದಿಲ್ಲ. ಸಂಸತ್ನಲ್ಲಿ ಮೂವ್ ಫಾರ್ವರ್ಡ್ ಪಕ್ಷ 143 ಸದಸ್ಯರನ್ನು ಹೊಂದಿದ್ದು ಅವರು ಇತರ ಪಕ್ಷದ ಜತೆ ಗುರುತಿಸಿಕೊಳ್ಳಬಹುದು. ಆದರೆ ಪಕ್ಷದ ಹಾಲಿ ಮತ್ತು ಮಾಜಿ ಕಾರ್ಯ ನಿರ್ವಾಹಕರನ್ನು 10 ವರ್ಷ ರಾಜಕೀಯದಿಂದ ನಿಷೇಧಿಸಲಾಗಿದೆ. ಈ ಮಧ್ಯೆ, ಪ್ರಧಾನಿ ಶ್ರೆತ್ತಾ ಥಾವಿಸಿನ್ ಅವರನ್ನು ವಜಾಗೊಳಿಸಬೇಕೆಂದು ಕೋರಿ 40 ಮಾಜಿ ಸೆನೆಟರ್ಗಳು ಸಲ್ಲಿಸಿರುವ ಅರ್ಜಿಯನ್ನು ಸಾಂವಿಧಾನಿಕ ನ್ಯಾಯಾಲಯ ಮುಂದಿನ ವಾರ ವಿಚಾರಣೆ ನಡೆಸಲಿದೆ ಎಂದು ವರದಿಯಾಗಿದೆ.

# ಮಧ್ಯಪ್ರಾಚ್ಯಕ್ಕೆ ನೌಕಾಪಡೆಯ ಯುದ್ಧವಿಮಾನ ರವಾನಿಸಿದ ಅಮೆರಿಕ



**ವಾಶಿಂಗ್ಟನ್:** ಇರಾನ್ ಹಾಗೂ ಅದರ ಬೆಂಬಲಿತ ಗುಂಪುಗಳ ಸಂಭಾವ್ಯ ದಾಳಿಯಿಂದ ಇಸ್ರೇಲನ್ನು ರಕ್ಷಿಸುವ ಕ್ರಮವಾಗಿ ಮಧ್ಯಪ್ರಾಚ್ಯ ಸೇನಾನೆಲೆಗೆ ಹಡಗು ಆಧಾರಿತ ನೌಕಾಪಡೆಯ 12ಕ್ಕೂ ಅಧಿಕ ಯುದ್ಧ ವಿಮಾನಗಳನ್ನು ಅಮೆರಿಕ ರ'ವಾನಿಸಿರು'ವುದಾಗಿ ಅಮೆರಿಕದ ಅಧಿಕಾರಿಗಳು ಹೇಳಿದ್ದಾರೆ.

ಒಮಾನ್ ಕೊಲ್ಲಿಯಲ್ಲಿರುವ ಅಮೆರಿಕದ ಸಮರನೌಕೆ ಯುಎಸ್‌ಎಸ್ ಥಿಯೋಡರ್ ರೂಸ್ವೆಲ್ಟ್‌ನಿಂದ ಎಫ್‌ಎ-18 ಯುದ್ಧವಿಮಾನಗಳು ಹಾಗೂ ಇ-2ಡಿ ಹಾಕ್‌ಐ ಕಣ್ಗಾವಲು ವಿಮಾನ ಸೋಮವಾರ ಅಘೋಷಿತ ನೆಲೆಗೆ ಆಗಮಿಸಿದೆ . ಅಲಾಸ್ಕಾ ವಾಯುನೆಲೆಯಿಂದ 12 ಎಫ್-22 ಯುದ್ಧವಿಮಾನಗಳ ತುಕಡಿ ಮಧ್ಯಪ್ರಾಚ್ಯದತ್ತ ಹೊರಟಿರುವುದರಿಂದ ನೌಕಾಪಡೆಯ ಯುದ್ಧವಿಮಾನಗಳನ್ನು ತಾತ್ಕಾಲಿಕವಾಗಿ ನಿಯೋಜಿಸಿರುವುದಾಗಿ ವರದಿಯಾಗಿದೆ.

ಹಮಾಸ್ ಹಿರಿಯ ನಾಯಕ ಇಸ್ಮಾಯೀಲ್ ಹಾನಿಯೆಹ್ ಹತ್ಯೆಯ ಬಳಿಕ ಮಧ್ಯಪ್ರಾಚ್ಯದಲ್ಲಿ ಉದ್ವಿಗ್ನತೆ ಹೆಚ್ಚಿರುವುದರಿಂದ ವಲಯದಲ್ಲಿ ಮಿಲಿಟರಿ ಉಪಸ್ಥಿತಿಯನ್ನು ಹೆಚ್ಚಿಸುವಂತೆ ಅಮೆರಿಕದ ರಕ್ಷಣಾ ಕಾರ್ಯದರ್ಶಿ ಲಾಯ್ಡ್ ಆಸ್ಟಿನ್ ಆದೇಶಿಸಿದ್ದರು. ಈ ಮಧ್ಯೆ, ಇರಾಕ್ನಲ್ಲಿರುವ ಅಮೆರಿಕದ ಸೇನಾ ನೆಲೆಯ ಮೇಲೆ ಮಂಗಳವಾರ ನಡೆದ ರಾಕೆಟ್ ದಾಳಿಯಲ್ಲಿ ಅಮೆರಿಕದ ಐವರು ಸಿಬ್ಬಂದಿ ಹಾಗೂ ಇಬ್ಬರು ಗುತ್ತಿಗೆದಾರರು ಗಾಯಗೊಂಡಿರುವುದಾಗಿ ವರದಿಯಾಗಿದೆ.

# ಬಾಂಗ್ಲಾದೇಶದಲ್ಲಿ ಸಿಲುಕಿದ್ದ ಭಾರತೀಯರ ಏರ್ ಲಿಫ್ಟ್



**ಬಾಂಗ್ಲಾ:** ಏರ್ ಇಂಡಿಯಾ ಮತ್ತು ಇಂಡಿಗೊ ಢಾಕಾಗೆ ವಿಶೇಷ ವಿಮಾನಗಳನ್ನು ಕಳುಹಿಸಿದ್ದು, 400 ಹೆಚ್ಚು ಭಾರತೀಯರನ್ನು ಸುರಕ್ಷಿತವಾಗಿ ಏರ್ ಲಿಫ್ಟ್ ಮಾಡಲಾಗಿದೆ.

ಬಾಂಗ್ಲಾದೇಶದ ರಾಜಧಾನಿಯಲ್ಲಿ ಅಸ್ಥಿರ ಪರಿಸ್ಥಿತಿಯ ಮಧ್ಯೆ 400 ಕ್ಕೂ ಹೆಚ್ಚು ಜನರನ್ನು ಕರೆತಂದಿವೆ. ಏರ್ ಇಂಡಿಯಾದ ವಿಶೇಷ ವಿಮಾನವು ಬುಧವಾರ (ಆಗಸ್ಟ್ 7, 2024) ಢಾಕಾದಿಂದ ನವದೆಹಲಿಗೆ 6 ಶಿಶುಗಳು ಸೇರಿದಂತೆ 205 ಜನರನ್ನು ಕರೆತಂದಿದೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಬಾಂಗ್ಲಾದೇಶದ ಪ್ರಧಾನಿ ಶೇಖ್ ಹಸೀನಾ ಅವರು ವಾರಗಳ ಹಿಂಸಾತ್ಮಕ ಪ್ರತಿಭಟನೆಯ ನಂತರ ಹಠಾತ್ತನೆ ರಾಜೀನಾಮೆ ನೀಡಿ ದೇಶದಿಂದ ಪಲಾಯನ ಮಾಡಿದ ಒಂದು ದಿನದ ನಂತರ ಬಾಂಗ್ಲಾದೇಶದ ಅಧ್ಯಕ್ಷ ಮೊಹಮ್ಮದ್ ಶಹಾಬುದ್ದೀನ್ ಮಂಗಳವಾರ ಸಂಸತ್ತನ್ನು ವಿಸರ್ಜಿಸಿ ನೊಬೆಲ್ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನುಸ್ ಅವರನ್ನು ಮಧ್ಯಂತರ ಸರ್ಕಾರದ ಮುಖ್ಯಸ್ಥರನ್ನಾಗಿ ನೇಮಿಸಿದ್ದಾರೆ.

ಶೇಖ್ ಹಸೀನಾ ಸದ್ಯ ಭಾರತದಲ್ಲಿ ''ಸುರಕ್ಷಿತ ಸ್ಥಳದಲ್ಲಿ'' ಆಶ್ರಯ ಪಡೆದಿದ್ದಾರೆ, ಆದರೆ ಬಾಂಗ್ಲಾದೇಶದಲ್ಲಿ ಮಧ್ಯಂತರ ಸರ್ಕಾರ ಅಧಿಕಾರ ವಹಿಸಿಕೊಂಡಿದೆ ಮತ್ತು ನೊಬೆಲ್ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನುಸ್ ನೇತೃತ್ವ ವಹಿಸಿದ್ದಾರೆ.

# ಕರ್ನಾಟಕ, ಹಿಮಾಚಲ್, ಅಸ್ಸಾಂಗೆ ಹೆಚ್ಚಿನ ಪರಿಹಾರ ನೀಡಲಾಗಿದೆ- ಕೇಂದ್ರ



**ನವದೆಹಲಿ:** 2022-2024ರ ನಡುವಿನ ಎರಡು ವರ್ಷಗಳ ಅವಧಿಯಲ್ಲಿ ಕರ್ನಾಟಕ, ಹಿಮಾಚಲ ಪ್ರದೇಶ ಮತ್ತು ಅಸ್ಸಾಂ ರಾಜ್ಯಗಳಿಗೆ ರಾಷ್ಟ್ರೀಯ ವಿಪತ್ತು ನಿರ್ವಹಣಾ ನಿಧಿಯಿಂದ ಹೆಚ್ಚಿನ ಪ್ರಮಾಣದಲ್ಲಿ ಪರಿಹಾರದ ಹಣ ನೀಡಲಾಗಿದೆ ಎಂದು ಕೇಂದ್ರ ಸರ್ಕಾರ ಇಂದು ರಾಜ್ಯಸಭೆಗೆ ತಿಳಿಸಿದೆ.

2022-24ರಲ್ಲಿ ಪ್ರವಾಹ ಮತ್ತು ಭೂಕುಸಿತಕ್ಕಾಗಿ ಕರ್ನಾಟಕಕ್ಕೆ ಕೇಂದ್ರದ ಉನ್ನತ ಮಟ್ಟದ ಸಮಿತಿಯು 941 ಕೋಟಿ ರೂ., ಹಿಮಾಚಲ ಪ್ರದೇಶ ಮತ್ತು ಅಸ್ಸಾಂಗೆ ಕ್ರಮವಾಗಿ 873 ಕೋಟಿ ರೂ. ಮತ್ತು 594 ಕೋಟಿ ರೂ. ಗಳನ್ನು ಅನುಮೋದಿಸಲಾಗಿದೆ ಎಂದು ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಹೇಳಿದ್ದಾರೆ.

ಕಳೆದ ಎರಡು ವರ್ಷಗಳಲ್ಲಿ ಎನ್ಡಿಆರ್‌ಎಫ್ನಿಂದ ಕರ್ನಾಟಕಕ್ಕೆ 939 ಕೋಟಿ, ಹಿಮಾಚಲ ಪ್ರದೇಶಕ್ಕೆ 812 ಕೋಟಿ ಮತ್ತು ಅಸ್ಸಾಂಗೆ 160 ಕೋಟಿ ರೂಪಾಯಿ ಬಿಡುಗಡೆ ಮಾಡಲಾಗಿದೆ ಎಂದು ಅವರು ಲಿಖಿತ ಉತ್ತರದಲ್ಲಿ ತಿಳಿಸಿದ್ದಾರೆ. ಕಳೆದ ಎರಡು ವರ್ಷಗಳಲ್ಲಿ ತಮಿಳುನಾಡಿಗೆ ಪ್ರವಾಹ ಮತ್ತು ಚಂಡಮಾರುತಕ್ಕೆ 276 ಕೋಟಿ ರೂ., ಸಿಕ್ಕಿಂಗೆ ಪ್ರವಾಹ ಮತ್ತು ಭೂಕುಸಿತಕ್ಕೆ 267 ಕೋಟಿ ರೂ., ನಾಗಾಲ್ಯಾಂಡ್ಗೆ 68 ಕೋಟಿ ರೂ. ನೀಡಲಾಗಿದೆ ಎಂದು ರೈ ವಿವರಿಸಿದರು.

ಇದೇ ವೇಳೆ, ಮಣಿಪುರದಲ್ಲಿ ರೇಮಲ್ ಚಂಡಮಾರುತದ ಪರಿಣಾಮ ಮತ್ತು ಕೇರಳ ಭೂಕುಸಿತದ ಕುರಿತಂತೆ ಪರಿಶೀಲನೆ ನಡೆಸಿ ವರದಿ ನೀಡಲು ಕೇಂದ್ರ ತಂಡ ರಚಿಸಲಾಗಿದೆ ಎಂದೂ ಅವರ ತಿಳಿಸಿದ್ದಾರೆ. ಮಿಜೋರಾಂ ಮತ್ತು ಮಣಿಪುರವು ಎನ್ಡಿಆರ್‌ಎಫ್ನಿಂದ ಹೆಚ್ಚುವರಿ ಆರ್ಥಿಕ ಸಹಾಯಕ್ಕಾಗಿ ಕ್ರಮವಾಗಿ 216.73 ಕೋಟಿ ಮತ್ತು 711.43 ಕೋಟಿಗೆ ಮೆಮೊರಾಂಡಮ್‌ಗಳನ್ನು ಸಲ್ಲಿಸಿವೆ ಎಂದರು.

Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಪ್ರಭಾಸ್‌ಗೆ ತ್ರಿಷಾ ನಾಯಕಿ– ಅನಿಮಲ್ ನಿರ್ದೇಶಕ ಆಕ್ಷನ್ ಕಟ್

‘ಕಲ್ಕಿ 2898 ಎಡಿ’ ಸಿನಿಮಾದ ಯಶಸ್ಸಿನಲ್ಲಿರುವ ಪ್ರಭಾಸ್ ಇದೀಗ ’ಸ್ಪಿರಿಟ್’ ಸಿನಿಮಾಗೆ ಸಿದ್ಧತೆ ನಡೆಸುತ್ತಿದ್ದಾರೆ. ಇದರ ನಡುವೆ ಈ ಸಿನಿಮಾ ಬಗ್ಗೆ ಲೇಟೆಸ್ಟ್ ಅಪ್‌ಡೇಟ್‌ವೊಂದು ಸಿಕ್ಕಿದೆ. ಈ ಚಿತ್ರದಲ್ಲಿ ಡಾರ್ಲಿಂಗ್ ಪ್ರಭಾಸ್ ಜೊತೆ ತ್ರಿಷಾ ರೊಮ್ಯಾನ್ಸ್ ಮಾಡಲಿದ್ದಾರೆ.

ಕಳೆದ 20 ವರ್ಷಗಳಿಂದ ಚಿತ್ರರಂಗದಲ್ಲಿ ಆಕ್ಟಿವ್ ಇರುವ ನಟಿ ತ್ರಿಷಾ ಇಂದಿಗೂ ಬೇಡಿಕೆಯನ್ನು ಉಳಿಸಿಕೊಂಡಿದ್ದಾರೆ. ವಿಜಯ ದಳಪತಿ, ಮೆಗಾಸ್ಟಾರ್ ಚಿರಂಜೀವಿ, ಅಜಿತ್ ಕುಮಾರ್‌ಗೆ ಪ್ರಸ್ತುತ ನಾಯಕಿಯಾಗಿ ಸದ್ದು ಮಾಡುತ್ತಿರುವ ತ್ರಿಷಾ ಇದೀಗ ಪ್ರಭಾಸ್ ಸಿನಿಮಾಗೆ ಎಂಟ್ರಿ ಕೊಟ್ಟಿದ್ದಾರೆ.

ತ್ರಿಷಾರನ್ನು ಈಗಾಗಲೇ ಅನಿಮಲ್ ನಿರ್ದೇಶಕ ಸಂದೀಪ್ ರೆಡ್ಡಿ ವಂಗಾ ಭೇಟಿಯಾಗಿ ಸಿನಿಮಾದ ಕಥೆ ಹೇಳಿದ್ದಾರೆ. ಸಿನಿಮಾ ಕುರಿತು ಮಾತುಕತೆಯಾಗಿದ್ದು, ಸದ್ಯದಲ್ಲೇ ಚಿತ್ರತಂಡ ಈ ಕುರಿತು ಘೋಷಣೆ ಮಾಡಬೇಕಿದೆ. ಸದ್ಯ ’ಸ್ಪಿರಿಟ್’ ಸಿನಿಮಾದ ಪ್ರೀ ಪ್ರೊಡಕ್ಷನ್ ಕೆಲಸಗಳು ನಡೆಯುತ್ತಿದೆ.

ಪ್ರಭಾಸ್ ಮತ್ತು ತ್ರಿಷಾ ಇಬ್ಬರೂ ಬೇರೆ ಬೇರೆ ಪ್ರಾಜೆಕ್ಟ್‌ಗಳಲ್ಲಿ ಬ್ಯುಸಿಯಾಗಿದ್ದಾರೆ. ದಿ ರಾಜಾ ಸಾಬ್ ಸಿನಿಮಾದ ಬಳಿಕ ಸಂದೀಪ್ ರೆಡ್ಡಿ ವಂಗಾ ಜೊತೆ ಚಿತ್ರತಂಡ ಸೇರಿಕೊಳ್ಳಲಿದ್ದಾರೆ ಪ್ರಭಾಸ್. ಸದ್ಯ ಈ ಚಿತ್ರದ ಅಪ್‌ಡೇಟ್ ಕೇಳಿ ಅಭಿಮಾನಿಗಳು ಥ್ರಿಲ್ ಆಗಿದ್ದಾರೆ.



# ವಿಕ್ರಮ್ ಭೇಟಿಯಾದ ಡಿವೈನ್ ಸ್ಟಾರ್





ಡಿವೈನ್ ಸ್ಟಾರ್ ರಿಷಬ್ ಶೆಟ್ಟಿ ಅವರು ಕಾಲಿವುಡ್ ಸ್ಟಾರ್ ನಟ ಚಿಯಾನ್ ವಿಕ್ರಮ್‌ರನ್ನು ಭೇಟಿಯಾಗಿದ್ದಾರೆ. 24 ವರ್ಷಗಳ ಕಾಯುವಿಕೆಯ ನಂತರ ವಿಕ್ರಮ್ ಅವರನ್ನು ಭೇಟಿಯಾದೆ ಎಂದು ಸೋಷಿಯಲ್ ಮೀಡಿಯಾದಲ್ಲಿ ಫೋಟೋ ಹಂಚಿಕೊಂಡು ರಿಷಬ್ ಸಂಭ್ರಮಿಸಿದ್ದಾರೆ.



ನಟನಾಗುವಾಗ ನನ್ನ ಪ್ರಯಾಣದಲ್ಲಿ, ವಿಕ್ರಮ್ ಸರ್ ಯಾವಾಗಲೂ ನನಗೆ ಸ್ಫೂರ್ತಿಯಾಗಿದ್ದರು. 24 ವರ್ಷಗಳ ಸುದೀರ್ಘ ಕಾಯುವಿಕೆಯ ನಂತರ ವಿಕ್ರಮ್ ಅವರನ್ನು ಭೇಟಿಯಾದೆ. ಹೀಗಾಗಿ ಭೂಮಿಯ ಮೇಲಿನ ಅದೃಷ್ಟಶಾಲಿ ವ್ಯಕ್ತಿ ಎಂದು ಭಾವಿಸುತ್ತೇನೆ. ನನ್ನಂತಹ ನಟರನ್ನು ಪ್ರೇರೇಪಿಸಿದ್ದಕ್ಕಾಗಿ ಧನ್ಯವಾದಗಳು, ‘ತಂಗಲಾನ್’ ಸಿನಿಮಾಗೆ ಶುಭ ಹಾರೈಸುತ್ತೇನೆ ಎಂದು ರಿಷಬ್ ಶೆಟ್ಟಿ ಬರೆದುಕೊಂಡಿದ್ದಾರೆ.

ಅಂದಹಾಗೆ, ವಿಕ್ರಮ್ ನಟನೆಯ ‘ತಂಗಲಾನ್’ ಚಿತ್ರ ಇದೇ ಆ.15ರಂದು ರಿಲೀಸ್‌ಗೆ ಸಿದ್ಧವಾಗಿದೆ. ಹಾಗಾಗಿ ಪ್ರಚಾರಕ್ಕಾಗಿ ಬೆಂಗಳೂರಿಗೆ ವಿಕ್ರಮ್ ಭೇಟಿ ನೀಡಿದ್ದರು. ಇದೀಗ ಮುಂಬೈ ಮತ್ತು ಕೊಚ್ಚಿಗೆ ಚಿತ್ರತಂಡ ತೆರಳಲಿದೆ. ಇನ್ನೂ ಕುಂದಾಪುರದಲ್ಲಿ ‘ಕಾಂತಾರ ಪಾರ್ಟ್ 1’ ಸಿನಿಮಾ ಚಿತ್ರೀಕರಣ ಭರದಿಂದ ನಡೆಯುತ್ತಿದೆ. ಇದೇ ವರ್ಷ ಡಿಸೆಂಬರ್‌ನಲ್ಲಿ ಸಿನಿಮಾ ಬಿಡುಗಡೆಯಾಗಲಿದೆ.

# ಗೋವಾದಲ್ಲಿ ಕೊಡೆ ಹಿಡಿದು ನಿಂತ ‘ಬಿಗ್ ಬಾಸ್’ ಖ್ಯಾತಿಯ ಸೋನು





‘ಬಿಗ್ ಬಾಸ್’ ಬೆಡಗಿ ಸೋನು ಗೌಡ ಗೋವಾಗೆ ತೆರಳಿದ್ದಾರೆ. ಮಳೆಯಲ್ಲಿ ಕೊಡೆ ಹಿಡಿದು ಸಖತ್ ಹಾಟ್ ಆಗಿ ಸೋನು ಗೌಡ ಪೋಸ್ ನೀಡಿದ್ದಾರೆ. ಈ ಫೋಟೋಗಳನ್ನು ನಟಿ ಸೋಷಿಯಲ್ ಮೀಡಿಯಾದಲ್ಲಿ ಶೇರ್ ಮಾಡಿದ್ದಾರೆ.

ಸದಾ ಒಂದಲ್ಲಾ ಒಂದು ಸುದ್ದಿಯ ಮೂಲಕ ಸೋಷಿಯಲ್ ಮೀಡಿಯಾದಲ್ಲಿ ಸದ್ದು ಮಾಡುವ ನಟಿ ಸೋನು ಈಗ ಗೋವಾ ವೆಕೇಷನ್‌ನಲ್ಲಿ ಬ್ಯುಸಿಯಾಗಿದ್ದಾರೆ. ತುಂಡು ಬಟ್ಟೆ ಧರಿಸಿ ನಟಿ ಸಖತ್ ಗ್ಲ್ಯಾಮರಸ್ ಆಗಿ ಕಾಣಿಸಿಕೊಂಡಿದ್ದಾರೆ.

ಕಪ್ಪು ಕಲರ್ ಟೀ ಶರ್ಟ್‌ಗೆ ನೀಲಿ ಬಣ್ಣದ ಚಿಕ್ಕದಾದ ಜಿನ್ಸ್ ಚಡ್ಡಿಯನ್ನು ಸೋನು ಧರಿಸಿದ್ದಾರೆ. ನಟಿಯ ಲುಕ್‌ಗೆ ಬಗೆ ಬಗೆಯ ಕಾಮೆಂಟ್‌ಗಳು ಬರುತ್ತಿವೆ. ಚಡ್ಡಿ ಸಣ್ಣದಾಯ್ತು ಎಂದು ನಟಿಯ ಕಾಲೆಳೆದಿದ್ದಾರೆ.

ಇನ್ನೂ ಮಾರ್ಚ್ 22ರಂದು ಅಕ್ರಮವಾಗಿ ಮಗುವೊಂದನ್ನು ದತ್ತು ಪಡೆದ ವಿಚಾರವಾಗಿ 11 ದಿನಗಳ ಕಾಲ ನಟಿ ಸೋನು ಬಂಧನದಲ್ಲಿದ್ದರು. ಆ ನಂತರ ಬಿಡುಗಡೆಯಾದರು. ಅಂದಹಾಗೆ, ‘ಕ್ಯಾಡ್ಬರೀಸ್’ ಸಿನಿಮಾದಲ್ಲಿ ಸೋನು ಶ್ರೀನಿವಾಸ್ ಗೌಡ ಕೂಡ ಕಾಣಿಸಿಕೊಂಡಿದ್ದಾರೆ. ಐಟಂ ಹಾಡಿಗೆ ನಟಿ ಹೆಜ್ಜೆ ಹಾಕಿದ್ದಾರೆ. ಧರ್ಮ ಕೀರ್ತಿರಾಜ್, ಅದ್ವಿತಿ ಶೆಟ್ಟಿ ನಟನೆಯ ಸಿನಿಮಾ ಇದಾಗಿದೆ. ಈ ಚಿತ್ರದ ರಿಲೀಸ್‌ಗೆ ಸೋನು ಎದುರು ನೋಡ್ತಿದ್ದಾರೆ.

# 1 ಕೆಜಿ ಜಾಸ್ತಿ ಎತ್ತಿದ್ದರೆ ಪದಕ

## ಮೀರಾಬಾಯಿ ಚಾನುಗೆ ಕಂಚು ಜಸ್ಟ್ ಮಿಸ್!



ಟೋಕಿಯೋ ಒಲಿಂಪಿಕ್ಸ್‌ನಲ್ಲಿ ಬೆಳ್ಳಿ ಗೆದ್ದು ಪದಕದ ನಿರೀಕ್ಷೆ ಮೂಡಿಸಿದ್ದ ಭಾರತದ ಖ್ಯಾತ ವೇಟ್ ಲೀಫ್ಟರ್ ಮೀರಾಬಾಯಿ ಚಾನು ಅವರಿಗೆ ಕಂಚಿನ ಪದಕ ಜಸ್ಟ್ ಮಿಸ್ ಆಗಿದೆ. ಮಹಿಳೆಯರ 49 ಕೆಜಿ ವಿಭಾಗದಲ್ಲಿ ಒಟ್ಟು 199 ಕೆಜಿ (88+111) ಎತ್ತುವ ಮೂಲಕ ನಾಲ್ಕನೇ ಸ್ಥಾನ ಪಡೆದಿದರು.

ಸ್ನ್ಯಾಚ್‌ನ ಮೊದಲ ಯತ್ನದಲ್ಲಿ 85 ಕೆಜಿಯನ್ನು ಸುಲಭವಾಗಿ ಎತ್ತಿದ ಅವರು ಎರಡನೇ ಪ್ರಯತ್ನದಲ್ಲಿ 88 ಕೆ.ಜಿ ತೂಕವನ್ನು ಎತ್ತುವಲ್ಲಿ ವಿಫಲರಾದರು. ಮೂರನೇ ಪ್ರಯತ್ನದಲ್ಲಿ 88 ಕೆ.ಜಿಗಳ ಬೆಸ್ಟ್ ಲಿಫ್ಟ್ ಮೂಲಕ ಕಂಚಿನ ಪದಕದ ಸ್ಥಾನದಲ್ಲಿದ್ದರು.

ಕ್ಲೀನ್ ಆಂಡ್ ಜರ್ಕ್‌ನಲ್ಲಿ ಮೊದಲ ಯತ್ನದಲ್ಲಿ 111 ಕೆಜಿ ಎತ್ತಲು ಮೀರಾಬಾಯ ಮುಂದಾಗಿದ್ದರು. ಆದರೆ ಮೊದಲ ಪ್ರಯತ್ನದಲ್ಲಿ ವಿಫಲರಾಗಿದ್ದರು. ಎರಡನೇ ಪ್ರಯತ್ನದಲ್ಲಿ 111 ಕೆಜಿ ಎತ್ತುವಲ್ಲಿ ಸಫಲರಾದರು. ಆದರೆ ಪ್ರತಿಸ್ಪರ್ಧಿಗಳು ಹೆಚ್ಚಿನ ಭಾರ ಎತ್ತಿದ ಪರಿಣಾಮ ಮೀರಾಬಾಯಿ ಚಾನು ನಾಲ್ಕನೇ ಸ್ಥಾನ ಪಡೆದರು. ಅಂತಿಮವಾಗಿ ಕ್ಲೀನ್ ಮತ್ತು ಜರ್ಕ್ ನಲ್ಲಿ 111 ಹಾಗೂ ಸ್ನ್ಯಾಷ್ ನಲ್ಲಿ 88 ಕೆಜಿ ಸೇರಿಸಿ ಒಟ್ಟು 199 ಕೆ.ಜಿ ಲಿಫ್ಟ್ ಮಾಡಿದರು.

ಚೀನಾದ ವೇಟ್ ಲಿಫ್ಟರ್ ಜಿಹುಯಿ ಅವರು 206 ಕೆಜಿ ಎತ್ತಿ ನೂತನ ಒಲಿಂಪಿಕ್ಸ್ ದಾಖಲೆಯನ್ನು ಬರೆದರು. ಇವರು ಸ್ನ್ಯಾಷ್ ಒಟ್ಟು 89 ಎತ್ತಿದ್ದರು. ಅಲ್ಲದೆ ಇವರು ಕ್ಲೀನ್ ಆಂಡ್ ಜರ್ಕ್‌ನಲ್ಲಿ 117 ಕೆ.ಜಿ ಭಾರವನ್ನು ಎತ್ತಿದರು. ರೊಮೇನಿಯಾದ ವ್ಯಾಲಂಟಿನಾ 205 ಕೆಜಿ ಎತ್ತಿದರೆ ಥಾಯ್ಲೆಂಡಿನ ಸುರೋದ್ಚನಾ 200 ಕೆಜಿ ಎತ್ತಿ ಮೂರನೇ ಸ್ಥಾನ ಪಡೆದರು.

## ಅಮ್ಮಾ, ನನ್ನ ವಿರುದ್ಧ ಕುಸ್ತಿ ಗೆದ್ದಿದೆ, ನಾನು ಸೋತೆ ನನ್ನನ್ನು ಕ್ಷಮಿಸು

# ನಿವೃತ್ತಿ ಘೋಷಿಸಿದ ವಿನೇಶ್ ಫೋಗಟ್

ಒಲಿಂಪಿಕ್ಸ್‌ನಲ್ಲಿ ಪದಕದ ನಿರೀಕ್ಷೆಯಲ್ಲಿದ್ದಾಗಲೇ ಅನರ್ಹಗೊಂಡಿರುವ ಭಾರತೀಯ ಖ್ಯಾತ ಮಹಿಳಾ ಕುಸ್ತಿಪಟು ವಿನೇಶ್ ಫೋಗಟ್ ಬೇಸರದಿಂದಲೇ ಕುಸ್ತಿಗೆ ವಿದಾಯ ಹೇಳಿದ್ದಾರೆ.

ಎಕ್ಸ್‌ನಲ್ಲಿ ಭಾವುಕ ಸಾಲು ಬರೆದು ನಿವೃತ್ತಿ ಘೋಷಿಸಿದರು. ಅಮ್ಮಾ, ನನ್ನ ವಿರುದ್ಧ ಕುಸ್ತಿ ಗೆದ್ದಿದೆ, ನಾನು ಸೋತೆ, ಕ್ಷಮಿಸಿ. ನಿನ್ನ ಕನಸು, ನನ್ನ ಧೈರ್ಯ ಸಂಪೂರ್ಣ ಛಿದ್ರವಾಗಿದೆ, ಈಗ ಹೆಚ್ಚಿನ ಶಕ್ತಿ ಉಳಿದಿಲ್ಲ’ ಎಂದು ವಿನೇಶ್ ಫೋಗಟ್ ಬರೆದುಕೊಂಡಿದ್ದಾರೆ. ನಿಮ್ಮೆಲ್ಲರಿಗೂ ನಾನು ಸದಾ ಋಣಿಯಾಗಿರುತ್ತೇನೆ, ಕ್ಷಮಿಸಿ ಎಂದು ವಿನೇಶ್ ಫೋಗಟ್ ದೇಶದ ಜನತೆಯಲ್ಲಿ ಕೇಳಿಕೊಂಡಿದ್ದಾರೆ.

50 ಕೆಜಿ ಫ್ರಿಸ್ಟೈಲ್ ವಿಭಾಗದಲ್ಲಿ ಫೈನಲ್ ಪ್ರವೇಶಿಸಿದ್ದ ವಿನೇಶ್ ಫೋಗಟ್ ಈ ಬಾರಿ ಬಂಗಾರ ಗೆಲ್ಲಬಹುದು ಎಂದು ನಿರೀಕ್ಷೆ ಭಾರತೀಯರಿಗಿತ್ತು. ಪದಕ ಸುತ್ತಿನ ಪಂದ್ಯಕ್ಕೂ ಮುನ್ನ ದೇಹದ ತೂಕದಲ್ಲಿ ಕೇವಲ 100 ಗ್ರಾಂ ಅಧಿಕವಿದ್ದ ಕಾರಣದಿಂದ ಕುಸ್ತಿಪಟುವನ್ನು ಫೈನಲ್‌ನಿಂದ ಅನರ್ಹಗೊಳಿಸಲಾಯಿತು. ಇದಾದ ಒಂದು ದಿನದಲ್ಲೇ ವಿನೇಶ್ ಫೋಗಟ್ ನಿವೃತ್ತಿ ಘೋಷಣೆ ಮಾಡಿದ್ದಾರೆ.



## ಮುಡಾ ಹಗರಣದ ಇನ್ನಷ್ಟು ದಾಖಲೆ ಕೇಳಿದ ರಾಜ್ಯಪಾಲರು

# ತನಿಖೆಗೆ ಅನುಮತಿ ಖಚಿತ

**ಬೆಂಗಳೂರು:** ಮುಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಶನ್‌ಗೆ ರಾಜ್ಯಪಾಲರು ಅನುಮತಿ ನೀಡುವುದು ಬಹುತೇಕ ಖಚಿತವಾಗಿದ್ದು, ಮುಡಾ ಹಗರಣದ ಬಗ್ಗೆ ಇನ್ನಷ್ಟು ಮಾಹಿತಿಯನ್ನು ನೀಡುವಂತೆ ಅರ್ಜಿದಾರ ಟಿಜೆ ಅಬ್ರಹಾಂ ಅವರಿಗೆ ಸೂಚಿಸಿದ್ದಾರೆ.

ನಿನ್ನೆ ಈ ಕುರಿತು ಅಬ್ರಹಾಂ ಅವರನ್ನು ಕರೆದು ಮಾಹಿತಿ ಪಡೆದ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್, ಕ್ಯಾಬಿನೆಟ್ ನಿರ್ಣಯದ ಬಗ್ಗೆ ಮಾಹಿತಿ ಕೊಟ್ಟಿದ್ದಾರೆ. ಇದಕ್ಕೆ ಸಂಬಂಧಿಸಿದಂತೆ ಹೈಕೋರ್ಟ್ ಹಾಗೂ ಸುಪ್ರೀಂ ಕೋರ್ಟ್ ತೀರ್ಪುಗಳ ಮಾಹಿತಿ ಕೊಡುವಂತೆ ಸೂಚನೆ ನೀಡಿದ್ದಾರೆ. ಆ ಮೂಲಕ ಪ್ರಕರಣವನ್ನು ಗಟ್ಟಿಗೊಳಿಸಲು ಅಗತ್ಯವಾದ ಮಾಹಿತಿಗಳನ್ನು ಪಡೆಯಲು ಮುಂದಾಗಿದ್ದಾರೆ.

ಕ್ಯಾಬಿನೆಟ್ ರಾಜ್ಯಪಾಲರಿಗೆ ತನ್ನ ನಿರ್ಣಯವನ್ನು ಕಳಿಸುವುದರ ಜೊತೆಗೆ, ದೂರುದಾರರ ಚಾರಿತ್ರ್ಯವನ್ನೂ ಪ್ರಶ್ನೆ ಮಾಡಿತ್ತು. ಸರ್ಕಾರಿ ಅಧಿಕಾರಿಯನ್ನು ಒಂದು ಕೋಟಿ ರೂಪಾಯಿಗೆ ಬ್ಲಾಕ್‌ಮೇಲ್ ಮಾಡಿದ ಆರೋಪ ಅಬ್ರಹಾಂ ಮೇಲಿದೆ ಎಂದಿತ್ತು. ಈ ಕುರಿತು ಸಿಡಿಯನ್ನು ಕೂಡ ರಾಜ್ಯಪಾಲರಿಗೆ ರವಾನೆ ಮಾಡಿತ್ತು. ಈ ಆರೋಪದ ಸತ್ಯಾಸತ್ಯತೆಯ ಬಗ್ಗೆ ಮಾಹಿತಿ ನೀಡಿ ಎಂದು ಕೂಡ ರಾಜ್ಯಪಾಲರು ಅಬ್ರಹಾಂಗೆ ಸೂಚಿಸಿದ್ದಾರೆ.

ಹೀಗಾಗಿ ಈ ಬಗ್ಗೆ ಸಂಪೂರ್ಣ ಮಾಹಿತಿಯೊಂದಿಗೆ



ಮತ್ತೆ ರಾಜ್ಯಪಾಲರನ್ನು ಭೇಟಿ ಮಾಡಿ ದಾಖಲೆ ಕೊಡಲಿದ್ದೇನೆ ಎಂದು ದೂರುದಾರ ಅಬ್ರಹಾಂ ತಿಳಿಸಿದ್ದಾರೆ. ಸರ್ಕಾರದ ಆರೋಪಕ್ಕೆ ಪ್ರತಿಯಾಗಿ ದಾಖಲೆ ರೆಡಿ ಮಾಡಿಕೊಳ್ಳುತ್ತಿದ್ದು, ಮುಡಾ ಹಗರಣಕ್ಕೆ ಸಂಬಂಧಿಸಿದ ಇನ್ನಷ್ಟು ದಾಖಲೆ ಪತ್ರಗಳನ್ನು ಸಜ್ಜುಗೊಳಿಸಿಕೊಳ್ಳುತ್ತಿದ್ದಾರೆ.

ರಾಜ್ಯಪಾಲರ ನೋಟೀಸ್‌ಗೆ ಒಂದು ಸಾಲಿನ ನಿರ್ಣಯ ಕಳಿಸಿದ ರಾಜ್ಯ ಸರ್ಕಾರ, ಅದಕ್ಕೆ ಸಂಬಂಧಿಸಿದಂತೆ 70 ದಾಖಲೆಗಳನ್ನು ರಾಜ್ಯಪಾಲರಿಗೆ ರವಾನಿಸಿತ್ತು. 1990ರ ದಶಕದಿಂದಲೂ ಇಲ್ಲಿಯವರೆಗೂ ದಾಖಲೆ ನೀಡಿರುವ ಸರ್ಕಾರ, ಸಿದ್ದರಾಮಯ್ಯ ಪತ್ನಿಗೆ ಆಸ್ತಿ ವರ್ಗಾವಣೆ ಹಾಗೂ ಗಿಫ್ಟ್ ಡೀಡ್ ಬಗ್ಗೆ ದಾಖಲೆ ಹಾಗೂ ಸಾಕ್ಷಿ ಸಮೇತ ವಿವರಣೆ ನೀಡಿದೆ. ಹಾಗೂ ದೂರುದಾರ ಅಬ್ರಹಾಂ ಬಗ್ಗೆಯೂ ಮಾಹಿತಿ ನೀಡಿದೆ. ಈ ದಾಖಲೆಗಳನ್ನು ರಾಜ್ಯಪಾಲರು ಪರಿಶೀಲನೆ ಮಾಡುತ್ತಿದ್ದಾರೆ.

ಇತ್ತ ಸಿಎಂ ಸಿದ್ದರಾಮಯ್ಯ ಅವರ 10 ಜನರ ಕಾನೂನು ಟೀಮ್ ಫುಲ್ ಆಕ್ಟೀವ್ ಆಗಿದೆ. ರಾಜ್ಯಪಾಲರ ನಡೆ ಪ್ರಶ್ನೆ ಮಾಡಿ ಕಾನೂನು ಹೋರಾಟಕ್ಕೆ ಸಿದ್ಧತೆ ಮಾಡಿಕೊಳ್ಳಲಾಗುತ್ತಿದೆ. ಜನಪ್ರತಿನಿಧಿಗಳ ಹಾಗೂ ಲೋಕಾಯುಕ್ತ ಕೋರ್ಟ್‌ನಿಂದ ಸುಪ್ರೀಂ ಕೋರ್ಟ್‌ವರೆಗೂ ಹೋಗಲು ವಕೀಲರ ಟೀಮ್ ರೆಡಿಯಾಗಿದೆ. ಸಿಎಂ ಕಾನೂನು ಸಲಹೆಗಾರ ಪೊನ್ನಣ್ಣ ಅವರಿಂದಲೇ ಕಾನೂನು ಹೋರಾಟಕ್ಕೆ ಸಿದ್ಧತೆ ನಡೆಯುತ್ತಿದೆ.

ಒಂದೆಡೆ ಸಿಎಂ ರಾಜೀನಾಮೆಗೆ ಒತ್ತಾಯಿಸಿ ಬಿಜೆಪಿ ಜೆಡಿಎಸ್ ಪಾದಯಾತ್ರೆ ನಡೆಸುತ್ತಿದ್ದರೆ, ಮತ್ತೊಂದೆಡೆ ರಾಜ್ಯಪಾಲರಿಂದ ಕಾನೂನಾತ್ಮಕ ಅಂಶಗಳ ಕುರಿತು ಮೀಟಿಂಗ್ ನಡೆಸಲಾಗುತ್ತಿದೆ. ಈ ನಡುವೆ ಪ್ರತಿಪಕ್ಷಗಳ ವಿರುದ್ಧ ಸಮರ ಸಾರಲು ಮೆಗಾ ತಯಾರಿ ಮಾಡಿಕೊಲ್ಲುತ್ತಿರುವ ಕಾಂಗ್ರೆಸ್, ಆಗಸ್ಟ್ 9ರಂದು ಮೈಸೂರಿನಲ್ಲಿ ಬೃಹತ್ ಸಮಾವೇಶಕ್ಕೆ ತಯಾರಿ ಮಾಡಿಕೊಳ್ಳುತ್ತಿದೆ. ಇದಕ್ಕೆ ಸಚಿವರ ಹಾಜರಾತಿ ಕಡ್ಡಾಯ ಎಂದು ಎಐಸಿಸಿ ನಾಯಕರು ಹಾಗೂ ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದ್ದಾರೆ. ಬೃಹತ್ ಸಮಾವೇಶದ ಮೂಲಕ ಶಕ್ತಿ ಪ್ರದರ್ಶನಕ್ಕೆ ಪ್ಲಾನ್ ನಡೆದಿದ್ದು, ಬಿಜೆಪಿ ಕಾಲದ ಹಗರಣಗಳ ಕುರಿತು ಹೆಚ್ಚಿನದಾಗಿ ಪ್ರಸ್ತಾಪಿಸಿ ಆ ಮೂಲಕ ಪ್ರತಿಪಕ್ಷಗಳ ವಿರುದ್ಧ ರಣಕಹಳೆ ಮೊಳಗಿಸಲು ಸರ್ಕಾರ ಸಜ್ಜಾಗುತ್ತಿದೆ.

# ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಭಾಗಿ: ದಾಖಲೆ ಬಿಚ್ಚಿಟ್ಟ ಅಶೋಕ್

**ಮಂಡ್ಯ:** ಮೈಸೂರು ನಗರ ಅಭಿವೃದ್ಧಿ ಪ್ರಾಧಿಕಾರ (ಮುಡಾ) ನಿವೇಶ ಹಂಚಿಕೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಭಾಗಿಯಾಗಿದ್ದಾರೆ ಎಂದು ವಿಪಕ್ಷ ನಾಯಕ ಆರ್. ಅಶೋಕ್ ದಾಖಲೆ ಸಮೇತ ಆರೋಪ ಮಾಡಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮುಡಾದಲ್ಲಿ 14 ಸೈಟ್ (3.16 ಎಕರೆ) ಜಮೀನು ತೆಗೊಂಡಿದ್ದಾರೆ. ಇದು ನಿಂಗ ಎಂಬುವರಿಗೆ ಸೇರಿದ ಜಮೀನಾಗಿದೆ. ನಿಂಗ ಎಂಬುವರು 1935ರಲ್ಲಿ 1 ರೂಪಾಯಿಗೆ ಕೊಂಡುಕೊಂಡಿದ್ದರು. ಇದಾದ ನಂತರ ನಿಂಗ ಮೃತಪಟ್ಟರು. ನಿಂಗ ಅವರ ಪತ್ನಿ ನಿಂಗಮ್ಮ ಅವರು 1990ರಲ್ಲಿ ನಿಧನರಾದರು. ನಿಂಗ ಕುಟುಂಬಸ್ಥರ ವಂಶ ವಂಶದಲ್ಲಿ 27 ಜನರು ಇದ್ದಾರೆ. ಆದರೆ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ನಿಂಗಾ ಅವರ ಮೂವರು ಪುತ್ರರಲ್ಲಿ ದೇವರಾಜು ಎಂಬ ಓರ್ವ ಪುತ್ರನಿಂದ ಮಾತ್ರ ಸಹಿ ಹಾಕಿಸಿಕೊಂಡಿದ್ದಾರೆ ಎಂದು ತಿಳಿಸಿದರು.

ಆದರೆ, ಸುಪ್ರಿಂ ಕೋರ್ಟ್ ಆದೇಶದ ಪ್ರಕಾರ ಇದು ನಿಯಮ ಬಾಹಿರವಾಗಿದೆ. ಒಬ್ಬರ ಕೈಯಿಂದ ಸಹಿ ಹಾಕಿಸಿಕೊಂಡು ರಿಜಿಸ್ಟರ್ ಮಾಡಿಕೊಳ್ಳಲು ಆಗಲ್ಲ. ನಂತರ 1968ರಲ್ಲಿ ಸರ್ವೆ ನಂಬರ್ 464ರಲ್ಲಿನ ಇದೇ ಜಮೀನು ನಿಂಗಾ ಅವರ ಮತ್ತೋರ್ವ ಪುತ್ರ ಮೈಲಾರಯ್ಯ ಅವರ ಹೆಸರಿಗೆ ರಿಜಿಸ್ಟರ್ ಆಗುತ್ತದೆ. ನಂತರ 1990ರಲ್ಲಿ ಸರ್ವೆ ನಂಬರ್ 464 ಜಮೀನು ಸೇರಿದಂತೆ 462 ಎಕರೆ ಜಮೀನನ್ನು ದೇವನೂರು ಬಡವಾಣೆ ನಿರ್ಮಾಣಕ್ಕೆ ಮುಡಾ ಪ್ರಾಥಮಿಕ ಅಧಿಸೂಚನೆ ಹೊರಡಿಸುತ್ತದೆ. ನಂತರ ದೇವರಾಜು ಇದೇ ಜಮೀನಿಗೆ ಖಾತೆ ಮಾಡಿಸುವ ಉದ್ದೇಶದಿಂದ ತನ್ನ ಕುಟುಂಬಸ್ಥರಿಂದ ಖಾಲಿ ಪತ್ರಕ್ಕೆ ಸಹಿ ಮಾಡಿಸಿಕೊಳ್ಳುತ್ತಾರೆ.

ಆದರೆ, ಮುಡಾ 1998ರಲ್ಲಿ ಭೂಸ್ವಾದಿನ ಕೈಬಿಡುತ್ತದೆ. ಈ ವೇಳೆ ನಿಂಗ ಕುಟುಂಬಸ್ಥರು ಪರಿಹಾರ ತೆಗೆದುಕೊಂಡಿದ್ದಾರೆ. ಸಿದ್ದರಾಮಯ್ಯ ಉಪಮುಖ್ಯಮಂತ್ರಿ ಆಗಿದ್ದರು. ಸಿದ್ದರಾಮಯ್ಯ ನಿಯಮ ಬಾಹಿರವಾಗಿ ಭೂಸ್ವಾದಿನ ಮಾಡಿಕೊಂಡಿದ್ದಾರೆ. 2001ರಲ್ಲಿ ಬಡಾವಣೆ ಅಭಿವೃದ್ಧಿಗೆ 11.58 ಕೋಟಿ ಹಣ ಬಿಡುಗಡೆ ಆಯ್ತು. 2004ರಲ್ಲಿ 3.15 ಗುಂಟೆಯನ್ನು ಸಿದ್ದರಾಮಯ್ಯ ಅವರ ಬಾಮೈದ ಅಕ್ರಮವಾಗಿ ಕ್ರಯ ಮಾಡಿಕೊಂಡಿದ್ದಾರೆ.

ಬಡಾವಣೆ ಕೆಲಸ ನಡೆಯುತ್ತಿರುವ ವೇಳೆ 2005 ರಿಂದ ವ್ಯವಸಾಯ ಭೂಮಿಯಿಂದ ನಿವೇಶನದ ಭೂಮಿಯಾಗಿ ಪರಿವರ್ತನೆ ಆಗುತ್ತೆ. ಈ ವೇಳೆ ಜಿಲ್ಲಾಧಿಕಾರಿ, ತಹಶಿಲ್ದಾರ್ ಎಲ್ಲರೂ ಸ್ಥಳ ಪರಿಶೀಲನೆ ಮಾಡಿದ್ದಾರೆ. ಆದರೂ ಯಾವುದೆ ಕ್ರಮ ಕೈಗೊಂಡಿಲ್ಲ. 2005ರಲ್ಲಿ ಮೂಡಾ ಇಲ್ಲಿ ಯಾವುದೇ ಕಟ್ಟಡ ಕಟ್ಟುವಂತಿಲ್ಲ ಎಂದು ಆದೇಶ ಮಾಡುತ್ತದೆ.

2010ರಲ್ಲಿ ಸಿದ್ದರಾಮಯ್ಯ ಪತ್ನಿ ಪಾರ್ವತಿ ಅವರಿಗೆ ಅವರ ಅಣ್ಣ ಅರಿಶಿಣ ಕುಂಕುಮ ರೂಪದಲ್ಲಿ 3.16 ಎಕರೆ ಜಮೀನು ನೀಡುತ್ತಾರೆ. 2014ರಲ್ಲಿ ಪಾರ್ವತಿ ಅವರು ಮೂಡಾಗೆ ‘ನನಗೆ ಬಂದ ಜಮೀನಿನಲ್ಲಿ ನೀವು ಬಡಾವಣೆ ಮಾಡಿದ್ದೀರಿ, ಬದಲಿ ಜಾಗವನ್ನು ನನಗೆ ನೀಡಿ ಎಂದು ಪತ್ರ ಬರೆಯುತ್ತಾರೆ. 2014 ರಲ್ಲಿ ಸಿದ್ದರಾಮಯ್ಯ ಮುಖ್ಯಮಂತ್ರಿಯಾಗಿದ್ದರು, ಆಗ 50:50 ಅನುಮಾತದಲ್ಲಿ ಹಂಚಿಕೆ ಮಾಡಲಾಗುತ್ತದೆ ಎಂದು ನಿಯಮ ಜಾರಿಗೆ ತಂದರು. 2017ರಲ್ಲಿ ಮುಡಾದಲ್ಲಿ ಪಾರ್ವತಿ ಅವರ ಜಾಮೀನಿನ ವಿಚಾರ ಚರ್ಚೆಗೆ ಬರುತ್ತದೆ. ಆಗ 50:50 ಅನುಪಾತದಲ್ಲಿ ಬದಲಿ ನಿವೇಶನ ಕೊಡಲು ನಿರ್ಧಾರ ಮಾಡಲಾಗುತ್ತದೆ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com